14 August 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಭಗವಂತನ ಕೃಪೆ ಒಂದಿದ್ದರೆ, ಎಂತಹ ಕಂಟಕವನ್ನು ಕೂದಲೆಳೆಯಷ್ಟು ಅಂತರದಲ್ಲಿ ಪಾರಾಗಬಹುದು!

-ಸ್ನೇಹಾ ಆನಂದ್

info.varthaman@gmail.com



ಸ್ವಾತಂತ್ರ್ಯ ದಿನ: ಶಾಸಕರಿಂದ 4 ಲಕ್ಷ ಲಾಡು ವಿತರಣೆ — ಪುಟ ಸಂ. 2



108 ಕುಂಭಾಭಿಷೇಕದಲ್ಲಿ ಮುಳುಗಿದ ಮಹದೇಶ್ವರನ ನಾಡು — ಪುಟ ಸಂ. 3



ಕಾವೇರಿ ವಿವಾದ: ಚಾಮರಾಜನಗರದಲ್ಲಿ ವಕೀಲರ ಕಲಾಪ ಬಹಿಷ್ಕಾರ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 250 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಕೈಗಾರಿಕಾ ಪ್ರಗತಿ 6,252 ಕೋಟಿ ಹೂಡಿಕೆಗೆ ಅಸ್ತು

- ರಾಜ್ಯದಲ್ಲಿ 30 ಸಾವಿರ ಉದ್ಯೋಗ ಸೃಷ್ಟಿ
- ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್

**ಬೆಂಗಳೂರು:** ರಾಜ್ಯದಲ್ಲಿ ಕೈಗಾರಿಕಾ ಪ್ರಗತಿ ಮತ್ತು ಉದ್ಯೋಗ ಸೃಷ್ಟಿಗೆ ಭಾರಿ ಉತ್ತೇಜನ ಸಿಕ್ಕಿದೆ. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ 6,252.86 ಕೋಟಿ ರೂ. ಮೌಲ್ಯದ 83 ಕೈಗಾರಿಕಾ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು. ಇದರಿಂದ ರಾಜ್ಯಾದ್ಯಂತ 30,054ಕ್ಕೂ ಹೆಚ್ಚು ಜನರಿಗೆ ಉದ್ಯೋಗಾವಕಾಶ ಲಭಿಸಲಿವೆ.

ಅನುಮೋದನೆ ಪಡೆದ ಯೋಜನೆಗಳ ಪೈಕಿ 69 ಯೋಜನೆಗಳು ಬೆಂಗಳೂರಿನ ಹೊರಭಾಗದಲ್ಲಿ ಸ್ಥಾಪನೆಯಾಗಲಿವೆ. ಈ ಯೋಜನೆಗಳಿಂದ ರಾಜ್ಯಾದ್ಯಂತ 30,



054ಕ್ಕೂ ಹೆಚ್ಚು ಉದ್ಯೋಗಾವಕಾಶಗಳು ಸೃಷ್ಟಿಯಾಗುವ ನಿರೀಕ್ಷೆಯಿದೆ ಎಂದು ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

ರೂ.50 ಕೋಟಿಗೂ ಅಧಿಕ ಹೂಡಿಕೆಯ 24 ಯೋಜನೆಗಳು ಒಟ್ಟು ರೂ. 4,702.99 ಕೋಟಿ ಹೂಡಿಕೆ ತರಲಿವೆ. ಸುಮಾರು 25,170 ಉದ್ಯೋಗಗಳನ್ನು ಸೃಷ್ಟಿಸಲಿವೆ ಎಂದು ಹೇಳಿದರು.

ಇನ್ನು ರೂ.15 ಕೋಟಿಯಿಂದ ರೂ.50 ಕೋಟಿವರೆಗಿನ ಹೂಡಿಕೆಯ 57 ಯೋಜನೆಗಳಿಗೆ ಅನುಮೋದನೆ ದೊರೆತಿದೆ. ಈ ಮೂಲಕ ರೂ.1,291.87 ಕೋಟಿ ಹೂಡಿಕೆ ಬರಲಿದೆ. ಈ ಯೋಜನೆಗಳಿಂದ 4,884 ಉದ್ಯೋಗಗಳು ಸೃಷ್ಟಿಯಾಗುವ ನಿರೀಕ್ಷೆಯಿದೆ.

ಅನುಮೋದನೆ ಪಡೆದ ಯೋಜನೆಗಳು ವಿವಿಧ ಕ್ಷೇತ್ರಗಳನ್ನು ಒಳಗೊಂಡಿವೆ. ಸಂಯೋಜಿತ ಕೈಗಾರಿಕಾ ಪಾರ್ಕ್‌ಗಳು, ಏರೋಸ್ಪೇಸ್ ಮತ್ತು ರಕ್ಷಣಾ ಉತ್ಪಾದನೆ, ಆಹಾರ ಸಂಸ್ಕರಣೆ, ಮಾಹಿತಿ ತಂತ್ರಜ್ಞಾನ ಸೇವೆಗಳು ಹಾಗೂ ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಪ್ರಮುಖ ಹೂಡಿಕೆಗಳು ಬರಲಿವೆ. ಅನುಮೋದನೆ ಪಡೆದ ಪ್ರಮುಖ ಯೋಜನೆಗಳಲ್ಲಿ ಬೆಂಗಳೂರಿನ ಜಸ್ವಿನ್ ವೆಂಚರ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಯೋಜನೆಯೂ ಸೇರಿದೆ. ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಸಂಯೋಜಿತ ಕೈಗಾರಿಕಾ ಪಾರ್ಕ್ ಮತ್ತು ಮಿಶ್ರ ಬಳಕೆಯ ಟೌನ್‌ಶಿಪ್ ಅಭಿವೃದ್ಧಿಪಡಿಸಲು ಸಂಸ್ಥೆ ರೂ.475 ಕೋಟಿ ಹೂಡಿಕೆ ಮಾಡಲಿದೆ. ಈ ಯೋಜನೆಯಿಂದ 12,000 ಉದ್ಯೋಗಗಳು ಸೃಷ್ಟಿಯಾಗುವ ನಿರೀಕ್ಷೆಯಿದೆ ಎಂದು ಹೇಳಿದರು.

## 16ರಂದು ತಲಕಾವೇರಿಗೆ ಸಿಎಂ ಶಿವಕುಮಾರ್ ಪೂಜೆ

**ಮಡಿಕೇರಿ:** ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ಸಿಎಂ ಡಿ.ಕೆ ಶಿವಕುಮಾರ್ ಅವರು ಆಗಸ್ಟ್ 16ರಂದು ಕೊಡಗು ಜಿಲ್ಲೆಗೆ ಭೇಟಿ ನೀಡುವರು.



ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಭಾಗಮಂಡಲ ಮತ್ತು ತಲಕಾವೇರಿಯಲ್ಲಿ ವಿಶೇಷ ಪೂಜೆ ಸಲ್ಲಿಸುವರು. ಆಗಸ್ಟ್ 16ರಂದು ಬೆಳಗ್ಗೆ 11 ಗಂಟೆಗೆ ಭಾಗಮಂಡಲ ಹೆಲಿಪ್ಯಾಡ್‌ಗೆ ಆಗಮಿಸಿ ಭಾಗಮಂಡಲದ ಭಗಂಡೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸುವರು. ನಂತರ ತಲಕಾವೇರಿಗೆ ತೆರಳಿ ಕಾವೇರಿ ತಾಯಿಗೆ ವಿಶೇಷ ಪೂಜೆ ನೆರವೇರಿಸಲಿದ್ದಾರೆ.

ಮುಖ್ಯಮಂತ್ರಿಯಾದ ಬಳಿಕ ಪುಟ 2ಕ್ಕೆ

# ಬಂದ್‌ಗೆ ಸಿಗದ ಬಲ: ಪ್ರತಿಭಟನೆಗೆ ಸೀಮಿತ

## ಕಾವೇರಿ ಕೊಳ್ಳದ ಜಿಲ್ಲೆಗಳಲ್ಲೂ ವಾಟಾಳ್‌ಗೆ ಸಿಗದ ಬೆಂಬಲ

**ಬೆಂಗಳೂರು:** ತಮಿಳುನಾಡಿಗೆ ನೀರು ಹರಿಸುವಂತೆ ನೀಡಿರುವ ಆದೇಶ ವಿರೋಧಿಸಿ ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ಜನರ ಪ್ರತಿಕ್ರಿಯೆ ನೀರಸವಾಗಿದೆ. ಕಾವೇರಿ ಕೊಳ್ಳದ ಜಿಲ್ಲೆಗಳಲ್ಲಿಯೂ ಬಂದ್ ಬದಲಿಗೆ ಪ್ರತಿಭಟನೆಗೆ ಸೀಮಿತವಾಗಿತ್ತು.

ಬೆಂಗಳೂರು, ಮೈಸೂರು, ಮಂಡ್ಯ, ಹಾಸನ ಸೇರಿದಂತೆ ಎಲ್ಲಾ ಜಿಲ್ಲೆಗಳಲ್ಲಿ ಸರ್ಕಾರಿ ಕಚೇರಿ, ಶಾಲಾ–ಕಾಲೇಜು, ಬ್ಯಾಂಕ್, ಖಾಸಗಿ ವಹಿವಾಟು ಎಂದಿನಂತೆ ಕಾರ್ಯನಿರ್ವಹಿಸಿದವು. ಯಾವುದೇ ವ್ಯಾಪಾರ ವಹಿವಾಟು ಬಂದ್ ಆಗಿರಲಿಲ್ಲ. ಬಸ್‌ಗಳು ಸಹ ಎಂದಿನಂತೆ ಸಂಚರಿಸಿದವು.

ಕನ್ನಡ ಚಳುವಳಿಗಾರ ವಾಟಾಳ್ ನಾಗರಾಜ್ ನೀಡಿದ್ದ ಬಂದ್ ಈ ಮೂಲಕ ವಿಫಲವಾಗಿದೆ. ಯಾವುದೇ ಸಂಘಟನೆ ಬೆಂಬಲ ನೀಡದಿದ್ದರೂ ಹಠಕ್ಕೆ ಬಿದ್ದು ಬಂದ್ ಗೆ ಕರೆನೀಡಿದ್ದ ವಾಟಾಳ್ ಅವರಿಗೆ ಮುಖಭಂಗವಾದಂತಾಗಿದೆ.

ರಾಜಧಾನಿ ಬೆಂಗಳೂರಿನಲ್ಲಿಯೂ ಅತ್ಯಂತ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ.ನಗರದಲ್ಲಿ ವಾಹನ ಸಂಚಾರ ಮತ್ತು ಸಾರ್ವಜನಿಕ ಜನಜೀವನ ಎಂದಿನಂತೆ ನಡೆಯಿತು. ನಗರದಾದ್ಯಂತ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಪುಟ 2ಕ್ಕೆ





### ತ.ನಾಡಿಗೆ ಬಸ್ ಸಂಚಾರ

ಕರ್ನಾಟಕ ಬಂದ್ ಹಿನ್ನೆಲೆ ತಮಿಳುನಾಡಿನಿಂದ ಬೆಂಗಳೂರಿಗೆ ಬರುವ ಹಾಗೂ ಇಲ್ಲಿಂದ ತಮಿಳುನಾಡಿಗೆ ತೆರಳುವ ಎಲ್ಲಾ ಬಸ್‌ಗಳ ಸಂಚಾರ ಸ್ಥಗಿತವಾಗಿತ್ತು. ಬೆಳಗ್ಗೆ ಕೆಲ ಸಮಯದ ನಂತರ ತಾತ್ಕಾಲಿಕ ತಡೆಯನ್ನು ತೆರವುಗೊಳಿಸಿ ಬಸ್ ಸಂಚಾರ ನಡೆಯಿತು. ಬೆಂಗಳೂರಿನಲ್ಲಿ ಯಾವುದೇ ಬಂದ್ ವಾತಾವರಣ ಇಲ್ಲದ ಹಿನ್ನೆಲೆಯಲ್ಲಿ ತ.ನಾಡು ಬಸ್‌ಗಳ ಸಂಚಾರಕ್ಕೆ ಅನುಮತಿ ನೀಡಲಾಯಿತು.

### ವಾಟಾಳ್ ಬಂಧನ

**ಬೆಂಗಳೂರು:** ಕರ್ನಾಟಕ ಬಂದ್‌ಗೆ ಕರೆ ಕೊಟ್ಟಿದ್ದ ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರನ್ನು ಪೊಲೀಸರು ಗುರುವಾರ ಬೆಳಗ್ಗೆ ವಶಕ್ಕೆ ಪಡೆದರು. ನಗರದ ಡಾಲರ್ಸ್ ಕಾಲೋನಿಯ ಅವರ ನಿವಾಸದ ಬಳಿ ಪೊಲೀಸರು ವಶಕ್ಕೆ ಪಡೆದರು.

ಪುರಭವನದಿಂದ ಹಮ್ಮಿಕೊಂಡಿದ್ದ ಪ್ರತಿಭಟನಾ ಮೆರವಣಿಗೆಗೆ ಮುನ್ನವೇ ವಾಟಾಳ್ ಅವರನ್ನು ಬಂಧಿಸಲಾಯಿತು. ಪುಟ 2ಕ್ಕೆ



## ಸ್ಪೀಕರ್, ಪರಿಷತ್ ಸಭಾಪತಿ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ

**ಬೆಂಗಳೂರು:** ರಾಜ್ಯ ವಿಧಾನಸಭೆ ಸಭಾಧ್ಯಕ್ಷ ಮತ್ತು ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಆಗಸ್ಟ್ 14ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್ ಅಭ್ಯರ್ಥಿಗಳು ಗುರುವಾರ ನಾಮಪತ್ರ ಸಲ್ಲಿಸಿದರು.

ಸ್ಪೀಕರ್ ಸ್ಥಾನಕ್ಕೆ ಜಿ.ಎಸ್.ಪಾಟೀಲ ಅವರು ವಿಧಾನಸಭೆ ಕಾರ್ಯದರ್ಶಿಗೆ ನಾಮಪತ್ರ ಸಲ್ಲಿಸಿದರು. ವಿಧಾನ ಪರಿಷತ್ತಿನ ಸಭಾಪತಿ ಅಭ್ಯರ್ಥಿಯಾಗಿ ಸಲೀಂ ಅಹ್ಮದ್ ಅವರು ವಿಧಾನ ಪರಿಷತ್ ಕಾರ್ಯದರ್ಶಿಗೆ ನಾಮಪತ್ರ ಸಲ್ಲಿಸಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಸಚಿವರು ಉಪಸ್ಥಿತರಿದ್ದರು

ಸ್ಪೀಕರ್ ಆಗಿದ್ದ ಯು.ಟಿ. ಖಾದರ್ ಸಚಿವರಾದ ಬಳಿಕ ಸ್ಥಾನ ತೆರವಾಗಿತ್ತು. ಹಂಗಾಮಿ ಸಭಾಧ್ಯಕ್ಷರಾಗಿ ಕಾಂಗ್ರೆಸ್‌ನ ಟಿ.ಬಿ.ಜಯಚಂದ್ರ ಕಾರ್ಯನಿರ್ವಹಿಸಲಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ರಾಜೀನಾಮೆ ನೀಡಿದ ನಂತರ, ಕಾಂಗ್ರೆಸ್‌ನ ಪುಟ್ಟಣ್ಣ ಅವರನ್ನು ಹಂಗಾಮಿ ಸಭಾಪತಿಯಾಗಿ ನೇಮಿಸಲಾಗಿದೆ.

ಸಭಾಧ್ಯಕ್ಷರಾಗಿ ರೋಣ ಕ್ಷೇತ್ರದ ಶಾಸಕ ಜಿ.ಎಸ್.ಪಾಟೀಲ ಹಾಗೂ ಸಭಾಪತಿ ಸ್ಥಾನಕ್ಕೆ ಸಲೀಂ ಅಹಮದ್ ಅವರನ್ನು ಅಧಿಕೃತ ಅಭ್ಯರ್ಥಿಯಾಗಿ ಕಾಂಗ್ರೆಸ್ ಈಗಾಗಲೇ ಘೋಷಿಸಿದೆ.

## ಬಂದ್ ಹಿಂಪಡೆದ ಎಲ್ಲಾ ಸಂಘಟನೆಗಳಿಗೆ ಧನ್ಯವಾದ

**ಬೆಂಗಳೂರು:** ರಾಜ್ಯದ ಹಿತಕ್ಕಾಗಿ ಬಂದ್ ವಾಪಸ್ ಪಡೆದ ಎಲ್ಲಾ ಸಂಘಟನೆಗಳಿಗೆ ಧನ್ಯವಾದ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ಗುರುವಾರ ಮಾಧ್ಯಮಗಳಿಗೆ ಸಿಎಂ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು. ಕನ್ನಡಪರ ಸಂಘಟನೆಗಳ ಮುಖಂಡರು ನನ್ನನ್ನು ಭೇಟಿ ಮಾಡಿ ಬಂದ್ ಹಿಂಪಡೆದಿರುವ ಬಗ್ಗೆ ಮಾಹಿತಿ ನೀಡಿದರು. ರಾಜ್ಯದ ಜನರ ಹಿತ ಹಾಗೂ ರೈತರ ಕಲ್ಯಾಣಕ್ಕೆ ಸಂಬಂಧಿಸಿದಂತೆ ಅವರು ಕೆಲವು ಬೇಡಿಕೆ ಇಟ್ಟಿದ್ದಾರೆ. ಅವರ ಬೇಡಿಕೆಗಳನ್ನು ಪರಿಶೀಲನೆ ಮಾಡುವೆ ಎಂದು ತಿಳಿಸಿದರು.

| ಜಲಾಶಯಗಳ ನೀರಿನ ಮಟ್ಟ | |
|---|---|
| **ಕೆ ಆರ್ ಎಸ್** | |
| ಗರಿಷ್ಠ ಮಟ್ಟ | 124.80 ಅಡಿ |
| ಇಂದಿನ ಮಟ್ಟ | 109.80 ಅಡಿ |
| ಒಳಹರಿವು | 4185 ಕ್ಯುಸೆಕ್ |
| ಹೊರ ಹರಿವು | 785 ಕ್ಯುಸೆಕ್ |
| **ಕಬಿನಿ ಜಲಾಶಯ** | |
| ಗರಿಷ್ಠ ಮಟ್ಟ | 2284 ಅಡಿ |
| ಇಂದಿನ ಮಟ್ಟ | 2282.36 ಅಡಿ |
| ಒಳಹರಿವು | 8448 ಕ್ಯುಸೆಕ್ |
| ಹೊರ ಹರಿವು | 10000 ಕ್ಯುಸೆಕ್ |
| **ಹಾರಂಗಿ ಜಲಾಶಯ** | |
| ಗರಿಷ್ಠ ಮಟ್ಟ | 2859 ಅಡಿ |
| ಇಂದಿನ ಮಟ್ಟ | 2858.07 ಅಡಿ |
| ಒಳಹರಿವು | 4940 ಕ್ಯುಸೆಕ್ |
| ಹೊರ ಹರಿವು | 4000 ಕ್ಯುಸೆಕ್ |
| **ಹೇಮಾವತಿ ಜಲಾಶಯ** | |
| ಗರಿಷ್ಠ ಮಟ್ಟ | 2922 ಅಡಿ |
| ಇಂದಿನ ಮಟ್ಟ. | 2916.03 ಅಡಿ |
| ಒಳಹರಿವು | 3820 ಕ್ಯುಸೆಕ್ |
| ಹೊರಹರಿವು | 500 ಕ್ಯುಸೆಕ್ |

## ಪ್ರಜ್ವಲ್ ಬಳಿ ಮೊಬೈಲ್: ತನಿಖಾ ತಂಡ ರಚನೆ

**ಬೆಂಗಳೂರು:** ಪರಪ್ಪನ ಅಗ್ರಹಾರ ಜೈಲಿನ ಮೇಲೆ ಸಿಸಿಬಿ ದಾಳಿ ವೇಳೆ ಪ್ರಜ್ವಲ್ ರೇವಣ್ಣ ಬ್ಯಾರಕ್ ನಲ್ಲಿ ಮೊಬೈಲ್ ಮತ್ತು ಪೆನ್ ಡ್ರೈವ್ ಪತ್ತೆಯಾದ ಪ್ರಕರಣ ಸಂಬಂಧ ತನಿಖೆಗೆ ಕಾರಾಗೃಹ ಮತ್ತು ಸುಧಾರಣೆ ಇಲಾಖೆ ಡಿಐಜಿ ಜಿನೇಂದ್ರ ಖನಗಾವಿ ನೇತೃತ್ವದಲ್ಲಿ ತಂಡ ರಚನೆ ಮಾಡಲಾಗಿದೆ.

ಪರಪ್ಪನ ಅಗ್ರಹಾರ ಜೈಲಿನ ಬ್ಯಾರಕ್ ನಲ್ಲಿ ಮೊಬೈಲ್ ಹೇಗೆ ಬಂತು ಎಂಬ ಬಗ್ಗೆ ಎಲ್ಲಾ ಆಯಾಮದಲ್ಲೂ ತನಿಖೆ ನಡೆಸಿ ವರದಿ ಸಲ್ಲಿಸಲು ಕಾರಾಗೃಹ ಡಿಜಿಪಿ ಅಲೋಕ್ ಕುಮಾರ್ ಸೂಚನೆ ನೀಡಿದ್ದಾರೆ.

ಪರಪ್ಪನ ಅಗ್ರಹಾರ ಜೈಲಿನಲ್ಲಿ ಜಾಮರ್ ಅಳವಡಿಸಲಾಗಿದೆ. ಜೈಲಿನ ಸುತ್ತಮುತ್ತ ಸ್ಥಳೀಯರಿಗೆ ಟವರ್ ಸಿಗದೆ ನಿತ್ಯ ಪರದಾಡುತ್ತಾರೆ. ಹೀಗಿರುವಾಗ ಜೈಲಿನ ಒಳಗೆ ಸಿಮ್ ಬಳಕೆಯಾಗುತ್ತಿರುವ ಬಗ್ಗೆಯೂ ತನಿಖೆ ನಡೆಸುವಂತೆ ಡಿಜಿಪಿ



ಅಲೋಕ್ ಕುಮಾರ್ ಸೂಚಿಸಿದ್ದಾರೆ.

ಪ್ರಜ್ವಲ್ ರೇವಣ್ಣನಿಗೆ ಈ ಮೊದಲೇ ಎಚ್ಚರಿಕೆ ನೀಡಲಾಗಿತ್ತು. ನಟ ದರ್ಶನ್ ಸೆಲ್ ನಲ್ಲಿಯೂ ಹುಡುಕಾಟ ನಡೆಸಿದ್ದು ಯಾವುದೇ ಸಾಧನ ಪತ್ತೆಯಾಗಿಲ್ಲ ಎಂದು ಅವರು ತಿಳಿಸಿದರು.

## ಗೌರವ ಇದ್ದರೆ ಸಚಿವ ನಾಗೇಂದ್ರ ರಾಜೀನಾಮೆ ನೀಡಲಿ: ವಿಜಯೇಂದ್ರ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಹಣ ವರ್ಗಾವಣೆ ಹಗರಣದ ಆರೋಪಿ ಬಿ. ನಾಗೇಂದ್ರ ಅವರಿಗೆ ವಾಲ್ಮೀಕಿ ಸಮಾಜದ ಬಗ್ಗೆ ಕಿಂಚಿತ್ತಾದರೂ ಗೌರವ ಇದ್ದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು.

ವಿಧಾನಸೌಧದಲ್ಲಿ ಗುರುವಾರ ಮಾತನಾಡಿದ ಅವರು, ಬಿಹಾರದ ಮುಖ್ಯಮಂತ್ರಿ ಜಾಮೀನಿನಲ್ಲಿದ್ದರೆ ಕಾಂಗ್ರೆಸ್ಸಿನವರು ಅಲ್ಲಿ ಹೋರಾಟ ಮಾಡಲಿ. ಪ್ರಶ್ನೆಯನ್ನು ಎತ್ತಲಿ ಎಂದು ತಿಳಿಸಿದರು.

ಬಿಜೆಪಿಗೆ ನಾಗೇಂದ್ರ ಅವರ ಬಗ್ಗೆ ದ್ವೇಷ ಇಲ್ಲ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ ತಾವು ರಾಜೀನಾಮೆ ಕೊಡುವ ಪ್ರಸಂಗ ಯಾಕೆ ನಿರ್ಮಾಣವಾಯಿತೆಂದು ನಾಗೇಂದ್ರ ಅವರೇ ತಿಳಿಸಬೇಕು. ವಾಲ್ಮೀಕಿ ಅಭಿವೃದ್ಧಿ ನಿಗಮದ 185 ಕೋಟಿ ರೂ. ಲೂಟಿ ಹಗರಣದಲ್ಲಿ ನಾಗೇಂದ್ರ ಅವರು ಆರೋಪಿ. ಆರೋಪಿ ಸ್ಥಾನದಿಂದ ಅವರಿನ್ನೂ ಹೊರಬಂದಿಲ್ಲ. ನಿರಪರಾಧಿ ಎಂದು ಸಾಬೀತಾದ ಬಳಿಕ ಅವರು ಸಚಿವರಾದರೆ ನಮ್ಮದೇನೂ ಅಭ್ಯಂತರವಿಲ್ಲ ಎಂದು ತಿಳಿಸಿದರು.

ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡಿದ್ದು, ಆ ಕುಟುಂಬಕ್ಕೆ ಗ್ರಾಚ್ಯುಟಿ, ಪುಟ 2ಕ್ಕೆ



## ಹೊಸಮಠ ಪೀಠಾಧಿಪತಿ ಚಿದಾನಂದ ಶ್ರೀಗಳು ಶಿವೈಕ್ಯ

**ಮೈಸೂರು:** ನಗರದ ಹೊಸಮಠದ ಪೀಠಾಧಿಪತಿ ಶ್ರೀ ಚಿದಾನಂದ ಸ್ವಾಮೀಜಿ (76) ಅವರು ಗುರುವಾರ ಹೃದಯಾಘಾತದಿಂದ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ನಿಧನರಾದರು.

ಧಾರ್ಮಿಕ ಚಟುವಟಿಕೆಗಳ ಜೊತೆಗೆ ಶೈಕ್ಷಣಿಕವಾಗಿಯೂ ಹಲವು ಸಮಾಜ ಮುಖಿ ಕಾರ್ಯ ಮಾಡಿದ್ದರು. ಹೊಸಮಠದಿಂದ ನಟರಾಜ ಪ್ರತಿಷ್ಠಾನದ ಮೂಲಕ ಹಲವು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದ್ದರು. ವಿದ್ಯಾರ್ಥಿನಿಯರಿಗೆಂದೇ ಪ್ರತ್ಯೇಕ ಕಾಲೇಜು ಸ್ಥಾಪಿಸಿ ವಸತಿಯುತ ಶಿಕ್ಷಣ ನೀಡಲಾಗುತ್ತಿದೆ. ಈ ಪ್ರಮುಖ ಮಠದ ಜವಾಬ್ದಾರಿಯನ್ನು 1982ರಿಂದ ನೋಡಿಕೊಳ್ಳುತ್ತಿದ್ದ ಚಿದಾನಂದ ಸ್ವಾಮೀಜಿ ಅವರು, ಬೆಳವಣಿಗೆಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ.



ಚಿದಾನಂದ ಸ್ವಾಮೀಜಿ ಅವರ ಜನ್ಮದಿನದ ಅಮೃತ ಮಹೋತ್ಸವವನ್ನು 2025ರ ಸೆ.4ರಂದು ಆಚರಿಸಲಾಗಿತ್ತು. ಅಂದು ಮಠದ ಹೊಸ ಪೀಠಾಧಿಪತಿಯ ನಿರಂಜನ ಪಟ್ಟಾಧಿಕಾರ ಸಮಾರಂಭವೂ ನಡೆದಿತ್ತು.

ಮಠದ ಆವರಣದಲ್ಲಿ ಶ್ರೀಗಳ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಆ.14ರಂದು ಶುಕ್ರವಾರ ಬೆಳಿಗ್ಗೆ 10ಕ್ಕೆ ಮಠದಿಂದ ರಾಮಾನುಜ ರಸ್ತೆಯಿಂದ ಮಠದವರೆಗೆ ಮೆರವಣಿಗೆ ನಡೆಸಲಾಗುತ್ತದೆ. ಮಧ್ಯಾಹ್ನ 1 ಗಂಟೆ ಸುಮಾರಿಗೆ ಹೊಸ ಮಠದ ಆವರಣದಲ್ಲಿ ಅಂತ್ಯಕ್ರಿಯೆ ಪುಟ 2ಕ್ಕೆ

# ಮೇಕೆದಾಟು ಯೋಜನೆಗೆ ವೇಗ

## ಅಧಿಕಾರಿಗಳಿಗೆ ಸಚಿವ ಚಲುವರಾಯಸ್ವಾಮಿ ಸೂಚನೆ

**ಬೆಂಗಳೂರು:** ರಾಜಧಾನಿ ಬೆಂಗಳೂರು ಸೇರಿದಂತೆ ಪ್ರಮುಖ ನಗರಗಳಿಗೆ ಶಾಶ್ವತ ಕುಡಿಯುವ ನೀರು ಒದಗಿಸುವ ದೃಷ್ಟಿಯಿಂದ ಮೇಕೆದಾಟು ಯೋಜನೆ ಜಾರಿಗೆ ಶೀಘ್ರ ಅಗತ್ಯ ಕ್ರಮ ಕೈಗೊಳ್ಳಬೇಕು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಜಲಸಂಪನ್ಮೂಲ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಮೇಕೆದಾಟು ಕುಡಿಯುವ ನೀರಿನ ಯೋಜನೆ ಕುರಿತು ಜಲಸಂಪನ್ಮೂಲ ಇಲಾಖೆ ಹಿರಿಯ ಅಧಿಕಾರಿಗಳೊಂದಿಗೆ ಗುರುವಾರ ಮಹತ್ವದ ಸಭೆ ನಡೆಸಿದರು. ಯೋಜನೆಯ ಪ್ರಸ್ತುತ ಸ್ಥಿತಿಗತಿ, ಎದುರಾಗಿರುವ ಸವಾಲುಗಳು ಹಾಗೂ ಮುಂದಿನ ಕಾರ್ಯಯೋಜನೆ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡರು. ಯೋಜನೆಯ ವಿಸ್ತೃತ ಯೋಜನಾ ವರದಿ, ಕೇಂದ್ರ ಸರ್ಕಾರ ಹಾಗೂ ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗತ್ಯ ಅನುಮತಿ, ಪರಿಸರ ಮತ್ತು ಅರಣ್ಯ ಸಂಬಂಧಿತ ವಿಷಯಗಳು, ಭೂಸ್ವಾಧೀನ, ಪುನರ್ವಸತಿ, ಯೋಜನೆ ತಾಂತ್ರಿಕ ಅಂಶ ಗಳು ಹಾಗೂ ಕರ್ನಾಟಕದ ಹಿತಾಸಕ್ತಿಯನ್ನು ಕಾಪಾಡಿ ಕೊಂಡು ಯೋಜನೆಯನ್ನು ಮುಂದುವರಿಸುವ ಕಾರ್ಯ ತಂತ್ರ ಸೇರಿದಂತೆ ವಿವಿಧ ವಿಷಯಗಳ ಕುರಿತು ಮಾಹಿತಿ ಪಡೆದರು. ಸಭೆಯಲ್ಲಿ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಗೌರವ್ ಗುಪ್ತಾ ಸೇರಿದಂತೆ ನೀರಾವರಿ ಇಲಾಖೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.





### ಜಾರಿಯಲ್ಲಿ ರಾಜಿ ಇಲ್ಲ

ಮೇಕೆದಾಟು ಯೋಜನೆ ಕೇವಲ ಒಂದು ನೀರಾವರಿ ಯೋಜನೆಯಲ್ಲ. ಬೆಂಗಳೂರು ಭವಿಷ್ಯಕ್ಕೆ ಸಂಬಂಧಿಸಿದ ಯೋಜನೆ. ಯೋಜನೆಗೆ ಸಂಬಂಧಿಸಿದ ಎಲ್ಲ ಪ್ರಕ್ರಿಯೆಗಳನ್ನು ಕಾನೂನುಬದ್ಧವಾಗಿ ಹಾಗೂ ವೈಜ್ಞಾನಿಕವಾಗಿ ಮುಗಿಸಬೇಕು ಎಂದು ಪುಟ 2ಕ್ಕೆ

# ಖರ್ಗೆ ಭಾಷಣ ಮಾಡಿದ ಸ್ಥಳದಲ್ಲಿ ಶುದ್ಧೀಕರಣ ಹೋಮ

**ನವದೆಹಲಿ:** ಉತ್ತರಾಖಂಡ ಹಲ್ದ್ವಾನಿಯ ರಾಮಲೀಲಾ ಮೈದಾನದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ರ‍್ಯಾಲಿ ನಡೆಸಿದ ಬಳಿಕ ನಡೆದ ಶುದ್ಧೀಕರಣ ಹೋಮ ಈಗ ರಾಜಕೀಯ ವಿವಾದಕ್ಕೆ ಕಾರಣವಾಗಿದೆ.

ಆಗಸ್ಟ್ 8ರಂದು ಖರ್ಗೆ ರ‍್ಯಾಲಿ ನಡೆಸಿದ್ದ ಸ್ಥಳದಲ್ಲಿ ಆ.10ರಂದು ಶ್ರೀರಾಮ ಸೇನಾ ಧರ್ಮಾರ್ಥ ಸೇವಾ ನ್ಯಾಸ್ ಸಂಘಟನೆ ಶುದ್ಧೀಕರಣ ಹೋಮ ನಡೆಸಿತ್ತು. ಖರ್ಗೆ ದಲಿತ ಸಮುದಾಯಕ್ಕೆ ಸೇರಿದವರಾಗಿರುವ ಕಾರಣಕ್ಕೆ ಈ ರೀತಿ ಮಾಡಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ರಾಜ್ಯಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ಖರ್ಗೆ, ಈ ದೇಶದಲ್ಲಿ ದಲಿತರಿಗೆ ಜಾಗವಿಲ್ಲ ಎಂದು ನಾವು ಹೇಳುತ್ತಲೇ ಇದ್ದೇವೆ. ಧರ್ಮದ ಹೆಸರಿನಲ್ಲಿ ಎಲ್ಲರನ್ನೂ ವಿಭಜಿಸಲಾಗುತ್ತಿದೆ. ಅಲ್ಲಿ ಹವನ ಮಾಡಿಸುವ ಅಗತ್ಯವೇನಿತ್ತು ಎಂದು ಪ್ರಶ್ನಿಸಿದರು.



ತಮ್ಮ ಭಾಷಣದಲ್ಲಿ ಸರ್ಕಾರದ ಸಮಸ್ಯೆಗಳ ಬಗ್ಗೆ ಮಾತ್ರ ಪ್ರಸ್ತಾಪಿಸಿದ್ದೇನೆ ಎಂದರು.

ಈ ಬಗ್ಗೆ ರಾಜ್ಯಸಭೆಯಲ್ಲಿ ಪ್ರತಿಕ್ರಿಯಿಸಿದ ಬಿಜೆಪಿ ನಾಯಕ ಜೆ.ಪಿ. ನಡ್ಡಾ, ಖರ್ಗೆ ಬಗ್ಗೆ ಗೌರವವಿದೆ ಮತ್ತು ನಡೆದ ಶುದ್ಧೀಕರಣ ಕಾರ್ಯ ಖಂಡಿಸುತ್ತೇವೆ. ಘಟನೆ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಭರವಸೆ ನೀಡಿದ್ದಾರೆ. ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಕೂಡ ಹೋಮ ನಡೆಸಿದವರಿಗೆ ಶಿಕ್ಷೆಯಾಗಬೇಕು ಎಂದು ಹೇಳಿದರು.

# ರಾಮನಗರದಲ್ಲಿ ಖಾಲಿ ಕೊಡಗಳ ಪ್ರದರ್ಶನ

ರಾಮನಗರ: ಮಳೆ ಕೊರತೆ ಹಿನ್ನೆಲೆಯಲ್ಲಿ ಕೃಷಿ ಮತ್ತು ಕುಡಿಯುವ ನೀರಿಗೆ ಸಮಸ್ಯೆಯಾಗಿದೆ. ಹೀಗಿರುವಾಗ ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ವಿರೋಧಿಸಿ ಕನ್ನಡ ಪರ ಮತ್ತು ರೈತ ಪರ ಸಂಘಟನೆಗಲು ಜಿಲ್ಲಾ ಕೇಂದ್ರ ರಾಮನಗರದಲ್ಲಿ ಪ್ರತಿಭಟನೆಗಳನ್ನು ಹಮ್ಮಿಕೊಂಡಿದ್ದರು.

ಪ್ರತಿಭಟನಾಕಾರರ ಬಂಧನ ಬಿಡುಗಡೆ

ಸೇರಿದ ಕರುನಾಡ ಸೇನೆ ಮತ್ತು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಕಾರ್ಯಕರ್ತರು ನಗರದ ಐಜೂರು ವೃತ್ತದಲ್ಲಿ ಗುರುವಾರ ಬೆಳಿಗ್ಗೆ ಜಮಾಯಿಸಿ ಖಾಲಿ ಕೊಡಗಳನ್ನು ಪ್ರದರ್ಶಿಸಿದರು. ಇದೇ ವೇಳೆ ಬೆಂಗಳೂರು – ಮೈಸೂರು ಹೆದ್ದಾರಿ ರಸ್ತೆ ತಡೆ ಮಾಡಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ರಸ್ತೆ ತಡೆ ತೆರವುಗೊಳಿಸಲು ಪ್ರತಿಭಟನಾಕಾರರು ಒಪ್ಪದಿದ್ದಾಗ, ಪೊಲೀಸರು ಅವರೆನ್ನಲ್ಲ ಐಜೂರು ಠಾಣೆಗೆ ಕರೆದೊಯ್ದು ಕೆಲ ಸಮಯದ ನಂತರ ಬಿಡುಗಡೆ ಮಾಡಿದರು.

ಖಾಲಿ ಕೊಡಗಳ ಪ್ರದರ್ಶನದಲ್ಲಿ ಕರುನಾಡ ಸೇನೆ ರಾಜ್ಯಾ ಉಪಾಧ್ಯಕ್ಷ ಜಗದೀಶ್, ಗಂಗಾಧರ್ ವಿ.ಎನ್., ಸಿ.ಎಸ್.ಜಯಕುಮಾರ್, ಪುಷ್ಪಲತಾ, ಲಕ್ಷ್ಮಿ, ವಿಜಯ್ ಕುಮರ್, ಹೇಮಂತ್, ಕರವೇ (ಪ್ರವೀಣ್ ಶೆಟ್ಟಿ ಬಣ)



ಜಿಲಾಧ್ಯಕ್ಷ ರಾಜು, ವಿನೋಧ್, ಚೇತನ್, ಪ್ರಶನ್ನ, ಶಶಿ ಕುಮಾರ್, ನಾಗರಾಜ್ ಮುಂತಾದವರು ಭಾಗವಹಿಸಿದ್ದರು.

**ರೈತರಿಂದ ಪ್ರತಿಭಟನೆ**

ತದನಂತರ ಕರ್ನಾಟಕ ರಾಜ್ಯ ರೈತಸಂಘ ಮತ್ತು ಹಸಿರು ಸೇನೆ ರೈತರು ಐಜೂರು ವೃತ್ತದಲ್ಲೇ ಜಮಾಯಿಸಿ ಬೆಂಗಳೂರು ಮೈಸೂರು ಹೆದ್ದಾರಿ ತಡೆದು ರಾಜ್ಯ ಸರ್ಕಾರ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಳೆ ಕೊರತೆ ಕಾರಣ ರಾಜ್ಯದಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗಿದೆ. ಜಲಾಶಯಗಳು, ಕೆರೆ–ಕುಂಟೆಗಳಲ್ಲಿ ನೀರಿನ ಶೇಖರಣೆ ಸಾಕಷ್ಟಿಲ್ಲ. ತಮಿಳುನಾಡಿಗೆ ನೀರು ಹರಿಸಬಾರದು ಎಂದು ಸರ್ಕಾರವನ್ನು ಆಗ್ರಹಿಸಿದ ಪ್ರತಿಭಟನಾಕಾರರು, ಸರ್ಕಾರ ರೈತರ ಹಿತ ಕಾಪಾಡಬೇಕು ಎಂದು ಒತ್ತಾಯಿಸಿದರು. ಮೇಕೆದಾಟು ಯೋಜನೆಯನ್ನು ಶೀಘ್ರ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ರೈತ ಮುಖಂಡರುಗಳಾದ ಮಲ್ಲಯ್ಯ, ಕುಮಾರಸ್ವಾಮಿ ಮುಂತಾದವರು ಭಾಗವಹಿಸಿದ್ದರು. ಪ್ರತಿಭಟಿಸಿದ ರೈತರನ್ನು ಸಹ ಪೊಲೀಸರು ಬಂಧಿಸಿ ನಂತರ ಬಿಡುಗಡೆ ಮಾಡಿದರು.

# 2.54 ಕೋಟಿ ವೆಚ್ಚದ ಅಭಿವೃದ್ಧಿಗೆ ಚಾಲನೆ

**ಮೈಸೂರು:** ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಕ್ಷೇತ್ರದ ಎರಡು ವಾರ್ಡ್‌ಗಳಲ್ಲಿ ಒಟ್ಟು 2 ಕೋಟಿ 54 ಲಕ್ಷ ರೂ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದರು.



ಮಹಾನಗರ ಪಾಲಿಕೆಯ ವಲಯ ಕಚೇ ರಿ–4 ವ್ಯಾಪ್ತಿಯ ಗೋಕುಲಂ ವಾರ್ಡ್‌ನಲ್ಲಿ ನಗರಪಾಲಿಕೆ ಅನುದಾನದಡಿ 2 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ, ಗೋಕುಲಂ ಕಾಂಟೂರ್ ರಸ್ತೆಯ ಸಿದ್ದಲಿಂಗೇ ಶ್ವರ ಗ್ಯಾಸ್ ಏಜೆನ್ಸಿಯಿಂದ 1ನೇ ಮುಖ್ಯ ರಸ್ತೆಯ ಡಾ. ಪುನೀತ್ ರಾಜ್‌ಕುಮಾರ್ ವೃತ್ತದವರೆಗೆ ಯುಜಿಡಿ ಕಾಮಗಾರಿಯಿಂದ ಹಾಳಾಗಿರುವ ರಸ್ತೆಯನ್ನು ಅಭಿವೃದ್ಧಿ ಹಾಗೂ ವಲಯ ಕಚೇರಿ–4 ವ್ಯಾಪ್ತಿಯ ವಿ.ವಿ. ಮೊಹಲ್ಲಾ ವಾರ್ಡ್‌ನಲ್ಲಿ ಎಸ್ ಎಫ್ ಸಿ ವಿಶೇಷ ಅನುದಾನದಡಿ 54 ಲಕ್ಷ ರೂ ವೆಚ್ಚದಲ್ಲಿ ಕಾಮಗಾರಿಗೆ ಚಾಲನೆ ನೀಡಲಾ ಯಿತು. ವಿ.ವಿ. ಮೊಹಲ್ಲಾದ ನಳಪಾಕ್ ಹೋಟೆ ಲ್‌ನಿಂದ ಆದಿಪಂಪ ರಸ್ತೆವರೆಗೆ ಹಾಗೂ ಅಡ್ಡರಸ್ತೆಗಳಿಗೆ ಚರಂಡಿ ಮತ್ತು ಫುಟ್‌ಪಾತ್ ಅಭಿವೃದ್ಧಿ ಕಾಮಗಾರಿಯನ್ನು ಒಳಗೊಂಡಿದೆ.

ಈ ವೇಳೆ ಮಾತನಾಡಿದ ಅವರು, ಕ್ಷೇತ್ರದ ಪ್ರತಿ ರಸ್ತೆಯೂ ಉತ್ತಮವಾಗಬೇಕು. ಜನರ ಮೂಲಭೂತ ಸೌಕರ್ಯವೇ ನನ್ನ ಆದ್ಯತೆ. ಶೀಘ್ರವಾಗಿ ಗುಣಮಟ್ಟದ ಕಾಮಗಾರಿ ಪೂರ್ಣಗೊಳಿಸಲಾಗುವುದುಎಂದು ಹೇಳಿದರು. ಕಾರ್ಯಕ್ರಮದಲ್ಲಿ ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ಮಾಯಮ್ಮ, ವಾರ್ಡ್ ಅಧ್ಯಕ್ಷ ದಿನೇಶ್, ಜಯಪ್ರಕಾಶ್ , ಗಿರಿಜಾಂಬ,ಗಾಯತ್ರಿ ನಾರಾಯಣಗೌಡ, ಯುವ ಕಾಂಗ್ರೆಸ್ ಅಧ್ಯಕ್ಷ ನಿಶಾಂತ್ ಪಟೇಲ್, ಮುಖಂಡರಾದ ಸುಶೀಲ ಮರೀಗೌಡ ,ಲಾಯರ್ ಶ್ರೀನಿವಾಸ್, ಟೆಂಟ್ ಶ್ರೀನಿವಾಸ್, ಬಸವರಾಜು, ರೇಖಾಮ್ಮ , ಲಕ್ಷ್ಮೀ ಶಿವರಾಜು, ಇಮಾಂಶು, ನಗರಪಾಲಿಕೆ ಮಾಜಿ ಸದಸ್ಯ ರಮೇಶ್, ಮೋಹನ್,ತೇಜಸ್ ಗೌಡ ಸೇರಿ ಇತರರು ಭಾಗವಹಿಸಿದ್ದರು.

## ಸಿಪಿಕೆಯವರ ನಾನಾ ಚಿಂತನ ಮಂಥನ ಕೃತಿ ಬಿಡುಗಡೆ

ಮೈಸೂರು: ಸಂವಹನ ಪ್ರಕಾಶನ ಕನ್ನಡ ಸಾಹಿತ್ಯ ಕಲಾಕೂಟಗಳ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಡಾ.ಸಿ.ಪಿ.ಕೆ. ಅವರ ನಾನಾ ಚಿಂತನ ಮಂಥನ ಕೃತಿಯನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿ, ನೂರಾರು ಕೃತಿ ಪ್ರಕಟಿಸಿರುವ ಡಾ.ಸಿ.ಪಿ.ಕೆ. ಇಂದಿಗೂ ಸಕ್ರಿಯರಾಗಿದ್ದಾರೆ. ಯಾವುದೇ ಪತ್ರಿಕೆಯಾದರೂ ಅದರಲ್ಲಿ ಸ್ವಾರಸ್ಯಕರವಾದ ಪ್ರತಿಕ್ರಿಯೆ ನೀಡುವುದನ್ನು ಇಂದಿಗೂ ಮುಂದುವರಿಸಿದ್ದಾರೆ. ಈಗ ಬಿಡುಗಡೆಯಾಗಿರುವುದು ಅತ್ಯಂತ ಮಹತ್ವದ ಕೃತಿಯಾಗಿದೆ. ಎಲ್ಲ ಸಾಹಿತ್ಯಾಸಕ್ತರು, ವಿದ್ಯಾರ್ಥಿಗಳು, ಸಂಶೋಧಕರು ಮೊದಲಾದವರಿಗೆ ಬರವಣಿಗೆ ಹೇಗಿರಬೇಕು, ಹೇಗೆ ಅವಲೋಕಿಸಬೇಕು ಎಂಬ ಹೊಳಹು ದೊರಕುತ್ತದೆ. ಡಾ.ಸಿ.ಪಿ.ಕೆ. ಅವರ ಬರಹಗಳ ಸಂಪೂರ್ಣ ಹೂರಣ ಈ ಕೃತಿಯಲ್ಲಿದೆ ಎಂದರು. ಕೃತಿ ಕುರಿತು ಹಿರಿಯ ಕನ್ನಡ ವಿದ್ವಾಂಸ ಪ್ರೊ. ಮೊರಬದ ಮಲ್ಲಿಕಾರ್ಜುನ ಮಾತನಾಡಿ, ಈ ಕೃತಿಯಲ್ಲಿ ಡಾ.ಸಿ.ಪಿ.ಕೆ. ಅಲ್ಲಮನ ಮಾತನ್ನು ಅಭಿವ್ಯಕ್ತಿಸಿದ್ದಾರೆ. ಚಿಂತನ ಮಂಥನ ಕೃತಿ ನಮ್ಮ ಬದುಕಿನ ಭ್ರಾಂತಿಯ ಬೇರನ್ನು ಕಿತ್ತೊಗೆದು ಆರೋಗ್ಯಕರ ಆಲೋಚನೆ ಬಿತ್ತುವ ಕೆಲಸ ಮಾಡುತ್ತದೆ. ಸಿ.ಪಿ.ಕೆ. ಅವರು ತಮ್ಮ ಲೇಖನಿ ಮೂಲಕ ಬದುಕು, ಸಮಾಜ ಹೇಗಿರಬೇಕೆಂಬುದನ್ನು ತೋರಿಸಿಕೊಡುವ ಕೆಲಸ ಮಾಡಿದ್ದಾರೆ. ಮೂಲತಃ ಕೃಷಿಕರಾದ ಅವರು ಕೃಷಿಕತನವನ್ನು ಸಾಹಿತ್ಯದ ಮೂಲಕ ಮಾಡಿದ್ದಾರೆ. ಅಕ್ಷರದ ಅಕ್ಷಯ ಬೀಜ ಬಿತ್ತಿದ್ದಾರೆಂದರು. ಡಾ.ಸಿ.ಪಿ.ಕೆ. ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಡಿ.ಎನ್. ಲೋಕೇಶಪ್ಪ ಮೊದಲಾದವರು ಇದ್ದರು.

**ಮೊದಲ ಪುಟದಿಂದ**

## ಚಿದಾನಂದ ಶ್ರೀಗಳು ಶಿವೈಕ್ಯ

ನೆರವೇರಿಸಲಾಗುತ್ತದೆ. ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹಾಗೂ ನೂರಾರು ಭಕ್ತರು ಅಂತಿಮ ದರ್ಶನ ಪಡೆದರು.



# ಸ್ವಾತಂತ್ರ್ಯ ದಿನ: 4 ಲಕ್ಷ ಲಾಡು ವಿತರಣೆ

## ಜಿಲ್ಲಾದ್ಯಂತ ಪ್ರಾಥಮಿಕ ತರಗತಿಗಳಿಂದ ಪದವಿ ತರಗತಿಗಳ ವಿದ್ಯಾರ್ಥಿಗಳಿಗೆ ಸಿಹಿ ವಿತರಣೆ

ರಾಮನಗರ: ಕಳೆದ 15 ವರ್ಷಗಳಿಂದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಿರಂತರವಾಗಿ ಪಾಲಿಸಿಕೊಂಡು ಬರುತ್ತಿರುವ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ಈ ಬಾರಿಯೂ ಸುಮಾರು 4 ಲಕ್ಷ ಲಾಡುಗಳನ್ನು ವಿತರಿಸುತ್ತಿರುವುದಾಗಿ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಎಸ್.ಎಸ್. ಕನ್ವೆಷನ್ ಹಾಲ್‌ನಲ್ಲಿ ಸಾಂಕೇತಿಕವಾಗಿ ರಾಮನಗರ ಮತ್ತು ಕನಕಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಲಾಡು ಬಾಕ್ಸ್‌ಗಳನ್ನು ವಿತರಿಸುವ ವೇಳೆ ಅವರು ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ನಮ್ಮೆಲ್ಲರ ರಾಷ್ಟ್ರೀಯ ಹಬ್ಬ. ಈ ಬಾರಿ 80ನೇ ಸ್ವಾತಂತ್ರ್ಯ ದಿನವನ್ನು ಆಚರಿಸುತ್ತಿದ್ದೇವೆ. ಮಹಾತ್ಮರು, ವೀರ ಸೇನಾನಿಗಳ ತ್ಯಾಗ ಬಲಿದಾನದ ಸಂಕೇತ ಈ ದಿನಾಚರಣೆ ಎಂದರು.

ಸಮಾಜದಲ್ಲಿ ಶಾಂತಿ, ಸಾಮರಸ್ಯ ಹಾಗು ಸಹೋದತ್ವದ ಸಂದೇಶದ ಜೊತೆಗೆ ದೇಶಭಕ್ತಿಯ ಸಂದೇಶ ಸಾರುವ ಹೊಣೆ ನಮ್ಮೆಲ್ಲರ ಮೇಲಿದೆ. ಇದೇ ಆಶಯದಲ್ಲಿ ಜಾತಿ, ಧರ್ಮ ಮತ್ತು ವರ್ಗಗಳ ಬೇದ ಭಾವವಿಲ್ಲದೆ ಪ್ರತಿಯೊಬ್ಬರಿಗೂ ಸಿಹಿ ಹಂಚುವ ಮೂಲಕ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸುವ ಸಣ್ಣ ಪ್ರಯತ್ನದಲ್ಲಿ ಸಿಹಿ ಹಂಚಲಾಗುತ್ತಿದೆ ಎಂದರು.

ವಿಶ್ವದ ಅನ್ಯ ದೇಶಗಳಿಗೆ ಹೋಲಿಸಿದರೆ ಭಾರತ ವಿಶಿಷ್ಟವಾದ ದೇಶ. ಇಲ್ಲಿ ಅನೇಕ ಭಾಷೆಗಳು, ಜಾತಿ, ಧರ್ಮಗಳು ಸಾಮರಸ್ಯದಿಂದ ಜೀವನ ನಡೆಸುತ್ತಿದ್ದೇವೆ. ಇಡೀ ವಿಶ್ವವೇ ತಲೆಬಾಗಿ ನಮಿಸವಷ್ಟು ಬೆಳೆದಿದ್ದೇವೆ ಎಂದರು.

**2011ರಿಂದಲೂ ನಿರಂತರ ಸಿಹಿ ವಿತರಣೆ**

2011ರಲ್ಲಿ ತಾವು ಜಿಲ್ಲಾ ಪಂಚಾಯ್ತಿ ಸದಸ್ಯರದ ಸಮಯತದಲ್ಲಿ ಎಲ್.ಕೆ.ಜಿ ತರಗತಿಯಿಂದ ಇಂಜಿನಿಯರಿಂಗ್ ಸೇರಿದಂತೆ ಎಲ್ಲಾ ಪದವಿ ತರಗತಿಗಳ



ವಿದ್ಯಾರ್ಥಿಗಳಿಗೆ ಲಾಡು ವಿತರಿಸುವ ಕಾರ್ಯ ಆರಂಭಿಸಿದ್ದಾಗಿ, ಕ್ರಮೇಣ ಸರ್ಕಾರಿ ಕಚೇರಿಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಿ ವರ್ಗಕ್ಕೂ ಲಾಡು ವಿತರಣೆ ಆರಂಭಿಸಿದ್ದಾಗಿ ತಿಳಿಸಿದರು.

ಜಿಲ್ಲೆಯಲ್ಲಿರುವ 1351 ಅಂಗನವಾಡಿ ಕೇಂದ್ರಗಳು, 1574 ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳು, 88 ಪದವಿ ಪೂರ್ವ ಕಾಲೇಜುಗಳು, ಐಟಿಐ ಸೇರಿದಂತೆ 86 ಕಾಲೇಜುಗಳ ವಿದ್ಯಾರ್ಥಿಗಳು, ಅಧ್ಯಾಪಕರು, ಉಪನ್ಯಾಸಕರು ಮತ್ತು ಜಿಲ್ಲೆಯ 5 ತಾಲೂಕುಗಳ ಸರ್ಕಾರಿ ಕಚೇರಿಗಳ ಅಧಿಕಾರಿಗಳು, ಸಿಬ್ಬಂದಿ ಎಲ್ಲಾ ಸೇರಿ 3,38,247 ಲಾಡುಗಳನ್ನು ವಿತರಿಸಲಾಗುತ್ತಿದೆ. ಇದಲ್ಲದೆ ಜಿಲ್ಲೆ ಕೇಂದ್ರ ಮತ್ತು ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ನಾಡ ಹಬ್ಬಗಳ ಆಚರಣಾ ಸಮಿತಿ ಆಯೋಜಿಸುವ ಸ್ವಾತಂತ್ರ ದಿನಾಚರಣೆಯಲ್ಲಿ ಭಾಗವಹಿಸುವ ನಾಗರೀಕರಿಗೂ ಲಾಡುಗಳನ್ನು ವಿತರಿಸಲಾಗುವುದು ಎಂದರು.

**ಮಾದರಿ ಕ್ಷೇತ್ರ: ಇನ್ನಷ್ಟು ಕಾರ್ಯಕ್ರಮಗಳ ಘೋಷಣೆ ಬಾಕಿ**

ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಶಾಶ್ವತ ಅಭಿವೃದ್ಧಿ ಕಾರ್ಯಗಳು ಪ್ರಗತಿಯಲ್ಲಿವೆ. ಮತ್ತು ಕಾರ್ಯಕ್ರಮಗಳ ಘೋಷಣ ಯಾವುದಷ್ಟೇ ಬಾಕಿ ಇದೆ. ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮರ್, ಮಾಜಿ ಸಂಸದ ಡಿ.ಕೆ.ಸುರೇಶ್, ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ, ನಗರಾಭಿವೃದ್ಧಿ ಸಚಿವ ಎಚ್.ಸಿ.ಬಾಲಕೃಷ್ಣ ಇವರೆಲ್ಲರ ಸಹಕಾರದಲ್ಲಿ ಕ್ಷೇತ್ರವನ್ನು ಪ್ರಗತಿಯತ್ತ ಕೊಂಡೊಯ್ಯುವ ಸಂಕಲ್ಪ ಮಾಡಿರುವುದಾಗಿ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.

ಈ ವೇಳೆ ಕಾಂಗ್ರೆಸ್ ಪಕ್ಷದ ಪ್ರಮುಖರಾದ ಸಿ.ಎನ್.ಆರ್.ವೆಂಕಟೇಶ್, ಎ.ಬಿ.ಚೇತನ್ ಕುಮಾರ್, ವಿ.ಎಚ್.ರಾಜು, ವೆಂಕಟೇಶ್ (ಮಾಗಡಿ), ಅಶೋಕ್, ಈಶ್ವರ್, ಕೆ.ವಿ.ಪ್ರಸನ್ನ ಕುಮಾರ್, ರಘು, ರೇವಣ್ಣ, ಶಿವಶಂಕರ್, ರಾಮನಗರ ನಗರಸಭಾ ಸದಸ್ಯರು ಮತ್ತು ಇತರರು ಉಪಸ್ಥಿತರಿದ್ದರು.

### ಎಲ್ಲರ ಸಹಕಾರದಲ್ಲಿ ಲಾಡು ವಿತರಣೆ

**ಯುವ ಜನರಲ್ಲಿ ದೇಶ ಪ್ರೇಮ ಕುರಿತು ಜಾಗೃತಿ ಮೂಡಿಸುವುದು, ಶಾಲಾ–ಕಾಲೇಜು ಮಕ್ಕಳಲ್ಲಿ ರಾಷ್ಟ್ರೀಯ ಹಬ್ಬಗಳ ಬಗ್ಗೆ ಆಸಕ್ತಿ, ಗೌರವ ಹೆಚ್ಚಿಸುವುದು, ಸಂಭ್ರಮದ ವಾತಾವರಣವನ್ನು ನಿರ್ಮಿಸುವ ಉದ್ದೇಶದಿಂದ ತಾವು ಇಡೀ ಜಿಲ್ಲೆಯಲ್ಲಿ ಎಲ್ಲಾ ತರಗತಿಗಳ ವಿದ್ಯಾರ್ಥಿಗಳಿಗೆ ಲಾಡು ವಿತರಿಸುತ್ತಿದ್ದೇನೆ. ಪಕ್ಷದ ಕಾರ್ಯಕರ್ತರು ಮತ್ತು ಅಭಿಮಾನಿಗಳು ಈ ಕಾರ್ಯದಲ್ಲಿ ಸಹಕಾರ ನೀಡುತ್ತಿದ್ದಾರೆ ಎಂದು ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.**

### ಸ್ವಚ್ಚತೆಗೆ ಆಧ್ಯತೆ, ಪ್ಲಾಸ್ಟಿಕ್ ಬಾಕ್‌ಗಳಲ್ಲಿ ಲಾಡುಗಳು

**ಜಿಲ್ಲೆಯ ವಿವಿಧ ಗ್ರಾಮಗಳಲ್ಲಿರುವ ಶಾಲೆಗಳ ಮಕ್ಕಳಿಗೂ ಲಾಡು ವಿತರಣೆಯಾಗುತ್ತಿದೆ. ಹೀಗಾಗಿ ಸ್ವಚ್ಚತೆಗೆ ಹೆಚ್ಚು ಆಧ್ಯತೆ ಕೊಡುತ್ತಿರುವ ಶಾಸಕ ಇಕ್ಬಾಲ್ ಹುಸೇನ್ ಈ ಬಾರಿ ಇನ್ನೊಂದು ಹೆಜ್ಜೆ ಮುಂದೆ ಹೋಗಿ ಲಾಡುಗಳನ್ನು ಪ್ಲಾಸ್ಟಿಕ್ ಬಾಕ್ಸ್‌ಗಳಲ್ಲಿ ಶೇಖರಿಸಿ ಅವುಗಳನ್ನು ಕಾಡ್‌ಬೋರ್ಡ್ ಬಾಕ್ಸುಗಳಲ್ಲಿಟ್ಟು ರವಾನಿಸುತ್ತಿರುವುದು ಮಕ್ಕಳ ಬಗ್ಗೆ ಇರುವ ಕಾಳಜಿ ವ್ಯಕ್ತವಾಗುತ್ತದೆ ಎಂದು ಲಾಡು ತಯಾರಿಕೆ ಉಸ್ತುವಾರಿ ಹೊತ್ತ ಕಾರ್ಯಕರ್ತರು ತಿಳಿಸಿದ್ದಾರೆ.**

## ತಲಕಾವೇರಿಗೆ ಸಿಎಂ ಪೂಜೆ

ಡಿ.ಕೆ ಶಿವಕುಮಾರ್ ಅವರು ಕೊಡಗು ಜಿಲ್ಲೆಗೆ ನೀಡುತ್ತಿರುವ ಮೊದಲ ಭೇಟಿ ಇದು. ಕಳೆದ ವರ್ಷ ಮಾರ್ಚ್ 21ರಂದು ಉಪಮುಖ್ಯಮಂತ್ರಿ ಆಗಿದ್ದ ವೇಳೆ ಡಿ.ಕೆ.ಶಿವಕುಮಾರ್ ಅವರು ಕಾವೇರಿ ಮಾತೆಗೆ ವಿಶೇಷ ಪೂಜೆ ಸಲ್ಲಿಸಿದ್ದರು. ಅಲ್ಲಿಂದ ಪವಿತ್ರ ಕಾವೇರಿ ತೀರ್ಥವನ್ನು ಬೆಂಗಳೂರಿಗೆ ಕೊಂಡೊಯ್ದು ಕಾವೇರಿ ಆರತಿಯಲ್ಲಿ ಬಳಸಲಾಗಿತ್ತು.

## ವಾಟಾಳ್ ಬಂಧನ

ವಾಟಾಳ್ ನಾಗರಾಜ್ ಅವರು ತಮ್ಮ ನಿವಾಸದ ಗೇಟ್ ಒಳಗಡೆಯೇ ಕುಳಿತು ಪಟ್ಟು ಹಿಡಿದರು. ನಾನು ಮನೆಯಿಂದ ಆಚೆಯೇ ಬರುವುದಿಲ್ಲ, ವಶಕ್ಕೆ ಪಡೆಯುವ ಕಾರಣಕ್ಕಾಗಿ ಹೊರಬರಲ್ಲ ಎಂದು ಪಟ್ಟು ಹಿಡಿದರು. ವಾಟಾಳ್ ನಾಗರಾಜ್ ತಮ್ಮ ಬಾಯಿಗೆ ಸೆಲ್ಲೋ ಟೇಪ್ ಹಾಕಿಕೊಳ್ಳುವ ಮೂಲಕ ಪ್ರತಿಭಟನೆ ನಡೆಸಿದರು. ಪೊಲೀಸರ ಮನವೊಲಿಕೆಗೆ ಒಪ್ಪದಿದ್ದಾಗ ಕೊನೆಗೆ ಪೊಲೀಸರು ವಾಟಾಳ್ ನಾಗರಾಜ್ ಅವರನ್ನು ಸ್ಥಳದಲ್ಲೇ ವಶಕ್ಕೆ ಪಡೆದು ಕರೆದೊಯ್ದರು.

## ಜಾರಿಯಲ್ಲಿ ರಾಜಿ ಇಲ್ಲ

ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು. ರಾಜ್ಯದ ಜನರ ಕುಡಿಯುವ ನೀರಿನ ಹಕ್ಕು ಮತ್ತು ರಾಜ್ಯದ ಹಿತಾಸಕ್ತಿಯನ್ನು ಯಾವುದೇ ಕಾರಣಕ್ಕೂ ಕಡೆಗಣಿಸಲು ಸಾಧ್ಯವಿಲ್ಲ. ಯೋಜನೆಯ ಪ್ರತಿಯೊಂದು ಹಂತದಲ್ಲೂ ಕಾನೂನು ಮತ್ತು ತಾಂತ್ರಿಕ ನಿಯಮಗಳನ್ನು ಪಾಲಿಸಿಕೊಂಡು, ಅಗತ್ಯ ಅನುಮತಿಗಳನ್ನು ಪಡೆಯುವ ಪ್ರಕ್ರಿಯೆಗೆ ವೇಗ ನೀಡಬೇಕು ಎಂದು ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ರಾಜೀನಾಮೆ ನೀಡಲಿ

ಪಿಂಚಣಿ ಬಂದಿಲ್ಲ. ಅವರ ಮಗನಿಗೆ ಈ ಕಾಂಗ್ರೆಸ್ ಸರಕಾರ ಜವಾನನ ಕೆಲಸ ಕೊಟ್ಟಿದೆ ಎಂದು ಟೀಕಿಸಿದರು.

## ಪ್ರತಿಭಟನೆಗೆ ಸೀಮಿತ

ಪೊಲೀಸರು ಮುಂಜಾಗ್ರತಾ ಕ್ರಮವಹಿಸಿದ್ದರು. ಅಪಾರ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಲಾಗಿತ್ತು. ಆದರೆ ಎಲ್ಲಿಯೂ ಬಂದ್ ಮಾಡುವವರೇ ಇರಲಿಲ್ಲ. ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ ಮತ್ತು ರಾಮನಗರ ಭಾಗಗಳಲ್ಲಿ ವಿವಿಧ ವಿಶಿಷ್ಟ ಪ್ರತಿಭಟನೆಗಳು ಹಾಗೂ ರಸ್ತೆ ತಡೆ ನಡೆಯಿತು. ಮಂಡ್ಯ ನಗರದಲ್ಲಿ ಕೆಲ ಸಮಯ ವಹಿವಾಟು ಬಂದ್ ಆಗಿತ್ತು. ನಗರದ ಪ್ರಮುಖ ವಹಿವಾಟು ಕೇಂದ್ರವಾಗಿರುವ ಪೇಟೆ ಬೀದಿಯ ಬಹುತೇಕ ಅಂಗಡಿ–ಮುಂಗಟ್ಟುಗಳನ್ನು ಕೆಲ ಕಾಲ ಸ್ವಯಂಪ್ರೇರಿತವಾಗಿ ಮುಚ್ಚಿ ವರ್ತಕರು ಬೆಂಬಲ ಸೂಚಿಸಿದರು. ಮೈಸೂರಿನಲ್ಲಿ ಬಂದ್‌ಗೆ ನಿರೀಕ್ಷಿತ ಮಟ್ಟದ ಬೆಂಬಲ ವ್ಯಕ್ತವಾಗಿಲ್ಲ. ಕೆಎಸ್‌ಆರ್‌ಟಿಸಿ ಹಾಗೂ ನಗರ ಸಾರಿಗೆ ಬಸ್‌ಗಳು ಎಂದಿನಂತೆ ಸಂಚರಿಸಿದವು. ಸಾರ್ವಜನಿಕ ಓಡಾಟಕ್ಕೆ ಯಾವುದೇ ಅಡಚಣೆಯಾಗಲಿಲ್ಲ. ನಗರದಲ್ಲಿ ಪ್ರತಿಭಟನೆಗೆ ಇಳಿದ ಕನ್ನಡ ಸಂಘಟನೆಗಳ ಪ್ರಮುಖ ಕಾರ್ಯಕರ್ತರನ್ನು ಪೊಲೀಸರು ಮುಂಜಾಗ್ರತಾ ಕ್ರಮವಾಗಿ ವಶಕ್ಕೆ ಪಡೆದರು.

# ಬಂದ್‌ಗಿಲ್ಲ ಬಲ, ನಿಲ್ಲದ ಪ್ರತಿಭಟನೆ

## ರಸ್ತೆ ತಡೆ, ನಿದ್ರೆ, ಪೊರಕೆ, ಮೆರವಣಿಗೆ ಸೇರಿ ನಾನಾ ರೀತಿ ಚಳವಳಿ

ಮೈಸೂರು: ಕಾವೇರಿ ನೀರು ನಿರ್ವಹಣಾ ಮಂಡಳಿ ಆದೇಶವನ್ನು ಧಿಕ್ಕರಿಸಿ ಹಾಗೂ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಹರಿಸದಂತೆ ಆಗ್ರಹಿಸಿ ನೀಡಿದ್ದ ಬಂದ್‌ಗೆ ಮೈಸೂರಿನಲ್ಲಿ ಬೆಂಬಲ ಸಿಗಲಿಲ್ಲ. ಆದರೆ, ರಸ್ತೆ ತಡೆ, ನಿದ್ರೆ, ಪೊರಕೆ, ಮೆರವಣಿಗೆ ಸೇರಿ ನಾನಾ ರೀತಿಯ ಚಳವಳಿಗಳು ಕಾವೇರಿ ಕಿಚ್ಚು ಹೆಚ್ಚಿಸಿದವು.

ಬಂದ್ ಗೆ ಅನೇಕ ಸಂಘಟನೆಗಳು ಬೆಂಬಲ ನೀಡದ ಹಿನ್ನೆಲೆಯಲ್ಲಿ ನಗರದಲ್ಲಿ ಎಂದಿನಂತೆ ಕೆಎಸ್‌ಆರ್ ಟಿಸಿ, ಆಟೋ, ಖಾಸಗಿ ವಾಹನಗಳ ಸಂಚಾರ ಕಂಡು ಬಂದವು. ಅಲ್ಲದೆ ಎಂದಿನಂತೆ ಶಾಲಾ–ಕಾಲೇಜು, ಆಸ್ಪತ್ರೆ, ಸರ್ಕಾರಿ ಹಾಗೂ ಖಾಸಗಿ ಕಚೇರಿಗಳು ಸಹ ಕಾರ್ಯನಿರ್ವಹಿಸುತ್ತಿದ್ದ ದೃಶ್ಯ ಸಹಜವಾಗಿತ್ತು. ಬಂದ್ ಗೆ ನೈತಿಕ ಬೆಂಬಲ ಘೋಷಿಸಿ ಅನೇಕರು ಎಂದಿನಂತೆ ತಮ್ಮ ಕಾರ್ಯಚಟುವಟಿಕೆ ನಡೆಸಿದವು.

ಬಸ್ ತಡೆದವರ ಬಂಧನ: ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಮೈಸೂರು ಬಸ್ ನಿಲ್ದಾಣದಲ್ಲಿ ಬೆಳ್ಳಂಬೆಳಿಗ್ಗೆ ಬಸ್ ಗೆ ಅಡ್ಡಲಾಗಿ ಬಸ್ ತಡೆಯಲು ಪ್ರಯತ್ನಿಸಿದರು. ಈ ವೇಳೆ ಕಾವೇರಿ ನೀರು ಹರಿಸದಂತೆ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಸ್ ತಡೆಯಲು ಯತ್ನಿಸಿದ ಹಿನ್ನೆಲೆಯಲ್ಲಿ ಪ್ರತಿಭಟನಾನಿರತರನ್ನು ಬಂಧಿಸಿ ಪೊಲೀಸರು ಕರೆದೊಯ್ದರು. ಸೇನಾಪಡೆಯ ಅಧ್ಯಕ್ಷ ತೇಜಸ್ ಲೋಕೇಶ್ ಗೌಡ, ಗೋಲ್ಡ್ ಸುರೇಶ್ ಇನ್ನಿತರರು ಬಂಧನಕ್ಕೆ ಒಳಗಾದರು.

ನಿದ್ರಿಸಿ ಚಳವಳಿ: ಕರ್ನಾಟಕ ಕಾವಲು ಪಡೆ, ಕರ್ನಾಟಕ ರಾಜ್ಯ ರೈತಸಂಘದ ನೇತೃತ್ವದಲ್ಲಿ ಹಲವು ಕನ್ನಡ ಪರ ಸಂಘಟನೆಗಳು ಜಯಚಾಮರಾಜೇಂದ್ರ ಒಡೆಯರ್ ವೃತ್ತ(ಹಾರ್ಡಿಂಜ್)ದಲ್ಲಿ ಕಾವೇರಿ ನದಿ ನೀರು ಕಾಪಾಡುವ ಜವಾಬ್ದಾರಿಯನ್ನು ರಾಜ್ಯ ಸರ್ಕಾರವೇ ತೆಗೆದುಕೊಳ್ಳುವುದಾಗಿ ಹೇಳಿದ ಹಿನ್ನೆಲೆಯಲ್ಲಿ ಕೈ ಕಟ್ಟಿ, ಬಾಯಿ ಮುಚ್ಚಿ ನಿದ್ರೆಗೆ ಜಾರುವ ಮೂಲಕ ತಮ್ಮ ಆಕ್ರೋಶ ಹೊರ ಹಾಕಿದರು. ಸರ್ಕಾರ ಇನ್ನಾದರೂ ನಿದ್ರೆಯಿಂದ ಎದ್ದು ಕಾವೇರಿ ನೀರಿನ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ತಮಿಳುನಾಡಿಗೆ ನೀರು ಬಿಡುವುದು ನಿಲ್ಲಿಸಿ, ರೈತರಿಗೆ ನೀರು ಹರಿಸುವ ಕೆಲಸ ಮಾಡಬೇಕೆಂದು ಆಗ್ರಹಿಸಿದರು.

ಕರ್ನಾಟಕ ಕಾವಲುಪಡೆ ರಾಜ್ಯಾಧ್ಯಕ್ಷ ಮೋಹನಕುಮಾರ್ ಗೌಡ, ಕರ್ನಾಟಕ ರಾಜ್ಯ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಹೊಸಕೋಟೆ ಬಸವರಾಜು, ಪಿ.ಮರಂಕಯ್ಯ ಇನ್ನಿತರರು ಇದ್ದರು.



ಇದೇ ವೃತ್ತದಲ್ಲಿ ಖಾಲಿ ಕೊಡ ಪ್ರದರ್ಶಿಸಿದ ಕರ್ನಾಟಕ ರಾಜ್ಯ ರೈತ ಸಂಘ (ರೈತಪರ್ವ) ಕಾರ್ಯಕರ್ತರು ಬಂದ್ ಗೆ ತಮ್ಮ ಪೂರ್ಣ ಬೆಂಬಲ ಘೋಷಿಸಿ, ಈ ಕೂಡಲೇ ನಾಲೆಗಳಿಗೆ ನೀರು ಹರಿಸುವಂತೆ ಹಾಗೂ ಮೇಕೆದಾಟು ಯೋಜನೆ ಜಾರಿಗೊಳಿಸಬೇಕೆಂದು ಆಗ್ರಹಿಸಿ ಡಂಗೂರು ಹೊಡೆದು ಚಳವಳಿ ನಡೆಸಿ ಗಮನ ಸೆಳೆದರು.ಈ ವೇಳೆ ಅಧ್ಯಕ್ಷರಾದ ಅರುಣ್ ಕುಮಾರ್ ರಾಜ್ಯ ಕಾರ್ಯದರ್ಶಿ ಚಾಮರಾಜು ಮಂಡಕಳ್ಳಿ ಕಾರ್ಯಾಧ್ಯಕ್ಷ ನವೀನ್ ಕುಮಾರ್, ಶ್ರೀಧರ್ ನಾಯಕ್,ಸಂಚಾಲಕ ಮಂಚ ನಾಯಕ ಜಿಲ್ಲಾ ಕಾರ್ಯಾಧ್ಯಕ್ಷ ಶಿವಯೋಗಿ ಮಹಿಳಾ ಅಧ್ಯಕ್ಷೆ ಭಾಗ್ಯಮ್ಮ, ಕೃಷ್ಣ ನಾಯಕ,ನಾರಯಣ ಮೀಸೆ ಮಂಜಣ್ಣ ಇದ್ದರು.

ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘ ಹಳ್ಳಿಕೆರೆ ಹುಂಡಿ ಭಾಗ್ಯರಾಜ್ ನೇತೃತ್ವದಲ್ಲಿ ಕಾಡಾ ಕಚೇರಿ ಮುಂಭಾಗ ಗುರುವಾರ ಖಾಲಿ ಬಿಂದಿಗೆ ಪ್ರದರ್ಶಿಸಿ ಬಾರುಕೋಲ್ ಬೀಸಿ ನಾಲೆಗಳಿಗೆ ನೀರುಹರಿಸುಂತೆ ಒತ್ತಾಯಿಸಿದರು. ಇದೇ ವೇಳೆ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಪೊಲೀಸರೊಂದಿಗೆ ಮಾತಿನ ಚಕಮಕಿ ನಡೆಯಿತು. ಬಳಿಕ ರಸ್ತೆಗೆ ಅಡ್ಡಲಾಗಿ ಮಲಗಿ ಪ್ರತಿಭಟಿಸಲು ಮುಂದಾದರೂ ಈ ವೇಳೆ ಪೊಲೀಸರು ಅವರನ್ನು ಬಂಧಿಸಿ ಕರೆದೊಯ್ದರು.

ಖಜಾಂಚಿ ಕೆರೆಹುಂಡಿ ರಾಜಣ್ಣ, ಒಳಗೆರೆ ಗಣೇಶ್, ಪ್ರಕಾಶ್ ಗಾಂಧಿ, ಮಲಿಯೂರು ಮಹೇಂದ್ರ, ಗೌಡಕೆ ಸೋಮಣ್ಣ, ಅಂಗಡಿ ಸತೀಶ್, ದೇವನೂರು ನಾಗೇಂದ್ರ, ಕೆರೆಹುಂಡಿ ಶಿವಣ್ಣ, ಅರಳಿ ಕಟ್ಟೆ ಪ್ರಭುಸ್ವಾಮಿ, ಕಿಲ್ಲಿಂಪುರ ಶ್ರೀಕಂಠ, ಮುದ್ದಹಳ್ಳಿ ಮಧು, ಜೆಸಿಬಿ ಚಿದಂಬರ, ಅಂಡುವಿನಹಳ್ಳಿ ಮಹೇಶ್, ಮಹದೇವಪ್ಪ ಹಾಜರಿದ್ದರು.

ಪೊರಕೆ ಚಳವಳಿ: ಮೈಸೂರು ಜಿಲ್ಲಾ ಕನ್ನಡ ಚಳವಳಿಗಾರರ ಸಂಘ ತಮಿಳುನಾಡು ಮುಖ್ಯಮಂತ್ರಿ ವಿಜಯ್ ಹಾಗೂ ಇತರ ರಾಜಕೀಯ ಮುಖಂಡರ ವ್ಯಂಗ್ಯ ಚಿತ್ರಗಳಿಗೆ ಪೊರಕೆಯಲ್ಲಿ ಹೊಡೆಯುವ ಚಳವಳಿ ನಡೆಸಿದರು. ಸಂಘದ ಅಧ್ಯಕ್ಷ ಶಿವಶಂಕರ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಇನ್ನಿತರರು ಇದ್ದರು.

ಕನ್ನಡ ಸೇನೆ ಕರ್ನಾಟಕ ಜಿಲ್ಲಾ ಘಟಕದ ಕಾರ್ಯಕರ್ತರು ಕಾಡಾ ಕಚೇರಿ ಮುಂಭಾಗ ಕಾವೇರಿ ನೀರು ನಿರ್ವಹಣಾ ಮಂಡಳಿ ಸೂಚನೆ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಜತೆಗೆ ವಾಟಾಳ್ ನಾಗರಾಜ್ ಕರೆ ನೀಡಿದ ಬಂದ್‌ಗೆ ತಮ್ಮ ನೈತಿಕ ಬೆಂಬಲ ಸೂಚಿಸಿದರು. ಜಿಲ್ಲಾಧ್ಯಕ್ಷ ಎಂ.ಮಲ್ಲೇಶ್, ಎಂ.ಯು.ಶೈಲಜಾ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಕನ್ನಡ ವೇದಿಕೆ ಕಾರ್ಯಕರ್ತರಿಂದ ನಗರದ ಅಗ್ರಹಾರ ವೃತ್ತದಲ್ಲಿ ಪ್ರತಿಭಟನೆ ನಡೆಸಿ ವಾಟಾಳ್ ನಾಗರಾಜ್ ಅವರಿಗೆ ಬೆಂಬಲ ಸೂಚಿಸಿದರು. ಜತೆಗೆ ಕಾವೇರಿ ನೀರು ಬಿಡದಂತೆ ತಮ್ಮ ಆಕ್ರೋಶ ಹೊರ ಹಾಕಿದರು. ವೇದಿಕೆ ಅಧ್ಯಕ್ಷ ಬಾಲಕೃಷ್ಣ ಇನ್ನಿತರರು ಇದ್ದರು. ಕಾವೇರಿ ಕ್ರಿಯಾ ಸಮಿತಿಯಿಂದ ನಗರದ ದೊಡ್ಡ ಗಡಿಯಾರದ ಸಮೀಪ ಮೌನ ಚಳವಳಿ ನಡೆಸಿದರು. ಕ್ರಿಯಾ ಸಮಿತಿ ಅಧ್ಯಕ್ಷ

> **ಮೇಕೆದಾಟು ಯೋಜನೆ ಶೀಘ್ರ ಜಾರಿಗೊಳಿಸಬೇಕು. ನೆಲದಲ್ಲಿ ಹಾಸಿಗೆ ದಿಂಬು ಹಾಕಿ ನಿದ್ರಿಸುವ ಚಳುವಳಿ ಮೂಲಕ ಆಕ್ರೋಶ ಹೊರಹಾಕಿದ್ದೇವೆ. ತಮಿಳುನಾಡಿಗೆ ಕಾವೇರಿ ನೀರು ಹರಿಸಬಾರದು. ಕಾವೇರಿ ವಿವಾದ ಶೀಘ್ರ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಅಧಿವೇಶನದಲ್ಲಿ ತನ್ನ ನಿಲುವು ತಿಳಿಸಬೇಕು. ಇಲ್ಲದಿದ್ದರೆ ನಮ್ಮ ಹೋರಾಟ ನಿರಂತರವಾಗಿರಲಿದೆ.**
>
> **–ಮೋಹನ್ ಕುಮಾರ್ ಗೌಡ**

### 50 ಸಾವಿರ ಪರಿಹಾರ ಕೊಡಲಿ

> **ತಮಿಳುನಾಡಿಗೆ ನೀರು ಬಿಡುವುದು ನಿಲ್ಲಿಸಿ ರಾಜ್ಯದ ರೈತರ ಬೆಳೆಗಳಿಗೆ ನೀರು ಹರಿಸಬೇಕು. ಇಲ್ಲವಾದರೆ, ರೈತರಿಗೆ ಪ್ರತಿ ಎಕರೆಗೆ ಪರಿಹಾರವಾಗಿ 50 ಸಾವಿರ ಘೋಷಣೆ ಮಾಡಬೇಕು. ಈ ಬಗ್ಗೆ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಸ್ಪಷ್ಟಪಡಿಸಬೇಕು. ಅಲ್ಲಿಯವರೆಗೂ ರೈತಸಂಘದ ಹೋರಾಟ ಮುಂದುವರೆಯಲಿದೆ.**
>
> **–ಹಳ್ಳಿಕೆರೆಹುಂಡಿ ಭಾಗ್ಯರಾಜ್**

ಕರ್ನಾಟಕ ಸರ್ಕಾರ

## ಪ್ರವಾಸೋದ್ಯಮಕ್ಕೆ ಉತ್ತೇಜನ

# ನಾಡಿನ ಸಂಸ್ಕೃತಿಯ ಅನಾವರಣ






- **ಬಂಡೀಪುರ** ಮತ್ತು **ನಾಗರಹೊಳೆ ಅಭಯಾರಣ್ಯ**ಗಳಲ್ಲಿ **ಹುಲಿ ಸಫಾರಿ ಪುನರಾರಂಭ**
- ರಾಜ್ಯದ ಕರಾವಳಿ ತೀರದ **ಪ್ರವಾಸೋದ್ಯಮಕ್ಕೆ ಉತ್ತೇಜನ**
- ಕರ್ನಾಟಕ ಪ್ರವಾಸೋದ್ಯಮ ನೀತಿಯಡಿ **₹718.63 ಕೋಟಿ** ಅಂದಾಜು ಹೂಡಿಕೆಯ **45 ಬೃಹತ್ ಯೋಜನೆ**ಗಳಿಗೆ ಅನುಮೋದನೆ
- ಮುಜರಾಯಿ ಇಲಾಖೆಯ **33,000ಕ್ಕೂ ಹೆಚ್ಚು ದೇವಸ್ಥಾನಗಳ ಹುಂಡಿ ನಿರ್ವಹಣೆ** ಮತ್ತು **ರಕ್ಷಣೆಗೆ ಹೊಸ SOP ಜಾರಿ.** ವೀಡಿಯೋ ರೆಕಾರ್ಡಿಂಗ್, ಸಿಸಿಟಿವಿ ಹಾಗೂ ಡಿಜಿಟಲ್ ಪಾವತಿಗೆ ಒತ್ತು
- **ಮೈಸೂರು ದಸರಾದಲ್ಲಿ ಕಂಬಳ** ಆಯೋಜನೆ

## ಗ್ಯಾರಂಟಿ ಸರ್ಕಾರ

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ / ಬ್ರಾಹ್ಮಣ ಸಮುದಾಯಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ಶ್ರಾವಣಕ್ಕೆ ಚಾಲನೆ: 108 ಕುಂಭಾಭಿಷೇಕದಲ್ಲಿ ಮುಳುಗಿದ ಮಹದೇಶ್ವರನ ನಾಡು

ಹನೂರು: ಪವಿತ್ರ ಶ್ರಾವಣ ಮಾಸಕ್ಕೆ ಪ್ರಾರಂಭವಾಗಿದೆ. ಮಲೆ ಮಹ ದೇಶ್ವರ ಬೆಟ್ಟದಲ್ಲಿ 108 ಕುಂಭಾಭಿಷೇಕ ಮಹೋತ್ಸವ ಅದ್ದೂರಿಯಾಗಿ ನೆರವೇರಿ ಭಕ್ತಿಯ ಸಾಗರವೇ ಹರಿದುಬಂತು.

ಮುಂಜಾನೆಯಿಂದಲೇ ಸಾವಿರಾರು ಭಕ್ತರು "ಜೋ ಹರ ಹರ ಮಹದೇಶ್ವರ" ಘೋಷಗಳೊಂದಿಗೆ ಬೆಟ್ಟಕ್ಕೆ ಆಗಮಿಸಿದ್ದರು. ಕರ್ನಾಟಕದ ಜೊತೆಗೆ ತಮಿಳುನಾಡು, ಕೇರಳ, ಆಂಧ್ರಪ್ರದೇಶ ಸೇರಿದಂತೆ ನೆರೆಯ ರಾಜ್ಯಗಳಿಂದಲೂ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದು ಪುನೀತರಾದರು.



**ವೇದಮಂತ್ರಗಳ ನಡುವೆ 108 ಕಲಶ ಅಭಿಷೇಕ**

ಬೆಳಗ್ಗೆ 6 ಗಂಟೆಗೆ ಮಹಾ ಗಣಪತಿ ಪೂಜೆ, ನವಗ್ರಹ ಹೋಮದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ದೇವಸ್ಥಾನದ ಅರ್ಚಕರು 108 ಪವಿತ್ರ ಕಲಶಗಳಲ್ಲಿ ಗಂಗಾ, ಕಾವೇರಿ ಸೇರಿದಂತೆ ವಿವಿಧ ಪುಣ್ಯನದಿಗಳ ನೀರು ತುಂಬಿ, ವೇದ ಮಂತ್ರಗಳು ಮತ್ತು ಮಂಗಳವಾದ್ಯಗಳ ಮಧ್ಯೆ ಶ್ರೀ ಮಹದೇಶ್ವರ ಸ್ವಾಮಿಯ ಮೂಲ ವಿಗ್ರಹಕ್ಕೆ ವಿಶೇಷ ಅಭಿಷೇಕ ನೆರವೇರಿಸಿದರು. ಕುಂಭಾಭಿಷೇಕದ ಬಳಿಕ ಸ್ವಾಮಿಗೆ ಹಾಲು, ಮೊಸರು, ತುಪ್ಪ, ಜೇನು, ಎಳನೀರು, ಸುಗಂಧ ದ್ರವ್ಯಗಳಿಂದ ಮಹಾ ರುದ್ರಾಭಿಷೇಕ ಮಾಡಲಾಯಿತು. ಬಳಿಕ ಚಂದನ, ಕುಂಕುಮ, ಬಿಲ್ವಪತ್ರೆ ಮತ್ತು ವಿವಿಧ ಹೂವುಗಳಿಂದ ಸ್ವಾಮಿಯನ್ನು ಅಲಂಕರಿಸಲಾಗಿತ್ತು. ಸುಗಂಧದ ಪರಿಮಳ, ಭಜನೆ ಮತ್ತು ಘಂಟಾನಾದದಿಂದ ಇಡೀ ಬೆಟ್ಟವೇ ಭಕ್ತಿ ಮಯವಾಯಿತು.

**ಅನ್ನದಾಸೋಹದಲ್ಲಿ 10 ಸಾವಿರಕ್ಕೂ ಹೆಚ್ಚು ಭಕ್ತರು**

ಶ್ರಾವಣದ ಪ್ರಯುಕ್ತ ಆಗಮಿಸಿದ ಎಲ್ಲಾ ಭಕ್ತರಿಗೆ ದೇವಸ್ಥಾನ ಆಡಳಿತ ಮಂಡಳಿ ವತಿಯಿಂದ ಉಚಿತ ಅನ್ನದಾಸೋಹ ಏರ್ಪಡಿಸಲಾಗಿತ್ತು. ಬೆಳಗ್ಗಿನಿಂದ ಸಂಜೆಯವರೆಗೆ ನಿರಂತರವಾಗಿ ಪ್ರಸಾದ ವಿತರಿಸಲಾಯಿತು. ಸುಮಾರು 10 ಸಾವಿರಕ್ಕೂ ಅಧಿಕ ಭಕ್ತರು ಪ್ರಸಾದ ಸ್ವೀಕರಿಸಿದರು.

**ಭಕ್ತರ ಅನುಕೂಲಕ್ಕೆ ವಿಶೇಷ ವ್ಯವಸ್ಥೆ**

ಭಕ್ತರ ದಟ್ಟಣೆಯನ್ನು ಗಮನಿಸಿ ಪೊಲೀಸ್ ಇಲಾಖೆ ಹಾಗೂ ದೇವಸ್ಥಾನ ಆಡಳಿತ ಮಂಡಳಿ ಬಿಗಿ ಬಂದೋಬಸ್ತ್ ಏರ್ಪಡಿಸಿತ್ತು. ಕೆಎಸ್‌ಆರ್‌ಟಿಸಿ ವತಿಯಿಂದ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ, ಕುಡಿಯುವ ನೀರು, ತಾತ್ಕಾಲಿಕ ವೈದ್ಯಕೀಯ ಕೇಂದ್ರ, ವಿಶ್ರಾಂತಿ ಕೊಠಡಿಗಳನ್ನು ತೆರೆಯಲಾಗಿತ್ತು.

"ಶ್ರಾವಣ ಸೋಮವಾರ ಮಹದೇಶ್ವರನ ದರ್ಶನ ಮಾಡಿದರೆ 7 ಜನ್ಮದ ಪಾಪ ಪರಿಹಾರವಾಗುತ್ತದೆ ಎಂಬ ನಂಬಿಕೆ ನಮ್ಮದು. 108 ಕುಂಭಾಭಿಷೇಕ ಕಣ್ಣಾರೆ ಕಂಡು ಧನ್ಯರಾದೆವು" ಎಂದು ಚಾಮರಾಜನಗರದಿಂದ ಆಗಮಿಸಿದ್ದ ಭಕ್ತಾದಿಗಳು ಹೇಳಿದರು.

**ಮಲೆ ಮಹದೇಶ್ವರ ಬೆಟ್ಟ: ಶ್ರಾವಣಕ್ಕೆ ಅದ್ಧೂರಿ ಚಾಲನೆ**

ಪವಿತ್ರ ಶ್ರಾವಣ ಮಾಸಕ್ಕೆ ಮಂಗಳವಾರಂಭವಾಗಿದೆ. ಶ್ರಾವಣದ ಮೊದಲ ಸೋಮವಾರದಂದು ಮಲೆ ಮಹದೇಶ್ವರ ಬೆಟ್ಟದಲ್ಲಿ 108 ಕುಂಭಾಭಿಷೇಕ*ಮಹೋತ್ಸವ ಅದ್ದೂರಿಯಾಗಿ ನೆರವೇರಿ ಭಕ್ತಿಯ ಸಾಗರವೇ ಹರಿದುಬಂತು. ಮುಂಜಾನೆಯಿಂದಲೇ ಸಾವಿರಾರು ಭಕ್ತರು "ಜೋ ಹರ ಹರ ಮಹದೇಶ್ವರ" ಘೋಷಗಳೊಂದಿಗೆ ಬೆಟ್ಟಕ್ಕೆ ಆಗಮಿಸಿದ್ದರು. ಕರ್ನಾಟಕದ ಜೊತೆಗೆ ತಮಿಳುನಾಡು, ಕೇರಳ, ಆಂಧ್ರಪ್ರದೇಶ ಸೇರಿದಂತೆ ನೆರೆಯ ರಾಜ್ಯಗಳಿಂದಲೂ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದು ಪುನೀತರಾದರು.

**ವೇದಮಂತ್ರಗಳ ನಡುವೆ 108 ಕಲಶ ಅಭಿಷೇಕ**

ಬೆಳಗ್ಗೆ 6 ಗಂಟೆಗೆ ಮಹಾ ಗಣಪತಿ ಪೂಜೆ, ನವಗ್ರಹ ಹೋಮದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ದೇವಸ್ಥಾನದ ಅರ್ಚಕರು 108 ಪವಿತ್ರ ಕಲಶಗಳಲ್ಲಿ ಗಂಗಾ, ಕಾವೇರಿ ಸೇರಿದಂತೆ ವಿವಿಧ ಪುಣ್ಯನದಿಗಳ ನೀರು ತುಂಬಿ, ವೇದ ಮಂತ್ರಗಳು ಮತ್ತು ಮಂಗಳವಾದ್ಯಗಳ ಮಧ್ಯೆ ಶ್ರೀ ಮಹದೇಶ್ವರ ಸ್ವಾಮಿಯ ಮೂಲ ವಿಗ್ರಹಕ್ಕೆ ವಿಶೇಷ ಅಭಿಷೇಕ ನೆರವೇರಿಸಿದರು.

ಕುಂಭಾಭಿಷೇಕದ ಬಳಿಕ ಸ್ವಾಮಿಗೆ ಹಾಲು, ಮೊಸರು, ತುಪ್ಪ, ಜೇನು, ಎಳನೀರು, ಸುಗಂಧ ದ್ರವ್ಯಗಳಿಂದ ಮಹಾ ರುದ್ರಾಭಿಷೇಕ ಮಾಡಲಾಯಿತು. ಬಳಿಕ ಚಂದನ, ಕುಂಕುಮ, ಬಿಲ್ವಪತ್ರೆ ಮತ್ತು ವಿವಿಧ ಹೂವುಗಳಿಂದ ಸ್ವಾಮಿಯನ್ನು ಅಲಂಕರಿಸಲಾಗಿತ್ತು. ಸುಗಂಧದ ಪರಿಮಳ, ಭಜನೆ ಮತ್ತು ಘಂಟಾನಾದದಿಂದ ಇಡೀ ಬೆಟ್ಟವೇ ಭಕ್ತಿ ಮಯವಾಯಿತು.

**ಅನ್ನದಾಸೋಹದಲ್ಲಿ 10 ಸಾವಿರಕ್ಕೂ ಹೆಚ್ಚು ಭಕ್ತರು**

ಶ್ರಾವಣದ ಪ್ರಯುಕ್ತ ಆಗಮಿಸಿದ ಎಲ್ಲಾ ಭಕ್ತರಿಗೆ ದೇವಸ್ಥಾನ ಆಡಳಿತ ಮಂಡಳಿ ವತಿಯಿಂದ ಉಚಿತ ಅನ್ನದಾಸೋಹ ಏರ್ಪಡಿಸಲಾಗಿತ್ತು. ಬೆಳಗ್ಗಿನಿಂದ ಸಂಜೆಯವರೆಗೆ ನಿರಂತರವಾಗಿ ಪ್ರಸಾದ ವಿತರಿಸಲಾಯಿತು. ಸುಮಾರು 10 ಸಾವಿರಕ್ಕೂ ಅಧಿಕ ಭಕ್ತರು ಪ್ರಸಾದ ಸ್ವೀಕರಿಸಿದರು.

**ಭಕ್ತರ ಅನುಕೂಲಕ್ಕೆ ವಿಶೇಷ ವ್ಯವಸ್ಥೆ**

ಭಕ್ತರ ದಟ್ಟಣೆಯನ್ನು ಗಮನಿಸಿ ಪೊಲೀಸ್ ಇಲಾಖೆ ಹಾಗೂ ದೇವಸ್ಥಾನ ಆಡಳಿತ ಮಂಡಳಿ ಬಿಗಿ ಬಂದೋಬಸ್ತ್ ಏರ್ಪಡಿಸಿತ್ತು. ಕೆಎಸ್‌ಆರ್‌ಟಿಸಿ ವತಿಯಿಂದ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ, ಕುಡಿಯುವ ನೀರು, ತಾತ್ಕಾಲಿಕ ವೈದ್ಯಕೀಯ ಕೇಂದ್ರ, ವಿಶ್ರಾಂತಿ ಕೊಠಡಿಗಳನ್ನು ತೆರೆಯಲಾಗಿತ್ತು. "ಶ್ರಾವಣ ಸೋಮವಾರ ಮಹದೇಶ್ವರನ ದರ್ಶನ ಮಾಡಿದರೆ 7 ಜನ್ಮದ ಪಾಪ ಪರಿಹಾರವಾಗುತ್ತದೆ ಎಂಬ ನಂಬಿಕೆ ನಮ್ಮದು. 108 ಕುಂಭಾಭಿಷೇಕ ಕಣ್ಣಾರೆ ಕಂಡು ಧನ್ಯರಾದೆವು" ಎಂದು ಚಾಮರಾಜನಗರದ ಭಕ್ತಾದಿಗಳು ಹೇಳಿದರು.

## ಕರ್ನಾಟಕ ಬಂದ್ ಬೆಂಬಲಿಸಿ ಗಡಿನಾಡು ಕನ್ನಡ ರಕ್ಷಣಾ ವೇದಿಕೆಯಿಂದ ಪ್ರತಿಭಟನೆ




ಚಾಮರಾಜನಗರ: ತಮಿಳುನಾಡಿಗೆ ಕಾವೇರಿ ನೀರು ಹರಿಸಬೇಕು ಎಂದು ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶವನ್ನು ಖಂಡಿಸಿ ಕನ್ನಡ ಚಳವಳಿಗಾರ ವಾಟಾಳ್ ನಾಗರಾಜ್, ಕನ್ನಡಪರ ಸಂಘಟನೆಗಳು ಕರೆ ನೀಡಿದ ಕರ್ನಾಟಕ ಬಂದ್ ಬೆಂಬಲಿಸಿ ಗಡಿನಾಡು ಕನ್ನಡ ರಕ್ಷಣಾ ವೇದಿಕೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮರಾಜೇಶ್ವರ ಉದ್ಯಾನವನ ಮುಂಭಾಗದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ ಪಡಿಸಿದರು. ಈ ಸಂದರ್ಭದಲ್ಲಿ ನಿಜಧ್ವನಿಗೋವಿಂದರಾಜು ಮಾತನಾಡಿ, ರಾಜ್ಯಾದ್ಯಂತ ಕನ್ನಡ ಚಳವಳಿಗಾರ ವಾಟಾಳ್‌ನಾಗರಾಜ್ ಅವರ ನೇತೃತ್ವದಲ್ಲಿ ಕನ್ನಡ ಪರ ಸಂಘಟನೆಗಳು ಕರೆ ನೀಡಿರುವ ಕರ್ನಾಟಕ ಬಂದ್ ಬೆಂಬಲಿಸಿ ರಾಜ್ಯ ಸರ್ಕಾರ, ತಮಿಳುನಾಡು ಸರ್ಕಾರ, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಹೋರಾಟ ಮಾಡಲಾಗುತ್ತಿದೆ. ಕಾವೇರಿ ನೀರು ನಿರ್ವಹಣಾ ಸಮಿತಿ ಕೆ.ಆರ್ ಎಸ್‌ನಿಂದ ತಮಿಳುನಾಡಿಗೆ 12 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಆದೇಶ ನೀಡಿರುವುದು ಅತ್ಯಂತ ಖಂಡನೀಯವಾದದ್ದು. ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶವನ್ನು ಖಂಡಿಸಿ ಹೋರಾಟ ಮಾಡುವವರನ್ನು ರಾಜ್ಯಸರ್ಕಾರ ಬಂಧಿಸುವ ಮೂಲಕ ಚಳವಳಿಯನ್ನು ಹತ್ತಿಕ್ಕಿವ ಕೆಲಸವನ್ನು ಮಾಡುತ್ತಿದೆ. ಮುಖ್ಯಮಂತ್ರಿಗಳೇ ನೀವು ಹೋರಾಟ ಮಾಡಿದರೆ ಸರ್ಕಾರ ಸುಮ್ಮನಿರಬೇಕಾ. ? ನಾವು ನೀರಿಗಾಗಿ ಹೋರಾಟ ಮಾಡಿದರೆ ನಮ್ಮ ಮೇಲೆ ಪೋಲಿಸರ ಮುಖಾಂತರ ದೌರ್ಜನ್ಯ, ದಬ್ಬಾಳಿಕೆ ಮಾಡುವುದು ನ್ಯಾಯವೇ ? ಮಾಜಿ ಮುಖ್ಯಮಂತ್ರಿ ಬಂಗಾರಪ್ಪ ಅವರ ಸರ್ಕಾರದಲ್ಲಿ ಸುಗ್ರೀವಾಜ್ಞೆ ತಂದು ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶವನ್ನು ಧಿಕ್ಕರಿಸಿತು ಅದೇ ಮಾದರಿಯಲ್ಲಿ ರಾಜ್ಯ ಸರ್ಕಾರ ಕಾವೇರಿ ನಿರ್ವಹಣಾ ಮಂಡಳಿ ಆದೇಶವನ್ನು ಧಿಕ್ಕರಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಗಡಿನಾಡು ಕನ್ನಡ ರಕ್ಷಣಾ ವೇದಿಕೆ ಗೌರವ ಅಧ್ಯಕ್ಷ ಚಾ.ಸಿ.ಸಿದ್ದರಾಜು, ಜಿಲ್ಲಾಧ್ಯಕ್ಷ ಎಂ.ನಾಗೇಶ್, ಪ್ರಧಾನ ಕಾರ್ಯದರ್ಶಿ ವಿಘ್ನೇಶ್, ಉಪಾಧ್ಯಕ್ಷ ಕಾರ್ತಿಕ್, ಮುಖಂಡ ಮುತ್ತಿಗೆ ಗೋವಿಂದರಾಜ, ಸದಸ್ಯರಾದ ಮಂಜು, ನಿತಿನ್, ಹರೀಶ್, ಮಹೇಶ್, ಅನಿಲ್, ಮಹೇಶ್, ಅಭಿಷೇಕ್, ಗಿರೀಶ್, ಅಕಾಶ್ ಇತರರು ಭಾಗವಹಿಸಿದ್ದರು ,

## ಬಂದ್‌ಗೆ ಬೆಂ.ದಕ್ಷಿಣದಲ್ಲಿ ನೀರಸ ಪ್ರತಿಕ್ರಿಯೆ

ರಾಮನಗರ: ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ವಿರೋಧಿಸಿ ಕನ್ನಡ ಪರ ಸಂಘಟನೆಗಳ ಒಕ್ಕೂಟ ನೀಡಿದ್ದ ಕರ್ನಾಟಕ ಬಂದ್‌ಗೆ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಪ್ರತಿಭಟನೆಗಳಿಗಷ್ಟೇ ಸೀಮಿತವಾಗಿತ್ತು.

ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸುವಂತೆ ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ಆದೇಶದ ವಿರುದ್ಧ ಕನ್ನಡ ಪರ ಸಂಘಟನೆಗಳ ಒಕ್ಕೂಟ ಕರ್ನಾಟಕ ಬಂದ್‌ಗೆ ಕರೆ ನೀಡಿದ್ದವು. ಜಿಲ್ಲೆಯಲ್ಲಿ ರಸ್ತೆ ಸಾರಿಗೆ ಬಸ್‌ಗಳ ಸೇವೆ ಮತ್ತು ರೈಲು ಸೇವೆ ಎಂದಿನಂತೆ ಇತ್ತು. ಸರ್ಕಾರಿ ಮತ್ತು ಖಾಸಗಿ ಶಾಲಾ-ಕಾಲೇಜುಗಳು ಎಂದಿನಂತೆ ನಡೆದವು. ಎ.ಪಿ.ಎಂ.ಸಿ ಮಾರುಕಟ್ಟೆ, ರೇಷ್ಮೆ ಮಾರುಕಟ್ಟೆಗಳು, ಹೋಟೆಲ್, ಪೆಟ್ರೋಲ್ ಬಂಕ್‌ಗಳು, ಬ್ಯಾಂಕ್‌ಗಳು, ಚಿತ್ರಮಂದಿರಗಳು ಎಂದಿನಂತೆ ಕಾರ್ಯನಿರ್ವಹಿಸಿದವರು. ಅಂಗಡಿ, ಮುಂಗಟ್ಟುಗಳಲ್ಲಿನ ವ್ಯವಹಾರಕ್ಕೆ ಬಾಧಕವಾಗಲಿಲ್ಲ. ಜನ ಜೀವನ ಎಂದಿನಂತೆ ನಡೆಯಿತು. ಕರ್ನಾಟಕ ಬಂದ್ ವೇಳೆ ಅಹಿತಕರ ಘಟನೆಗಳಿಗೆ ಅವಕಶವಾಗದಂತೆ ಜಿಲ್ಲಾ ಪೊಲೀಸರು ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದರು.

HOUSE FOR RENT
Ground Floor 2 BHK Attached Bathroom
Only for Vegetarian
Contact
9945901001

# ಕಾವೇರಿ ವಿವಾದ: ಕಲಾಪ ಬಹಿಷ್ಕಾರ

## ಚಾ.ನಗರ ಜಿಲ್ಲಾ ವಕೀಲರ ಸಂಘದ ವತಿಯಿಂದ ಕರ್ನಾಟಕ ಬಂದ್‌ಗೆ ಬೆಂಬಲ

ಚಾಮರಾಜನಗರ, ತಮಿಳುನಾಡಿಗೆ ಕಾವೇರಿ ನೀರು ಹರಿಸಬೇಕೆಂಬ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ಖಂಡಿಸಿ ರೈತ ಸಂಘಟನೆ, ಕನ್ನಡಪರ ಸಂಘಟನೆಗಳು ಗುರುವಾರ ನೀಡಿದ್ದ ಕರ್ನಾಟಕ ಬಂದ್ ಗೆ ಬೆಂಬಲ ನೀಡಿ ಕೋರ್ಟ್ ಕಲಾಪಗಳನ್ನು ಬಹಿಷ್ಕರಿಸಿ ಜಿಲ್ಲಾ ವಕೀಲರ ಸಂಘದ ವತಿಯಿಂದ ಸಂಪೂರ್ಣ ಬೆಂಬಲ ನೀಡುತ್ತಿದ್ದೇವೆ ಎಂದು ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ಪುಟ್ಟಸ್ವಾಮಿ ರಾಮಸಮುದ್ರ ಅವರು ತಿಳಿಸಿದರು.



ನಗರದ ಜಿಲ್ಲಾ ಕೋರ್ಟ್ ಆವರಣದಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ತೀರ್ಪನ್ನು ಖಂಡಿಸಿ ನಡೆಯುತ್ತಿರುವ ಕರ್ನಾಟಕ ಬಂದ್ ಕರೆಗೆ ಬೆಂಬಲ ಸೂಚಿಸಿ ಮಾತನಾಡಿದ ಅವರು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಮಿಳುನಾಡಿಗೆ ನೀರು ಹರಿಸುವ ನಿರ್ಧಾರ ಖಂಡನೀಯ. ನಮ್ಮ ರಾಜ್ಯದ ಜನತೆಗೆ ಕುಡಿಯಲು ನೀರು ಇಲ್ಲ ಇಂತಹ ಸಂದರ್ಭದಲ್ಲಿ ತಮಿಳುನಾಡಿಗೆ ವ್ಯವಸಾಯಕ್ಕೋಸ್ಕರ ನೀರು ಬಿಡುವ ಕಾವೇರಿ ಪ್ರಾಧಿಕಾರ ನಿರ್ವಹಣಾ ಮಂಡಳಿಯ ತೀರ್ಪು ಸಮಾಂಜಸವಲ್ಲ, ಹಾಗೂ ಕಾನೂನು ಬದ್ಧವಾದದ್ದಲ್ಲ. ಈ ಬಗ್ಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಗಮನ ಹರಿಸದೆ ಇರುವುದು ಶೋಚನಿಯ ವಿಚಾರವಾಗಿದೆ. ಆದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮಂಡಳಿಗೆ ತಮಿಳುನಾಡಿಗೆ ನೀರು ಹರಿಸುವುದನ್ನ ಕೈ ಬಿಡಬೇಕು ಎಂಬ ಸೂಚನೆಯನ್ನು ನೀಡಬೇಕು

ಇದರಿಂದ ಕರ್ನಾಟಕದ ಎಲ್ಲಾ ಜನರಿಗೆ ಅನುಕೂಲವಾಗುತ್ತದೆ. ಇಂದು ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮಂಡಳಿಯ ವಿರುದ್ಧ ರೈತಪರ, ಪ್ರಗತಿಪರ ಸಂಘಟನೆಗಳು ನೀಡಿರುವ ಕರ್ನಾಟಕ ಬಂದ್ ಕರೆಗೆ ನಮ್ಮ ಜಿಲ್ಲಾ ವಕೀಲರ ಸಂಘದ ವತಿಯಿಂದ ಕೋರ್ಟ್ ಕಾರ್ಯಕಲಾಪಗಳನ್ನು ಬಹಿಷ್ಕರಿಸಿ ಸಂಪೂರ್ಣವಾಗಿ ಬೆಂಬಲವನ್ನು ನೀಡುತ್ತಿದ್ದೇವೆ ಎಂದು ತಿಳಿಸಿದರು.

ಜಿಲ್ಲಾ ವಕೀಲ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಶಿವರಾಮ ಮಾತನಾಡಿ, ಕಾವೇರಿ ನೀರು ಹರಿಸುವ ಕಾವೇರಿ ಪ್ರಾಧಿಕಾರದ ತೀರ್ಪು ಅವೈಜ್ಞಾನಿಕವಾದದ್ದು, ನಮ್ಮ ಜನರಿಗೆ ಕುಡಿಯಲು ನೀರಿನ ಸಮಸ್ಯೆ ಹೆಚ್ಚಾಗಿದ್ದು ಇಂತಹ ಸಂದರ್ಭದಲ್ಲಿ ತಮಿಳುನಾಡು ರಾಜ್ಯಕ್ಕೆ ನೀರು ಬಿಡುವ ನಿರ್ಧಾರ ಅವೈಜ್ಞಾನಿಕವಾದದ್ದು, ಈ ವಿಚಾರವನ್ನು ಕೂಡಲೇ ಕೈಬಿಡಬೇಕು. ಸರ್ಕಾರಗಳು ಮಧ್ಯಪ್ರವೇಶಿಸಿ ನೀರು ಬಿಡುವುದನ್ನು ನಿಲ್ಲಿಸಬೇಕು. ರಾಜ್ಯದಾದ್ಯಂತ ನಡೆಯುತ್ತಿರುವ ಕರ್ನಾಟಕ ಬಂದ್ ಗೆ ನಮ್ಮ ಸಂಘದ ವತಿಯಿಂದ ಬೆಂಬಲ ನೀಡುತ್ತಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ರಂಗಸ್ವಾಮಿ, ಸಹ ಕಾರ್ಯದರ್ಶಿಗಳಾದ ಸಿಸಿ. ರಮೇಶ್, ಸಾಮಾನ್ಯ ಸದಸ್ಯರಾದ ಉಮೇಶ್,ಸವಿತಾ, ವಿಜಯ್ ಮತ್ತು ಮಲ್ಲೇಶ್ ಪ್ರಭು, ವಕೀಲರಾದ ದಲಿತ್ ರಾಜು ಶಿವಲಿಂಗೇಗೌಡರು, ವಿ.ನಾಗರಾಜೇಂದ್ರ, ಎ.ಎಸ್. ವಿಜಯಕುಮಾರ್, ನಾಗರಾಜು ಬದನಗುಪ್ಪೆ, ಹೊಂಗನೂರು ಮಹೇಶ್,ಜಯಪ್ರಕಾಶ್,ಎಸ್, ಮಂಜು ಹರವೆ,ಶಿವಕುಮಾರ್,ಸಿಎನ್ ಮಾದು, ಲೋಕೇಶ್,ಮಹೇಂದ್ರ, ನಾಗಾರ್ಜುನ್ ಪೃಥ್ವಿ, ಅರುಣ್ ಕುಮಾರ್ ಸೇರಿದಂತೆ ಇತರರಿದ್ದರು.

## ಸರ್ಕಾರದ ನಿಲುವುಗೆ ಖಂಡನೆ

ಗುಂಡ್ಲುಪೇಟೆ: ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ತಮಿಳುನಾಡು ಸರ್ಕಾರದ ನಿಲುವನ್ನು ಖಂಡಿಸಿ ಕರ್ನಾಟಕ ಕಾವಲು ಪಡೆಯ ವತಿಯಿಂದ ಪಟ್ಟಣದ ಸರ್ಕಾರಿ ಬಸ್ ನಿಲ್ದಾಣದ ಮುಂಭಾಗ ಗುರುವಾರ ವಿನೂತನ ಪ್ರತಿಭಟನೆ ನಡೆಸಲಾಯಿತು.

ಹೋರಾಟಗಾರರು ಕೈಕಟ್ಟಿ, ಬಾಯಿ ಮುಚ್ಚಿಕೊಂಡು ಮಲಗುವ ಮೂಲಕ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿ, ಬಳಿಕ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಕಾವಲು ಪಡೆಯ ತಾಲ್ಲೂಕು ಅಧ್ಯಕ್ಷ ಎ. ಅಬ್ದುಲ್ ಮಾಲಿಕ್ ಮಾತನಾಡಿ, ಕಾವೇರಿ ನೀರಿನ ವಿಚಾರದಲ್ಲಿ ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಂಡು ರಾಜ್ಯದ ರೈತರು ಹಾಗೂ ಸಾರ್ವಜನಿಕರ ಹಿತ ಕಾಪಾಡಬೇಕು ಎಂದು ಆಗ್ರಹಿಸಿದರು. ಮಾನವ ಬಂಧುತ್ವ ವೇದಿಕೆಯ ಜಿಲ್ಲಾ ಸಂಚಾಲಕ ಮಾಡ್ರಹಳ್ಳಿ ಸುಭಾಷ್ ಅವರು ಕಾವೇರಿ ಪ್ರಾಧಿಕಾರದ ನಿಲುವನ್ನು ಖಂಡಿಸಿದರು. ಕರವೇ ಜಿಲ್ಲಾ ಕಾರ್ಯದರ್ಶಿ ರಿಯಾಸ್ ಪಾಷ ಅವರು ಕಾವೇರಿ ವಿಚಾರದಲ್ಲಿ ನಿರಂತರವಾಗಿ ವಿವಾದ ಸೃಷ್ಟಿಸುತ್ತಿರುವ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಂತರ ಹೋರಾಟಗಾರರು ಊಟಿ?ಮೈಸೂರು ಹೆದ್ದಾರಿಯಲ್ಲಿ ಮೌನ ಮೆರವಣಿಗೆ ನಡೆಸಿ ತಾಲ್ಲೂಕು ಕಚೇರಿಗೆ ತೆರಳಿ ತಾಲ್ಲೂಕು ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಕಾವಲು ಪಡೆಯ ತಾಲ್ಲೂಕು ಕಾರ್ಯದರ್ಶಿ ಎಸ್. ಮುಬಾರಕ್, ವನ್ಯಜೀವಿ ಸಂರಕ್ಷಣಾ ಸಮಿತಿಯ ತಾಲ್ಲೂಕು ಅಧ್ಯಕ್ಷ ಪಿ. ಬಾಲು, ಕಾವಲು ಪಡೆಯ ಜಿಲ್ಲಾ ಕಾರ್ಯಾಧ್ಯಕ್ಷ ಅಬ್ದುಲ್ ರಷೀದ್, ತಾಲ್ಲೂಕು ಗೌರವಾಧ್ಯಕ್ಷ ರಾಮೇಗೌಡ, ಉಪಾಧ್ಯಕ್ಷರಾದ ಆರ್. ಮಂಜುನಾಥ್, ಶಿವಕುಮಾರ್, ತಾಲ್ಲೂಕು ಸಂಚಾಲಕ ಕುಂಜುಟ್ಟಿ, ಟೌನ್ ಅಧ್ಯಕ್ಷ ಸಾದಿಕ್ ಪಾಷ, ಗೌರವಾಧ್ಯಕ್ಷ ಶಕೀಲ್, ಟೌನ್ ಸಂಚಾಲಕ ಮಿಮಿಕ್ರಿ ರಾಜು, ಜಾಹೀರ್ ಹುಸೇನ್, ಡ್ಯಾನ್ಸರ್ ಪವನ್, ಮಲ್ಲಯ್ಯ ಮಾಸ್ಟರ್, ರಾಚಪ್ಪನಾಯಕ್, ಕರವೇ ಸಂಚಾಲಕ ನಾಗೇಂದ್ರ ಸೇರಿದಂತೆ ಸಾರ್ವಜನಿಕರು ಭಾಗವಹಿಸಿದ್ದರು



## ಭೀಮನ ಅಮಾವಸ್ಯೆ : ಕಾಳಿಕಾಂಭ ದೇವಸ್ಥಾನದಲ್ಲಿ ಸೀರೆ ಅಲಂಕಾರ

ಚಾಮರಾಜನಗರ, ನಗರದ ಕಾಳಮ್ಮನ ಗುಡಿ ಬೀದಿಯಲ್ಲಿರುವ ಶ್ರೀ ಕಾಳಿಕಾಂಬ ದೇವಸ್ಥಾನದಲ್ಲಿ ಭೀಮನ ಅಮಾವಸ್ಯೆ ಪ್ರಯುಕ್ತ ದೇವಿಗೆ ವಿಶೇಷವಾಗಿ ನೂರಾರು ಸೀರೆಗಗಳಿಂದ ಆಲಂಕಾರ ಮಾಡಲಾಗಿತ್ತು.



ಬೆಳಗ್ಗೆ 5 ಗಂಟೆಗೆ ಶ್ರೀ ಕಮಟೇಶ್ವರ ಸಮೇತ ಶ್ರೀ ಕಾಳಿಕಾಂಬಾ ದೇವಿ, ಶ್ರೀ ಚಕ್ರ ಬಲಮುರಿ ವಿನಾಯಕ ಸುಬ್ರಹ್ಮಣ್ಯ ಶ್ರೀ ಆಂಜನೇಯ ಸ್ವಾಮಿ ಮತ್ತು ಪರಿವಾರ ದೇವತಾ ಮೂರ್ತಿ ಗಳಿಗೆ ಅಭಿ??ಕ ಪೂಜೆ, ವಿಶೇಷ ಹೂವಿನ ಅಲಂಕಾರ ಮಾಡಿ, ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಯಿತು. ಕೊನೆಯ ಆಷಾಡ ಶುಕ್ರವಾರದಂದು ಶ್ರೀ ಕಾಳಿಕಾಂಬ ದೇವಿಗೆ ಸಾವಿರಾರು ಬಳೆಗಳಿಂದ ಗರ್ಭಗುಡಿ ಪೂರ್ಣ ಅಲಂಕಾರ ಮಾಡಲಾಗಿತ್ತು. ಇಂದು ಭೀಮನ ಅಮಾವಸ್ಯೆ ಪ್ರಯುಕ್ತ ಪೂಜೆಗೆ ಆಗಮಿಸಿದ್ದ ಮಹಿಳೆಯರಿಗೆ ಬಳೆಗಳನ್ನು ವಿತರಣೆ ಮಾಡಲಾಯಿತು. ಆಷಾಢ ಶುಕ್ರವಾರದ ನಾಲ್ಕು ವಾರಗಳು ಹಾಗೂ ಭೀಮನ ಅಮಾವಸ್ಯೆ ಪೂಜೆಯಲ್ಲಿ ಭಾಗವಹಿಸಿ ಪ್ರಾರ್ಥಿಸಿಕೊಂಡರು.

## ಕಾವೇರಿ ನಿರ್ವಹಣಾ ಮಂಡಳಿ ವಿರುದ್ಧ ಪ್ರತಿಭಟನೆ

**ಚಾಮರಾಜನಗರ:** ಕಾವೇರಿ ನೀರು ನಿರ್ವಹಣಾ ಮಂಡಳಿ ಕರ್ನಾಟಕ ರಾಜ್ಯದ ಪಾಲಿಗೆ ಸತ್ತುಹೋಗಿದೆ ಎಂದು ಆರೋಪಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಡ್ಲೆಪುರಿ, ಹೂ, ಅರಿಶಿನ, ಕುಂಕುಮ ಎರಚಿ ಅಕ್ರೋಶ ವ್ಯಕ್ತಪಡಿಸಿದರು.



ನಗರದ ಚಾಮರಾಜೇಶ್ವರ ಉದ್ಯಾನವನ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಕಾವೇರಿ ನೀರು ನಿರ್ವಹಣಾ ಮಂಡಳಿ ಕರ್ನಾಟಕ ರಾಜ್ಯದ ಪಾಲಿ ಸತ್ತು ಹೋಗಿದೆ ಎಂಬ ಪೋಸ್ಟರ್ ಹಿಡಿದು ಕಡ್ಲೆಪುರಿ, ಹೂ, ಅರಿಶಿನ, ಕುಂಕುಮ ಎರಚಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಕಾವೇರಿ ನೀರನ್ನು ತಮಿಳುನಾಡಿಗೆ ಬಿಡುವಂತೆ ಆದೇಶ ನೀಡಿರುವುದನ್ನು ಖಂಡಿಸಿ ಕಾವೇರಿ ನೀರು ನಿರ್ವಹಣಾ ಮಂಡಳಿ ಕರ್ನಾಟಕ ರಾಜ್ಯದ ಪಾಲಿಗೆ ಸತ್ತು ಹೋಗಿದೆ ಎಂದು ಆರೋಪಿಸಿ ಕಾವೇರಿ ನೀರು ನಿರ್ವಹಣಾ ಮಂಡಳಿ ಸತ್ತು ಹೋಗಿದೆ ಎಂಬ ಪೋಸ್ಟರ್ ಹಿಡಿದು ಕಡ್ಲೆಪುರಿ, ಹೂ, ಅರಿಶಿನ, ಕುಂಕುಮ ಎರಚಿ ಹೋರಾಟ ಮಾಡಿದ್ದೇವೆ. ಕಾವೇರಿ ನೀರು ನಿರ್ವಹಣಾ ಮಂಡಳಿ ಒಂದು ದಿನ ಬಂದು ನೋಡಲಿಲ್ಲ ಜಲಾಶಯಗಳನ್ನು ಪರಿಶೀಲನೆ ಮಾಡಿಲ್ಲ. ರಾಜ್ಯದ 24 ಜಿಲ್ಲೆಗಳಲ್ಲಿ ಬರವಿದ್ದು, ಜನ ಜಾನುವಾರು ಕುಡಿಯುವ ನೀರಿಗೆ ಪರಿತಪಿಸುವಂತಾಗಿದೆ. ನಮಗೆ ಕುಡಿಯಲು ನೀರಿಲ್ಲ ಎಂದ ಮೇಲೆ ತಮಿಳುನಾಡಿಗೆ ಹೇಗೆ ನೀರು ಕೊಡುವುದು ಎಂದು ಖಾರವಾಗಿ ಖಂಡಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ಕಾವಲುಪಡೆ ಪರಶಿವಮೂರ್ತಿ, ಕಿರಣ್ ಕುಮಾರ್, ವರದರಾಜು, ನಾರಾಯಣ್, ನಿಜಧ್ವನಿಗೋವಿಂದರಾಜು, ಕಾರ್ ಮಹದೇವನಾಯಕ, ಕಂಡಕ್ಟರ್ ಚಾ.ಸಿ.ಸೋಮನಾಯಕ, ಪಣ್ಯದಹುಂಡಿ ರಾಜು, ನಂಜುಂಡಸ್ವಾಮಿ, ಸುರೇಶ್ ಗೌಡ, ಸುಬ್ಬಯ್ಯ, ಮಹೇಶ್ ಗೌಡ, ರಾಜಪ್ಪ, ಶಿವು, ಸತೀಶ್, ನಾಗಪ್ಪ ಹೊನ್ನಹಳ್ಳಿ, ಜಗದೀಶ್, ಆಟೋ ಲಿಂಗರಾಜು, ಸೋಮವಾರಪೇಟೆ ಮಂಜು, ರಮೇಶ್ ಇತರರು ಭಾಗವಹಿಸಿದ್ದರು.

**ಕೇಂದ್ರ ತಂಡದಿಂದ ಮೆಚ್ಚುಗೆ**

# ಗುಂಡ್ಲುಪೇಟೆ ಮಲೇರಿಯಾ ಮುಕ್ತ ತಾಲ್ಲೂಕು

ಗುಂಡ್ಲುಪೇಟೆ: ತಾಲ್ಲೂಕಿನಲ್ಲಿ ಮಲೇರಿಯಾ ನಿರ್ಮೂಲನಾ ಕಾರ್ಯಕ್ರಮದಡಿ ಕೈಗೊಂಡಿರುವ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಲು ನವದೆಹಲಿಯ ಉಪ-ರಾಷ್ಟ್ರೀಯ ಮಲೇರಿಯಾ ನಿರ್ಮೂಲನಾ ತಂಡವು ಗುರುವಾರ ಗುಂಡ್ಲುಪೇಟೆ ತಾಲ್ಲೂಕಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು.



ನವದೆಹಲಿಯ ಹೆಚ್ಚುವರಿ ನಿರ್ದೇಶಕ ಡಾ. ಶೌಕತ್ ಕಮಾಲ್, ಸೇಲಂ ವಲಯದ ಪ್ರಾದೇಶಿಕ ಕೀಟಶಾಸ್ತ್ರಜ್ಞ ಡಾ.ಎ.ಶಿವಕುಮಾರ್, ವಿಶ್ವ ಆರೋಗ್ಯ ಸಂಸ್ಥೆಯ ಸಲಹೆಗಾರ ಡಾ. ಶ್ಯಾಮ್ ಕುಮಾರ್ ಅಡಪ್ಪ ಹಾಗೂ ಹೈದರಾಬಾದ್ ಪ್ರಾದೇಶಿಕ ಅಧಿಕಾರಿ ಡಾ. ಪರ್ವೀನ್ ಸುಲ್ತಾನ ಅವರನ್ನೊಳಗೊಂಡ ತಂಡವು ಕಬ್ಬಹಳ್ಳಿ ಸಮುದಾಯ ಆರೋಗ್ಯ ಕೇಂದ್ರ, ಬನ್ನಿತಾಳಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ವೀರನಪುರ ಗ್ರಾಮ ಹಾಗೂ ಮುಖ್ಯ ರಸ್ತೆಯ ಹಿಂದೂಸ್ತಾನ್ ಬ್ರಿಕ್ ಕ್ಲಿನ್ ಫ್ಯಾಕ್ಟರಿಗೆ ಭೇಟಿ ನೀಡಿತು. ಈ ವೇಳೆ ಮಲೇರಿಯಾ ರೋಗಿಗಳ ಮೇಲ್ವಿಚಾರಣೆ, ರಕ್ತ ಪರೀಕ್ಷೆ, ರೋಗ ನಿಯಂತ್ರಣ ಕ್ರಮಗಳು ಹಾಗೂ ಹೊರರಾಜ್ಯಗಳಿಂದ ಆಗಮಿಸುವ ವಲಸೆ ಕಾರ್ಮಿಕರ ಆರೋಗ್ಯ ತಪಾಸಣೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ತಂಡ ಪರಿಶೀಲಿಸಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ್ ಕುಮಾರ್ ಹಾಗೂ ಜಿಲ್ಲಾ ಆರೋಗ್ಯ ಇಲಾಖೆಯ ತಂಡವು ಜಿಲ್ಲೆಯ ಹಾಗೂ ಗುಂಡ್ಲುಪೇಟೆ ತಾಲ್ಲೂಕಿನ ಮಲೇರಿಯಾ ನಿರ್ಮೂಲನಾ ಕಾರ್ಯಗಳ ಪ್ರಗತಿಯನ್ನು ವಿವರಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಅಲೀಂ ಪಾಷಾ ಬಿ.ಆರ್. ಅವರು ಕಳೆದ ಐದು ವರ್ಷಗಳ ಮಲೇರಿಯಾ ನಿರ್ಮೂಲನಾ ಕಾರ್ಯಕ್ರಮದ ಪ್ರಗತಿ ವರದಿಯನ್ನು ಕೇಂದ್ರ ತಂಡಕ್ಕೆ ಮಂಡಿಸಿದರು. ವಲಸೆ ಕಾರ್ಮಿಕರನ್ನು ಗುರುತಿಸಿ ಮಲೇರಿಯಾ, ಡೆಂಗ್ಯೂ, ಚಿಕೂನ್‌ಗುನ್ಯಾ, ಕಾಲರಾ ಸೇರಿ ದಂತೆ ವಿವಿಧ ಸಾಂಕ್ರಾಮಿಕ ರೋಗಗಳ ತಪಾಸಣೆ ಹಾಗೂ ಜಾಗೃತಿ ಕಾರ್ಯಗಳನ್ನು ಆರೋಗ್ಯ ಇಲಾಖೆ ನಿರಂತರವಾಗಿ ನಡೆಸುತ್ತಿದೆ ಎಂದು ತಿಳಿಸಲಾಯಿತು.

ಮಲೇರಿಯಾ ಮುಕ್ತ ತಾಲ್ಲೂಕು ಗುರಿ ಸಾಧನೆ: ತಾಲ್ಲೂಕಿನ ಮಲೇರಿಯಾ ನಿರ್ಮೂಲನಾ ಕಾರ್ಯಗಳನ್ನು ಪರಿಶೀಲಿಸಿದ ಕೇಂದ್ರ ತಂಡವು ಗುಂಡ್ಲುಪೇಟೆ ತಾಲ್ಲೂಕು 'ಮಲೇರಿಯಾ ಮುಕ್ತ ತಾಲ್ಲೂಕು' ಎಂಬ ಗುರಿಯನ್ನು ಸಾಧಿಸಿರುವುದಾಗಿ ತಿಳಿಸಿ ಆರೋಗ್ಯ ಇಲಾಖೆಯ ಕಾರ್ಯವನ್ನು ಪ್ರಶಂಸಿಸಿತು. ಈ ಸಾಧನೆಗೆ ಸಂಬಂಧಿಸಿದ ಅಧಿಕೃತ ಪ್ರಮಾಣಪತ್ರ ಶೀಘ್ರದಲ್ಲೇ ದೊರೆಯಲಿದೆ ಎಂದು ತಂಡ ತಿಳಿಸಿತು.

ಈ ಸಾಧನೆಯ ಹಿಂದೆ ತಾಲ್ಲೂಕಿನ ವೈದ್ಯಾಧಿಕಾರಿಗಳು, ಹಿರಿಯ ಹಾಗೂ ಕಿರಿಯ ಆರೋಗ್ಯ ನಿರೀಕ್ಷಕರು, ಆಶಾ ಕಾರ್ಯಕರ್ತೆಯರು ಸೇರಿದಂತೆ ಆರೋಗ್ಯ ಇಲಾಖೆಯ ಎಲ್ಲ ಸಿಬ್ಬಂದಿಯ ನಿರಂತರ ಪರಿಶ್ರಮ, ಸಮರ್ಪಣೆ ಮತ್ತು ಜಾಗರೂಕತೆ ಪ್ರಮುಖ ಪಾತ್ರ ವಹಿಸಿದ್ದಾರೆ ತಾಲ್ಲೂಕಿನ ಆರೋಗ್ಯ ಇಲಾಖೆಗೆ ಜಿಲ್ಲಾ ಮಟ್ಟದ ತಂಡ, ತಾಲ್ಲೂಕು ಆರೋಗ್ಯ ತಂಡ, ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕರು ನೀಡಿದ ಸಹಕಾರಕ್ಕೆ ಆರೋಗ್ಯ ಇಲಾಖೆ ಕೃತಜ್ಞತೆ ಸಲ್ಲಿಸಿದೆ. ಒಟ್ಟಾರೆ ಪರಿಶ್ರಮ ಮತ್ತು ಸಾರ್ವಜನಿಕರ ಸಹಕಾರದಿಂದ ಗುಂಡ್ಲುಪೇಟೆ ತಾಲ್ಲೂಕು ಮಲೇರಿಯಾ ಮುಕ್ತ ತಾಲ್ಲೂಕು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

# ನಾಳೆ 80ನೇ ಸ್ವಾತಂತ್ರ್ಯೋತ್ಸವ ಸಕಲ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ

**ಮಂಡ್ಯ:** 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಆಗಸ್ಟ್ 15ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಅರ್ಥಪೂರ್ಣವಾಗಿ, ಶಿಸ್ತುಬದ್ಧವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸುವ ಸಂಬಂಧ ಜಿಲ್ಲಾಧಿಕಾರಿ ಡಾ. ಕುಮಾರ ಅವರ ಅಧ್ಯಕ್ಷತೆಯಲ್ಲಿ ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಸ್ವಾತಂತ್ರ್ಯೋತ್ಸವದ ಅಂಗವಾಗಿ ನಡೆಯಲಿರುವ ಧ್ವಜಾರೋಹಣ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳ ಭಾಗವಹಿಸುವಿಕೆ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಸಿದ್ಧತೆ ಕುರಿತು ಚರ್ಚಿಸಲಾಯಿತು.

ಕಾರ್ಯಕ್ರಮ ನಡೆಯುವ ಸ್ಥಳದ ಸ್ವಚ್ಛತೆ, ವೇದಿಕೆ ನಿರ್ಮಾಣ, ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ, ಆಸನ ವ್ಯವಸ್ಥೆ, ಸಂಚಾರ ನಿಯಂತ್ರಣ, ಪೊಲೀಸ್ ಬಂದೋಬಸ್ತ್, ತುರ್ತು ವೈದ್ಯಕೀಯ ಸೇವೆ ಹಾಗೂ ಅಗ್ನಿಶಾಮಕ ವ್ಯವಸ್ಥೆಗಳನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಿದರು.



ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಗೆ ವಹಿಸಿರುವ ಜವಾಬ್ದಾರಿಗಳ ಕುರಿತು ಮಾಹಿತಿ ನೀಡಿದರು. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸುವಂತೆ ಅಗತ್ಯ ವ್ಯವಸ್ಥೆ ಕಲ್ಪಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದ ಯಶಸ್ಸಿಗೆ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಯಾವುದೇ ಲೋಪವಾಗದಂತೆ ಮುಂಚಿತವಾಗಿಯೇ ಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ. ಆರ್. ನಂದಿನಿ, ಅಪರ ಜಿಲ್ಲಾಧಿಕಾರಿ ಬಿ. ಸಿ. ಶಿವನಂದಾಮೂರ್ತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ರಸ್ತೆ ತಡೆ, ಟೈರ್‌ಗೆ ಬೆಂಕಿ: ಇಬ್ಬರು ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್

**ಗುಂಡ್ಲುಪೇಟೆ:** ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವಂತೆ ಆಗ್ರಹಿಸಿ ಆ.8ರಂದು ಬಿಜೆಪಿ ಗುಂಡ್ಲುಪೇಟೆ ಮಂಡಲ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆ ವೇಳೆ ರಾಷ್ಟ್ರೀಯ ಹೆದ್ದಾರಿ ತಡೆದು ಟೈರ್ಗೆ ಬೆಂಕಿ ಹಚ್ಚಿದ ಆರೋಪದ ಮೇಲೆ ಇಬ್ಬರು ಬಿಜೆಪಿ ಕಾರ್ಯಕರ್ತರ ವಿರುದ್ಧ ಗುಂಡ್ಲುಪೇಟೆ ಠಾಣೆ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಬಿಜೆಪಿ ವತಿಯಿಂದ ಸಿ.ಎಂ.ಎಸ್. ಕಲ್ಯಾಣ ಮಂಟಪದಿಂದ ತಾಲ್ಲೂಕು ಕಚೇರಿವರೆಗೆ ಬೈಕ್ ರ್ಯಾಲಿ ಹಾಗೂ ಪ್ರತಿಭಟನೆಗೆ ಪೊಲೀಸರು ಷರತ್ತುಬದ್ಧ ಅನುಮತಿ ನೀಡಿದ್ದರು. ಬೆಳಿಗ್ಗೆ 11.30ಕ್ಕೆ ಆರಂಭವಾದ ರ್ಯಾಲಿಯಲ್ಲಿ ಸುಮಾರು 150ರಿಂದ 200 ಮಂದಿ ಭಾಗವಹಿಸಿದ್ದರು.

ಪ್ರತಿಭಟನಾಕಾರರು ತಾಲ್ಲೂಕು ಕಚೇರಿ ತಲುಪಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಬಳಿಕ, ಮಧ್ಯಾಹ್ನ 12.30ರ ಸುಮಾರಿಗೆ ಪ್ರಣಯ್ ಹಾಗೂ ಅಗತಗೌಡನಹಳ್ಳಿ ಗ್ರಾಮದ ಸಾಗರ್ ಎಂಬವರು ಪ್ರತಿಭಟನಾಕಾರರನ್ನು ಎಂ.ಡಿ.ಸಿ.ಸಿ. ಬ್ಯಾಂಕ್ ವೃತ್ತಕ್ಕೆ ಕರೆತಂದು ರಾಷ್ಟ್ರೀಯ ಹೆದ್ದಾರಿ-766ರಲ್ಲಿ ಮಾನವ ಸರಪಳಿ



ನಿರ್ಮಿಸಿ ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ ಎಂದು ಪೊಲೀಸರು ಆರೋಪಿಸಿದ್ದಾರೆ.

ಸುಮಾರು 10 ನಿಮಿಷಗಳ ಕಾಲ ರಸ್ತೆ ತಡೆ ನಡೆಸಿದ್ದಲ್ಲದೆ, ಪ್ರಣಯ್ ಹಾಗೂ ಸಾಗರ್ ರಸ್ತೆಯ ಮಧ್ಯಭಾಗದಲ್ಲಿ ಟೈರ್ ಇಟ್ಟು ಬೆಂಕಿ ಹಚ್ಚಿ ಘೋಷಣೆಗಳನ್ನು ಕೂಗಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಪ್ರತಿಭಟನೆಗೆ ಅನುಮತಿ ನೀಡುವ ಸಂದರ್ಭದಲ್ಲಿ ರಸ್ತೆ ತಡೆ ನಡೆಸಬಾರದು, ಟೈರ್ ಅಥವಾ ವ್ಯಕ್ತಿಗಳ ಪ್ರತಿಕೃತಿ ದಹಿಸಬಾರದು ಹಾಗೂ ಶಾಂತಿಯುತವಾಗಿ ಪ್ರತಿಭಟನೆ ನಡೆಸಬೇಕು ಎಂದು ಷರತ್ತು ವಿಧಿಸಲಾಗಿತ್ತು. ಈ ಷರತ್ತುಗಳನ್ನು ಉಲ್ಲಂಘಿಸಿ ರಸ್ತೆ ತಡೆ ನಡೆಸಿ ಟೈರ್ಗೆ ಬೆಂಕಿ ಹಚ್ಚಿದ ಆರೋಪದ ಮೇಲೆ ಪ್ರಣಯ್ ಮತ್ತು ಸಾಗರ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಕಲಂ 285, 287 ಹಾಗೂ 190ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

## ಕಾವೇರಿ ಹೋರಾಟ | ಸಂಘಟನೆಗಳ ಮುಖಂಡರೊಂದಿಗೆ ಜಿಲ್ಲಾಧಿಕಾರಿ ಸಮಾಲೋಚನೆ



**ಮಂಡ್ಯ :** ತಮಿಳುನಾಡಿಗೆ ಕಾವೇರಿ ನೀರು ಹರಿಸದಂತೆ ಆಗ್ರಹಿಸಿ ಇಂದು ಕರ್ನಾಟಕ ಬಂದ್‌ಗೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ. ಕುಮಾರ ಅವರು ಕನ್ನಡಪರ ಸಂಘಟನೆಗಳು ಹಾಗೂ ರೈತ ಸಂಘಟನೆಗಳ ಮುಖಂಡರನ್ನು ಭೇಟಿ ಮಾಡಿ ಚರ್ಚಿಸಿದರು.

ಜಿಲ್ಲೆಯಲ್ಲಿ ಬಂದ್ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಶಾಂತಿ, ಸುವ್ಯವಸ್ಥೆ ಕಾಪಾಡುವ ಕುರಿತು ಜಿಲ್ಲಾಧಿಕಾರಿಗಳು ಸಂಘಟನೆಗಳ ಮುಖಂಡರೊಂದಿಗೆ ಸಮಾಲೋಚನೆ ನಡೆಸಿದರು. ಕಾವೇರಿ ನೀರಿನ ವಿಚಾರದಲ್ಲಿ ಜಿಲ್ಲೆಯ ರೈತರ ಹಿತಾಸಕ್ತಿ, ಕುಡಿಯುವ ನೀರಿನ ಅಗತ್ಯ ಹಾಗೂ ಪ್ರಸ್ತುತ ಪರಿಸ್ಥಿತಿಯ ಕುರಿತು ಮುಖಂಡರ ಅಭಿಪ್ರಾಯಗಳನ್ನು ಆಲಿಸಿದರು. ಬಂದ್ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗದ ರೀತಿಯಲ್ಲಿ ಇರುವಂತೆ ಜಿಲ್ಲಾಧಿಕಾರಿ ಡಾ. ಕುಮಾರ್ ಅವರು ಮನವಿ ಮಾಡಿದರು.

ಕಾವೇರಿ ನೀರಿನ ವಿಚಾರದಲ್ಲಿ ರೈತರ ಹಿತಾಸಕ್ತಿ ಕಾಪಾಡುವುದು ಅತ್ಯಂತ ಪ್ರಮುಖವಾಗಿದ್ದು, ಜಿಲ್ಲೆಯ ಜನರ ಭಾವನೆಗಳನ್ನು ಸರ್ಕಾರದ ಗಮನಕ್ಕೆ ತರುವ ನಿಟ್ಟಿನಲ್ಲಿ ಸಂಘಟನೆಗಳೊಂದಿಗೆ ಸಮನ್ವಯದಿಂದ ಕಾರ್ಯ ನಿರ್ವಹಿಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಕನ್ನಡಪರ ಸಂಘಟನೆಗಳು ಹಾಗೂ ರೈತ ಸಂಘಟನೆಗಳ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಆರ್.ಟಿ .ಇ ಅಗತ್ಯ ಕ್ರಮಕ್ಕೆ ಆಗ್ರಹ : :ಡಾ.ನವೀನ್ ಮೌರ್ಯ

**ಗುಂಡ್ಲುಪೇಟೆ:** 9 ಮತ್ತು 10ನೇ ತರಗತಿಯ ಎಸ್ಸಿ,ಎಸ್ಟಿ ವಿದ್ಯಾರ್ಥಿಗಳಿಗೆ ಆರ್ ಟಿ ಇ ಅವಕಾಶಗಳನ್ನು ಮುಂದುವರಿಸಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕೆಂದು ಚಾಮರಾಜನಗರ ಜಿಲ್ಲಾ ಬಿಜೆಪಿ ಎಸ್ಸಿ ಮೋರ್ಚಾ ಅಧ್ಯಕ್ಷ ಡಾ.ನವೀನ್ ಮೌರ್ಯ ರವರು ಒತ್ತಾಯಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಸಕ್ತ ಶೈಕ್ಷಣಿಕ ವರ್ಷದ ಆರಂಭದಲ್ಲಿ ಸರ್ಕಾರವು 9 ಮತ್ತು 10ನೇ ತರಗತಿಯ ಎಸ್ಸಿ ಎಸ್ಟಿ ಆರ್ ಟಿ ಇ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಮುಂದುವರಿಸುವುದಾಗಿ



ಘೋಷಿಸಿತ್ತು, ಆದರೆ, ಖಾಸಗಿ ಶಾಲಾ ಸಂಘಟನೆಗಳು ಈ ಆದೇಶವನ್ನು ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದು, ಇದಕ್ಕೆ ತಡೆಯಜ್ಞೆ ಆದೇಶ ಹೊರ ಬಂದಿದೆ. ಇದರಿಂದ ವಿದ್ಯಾರ್ಥಿಗಳು ಹಾಗೂ ಪೋಷಕರು ಕಂಗಲಾಗಿದ್ದಾರೆ.

ಮದ್ಯ ವರ್ಷದಲ್ಲೇ ಹೆಚ್ಚಿನ ಶುಲ್ಕವನ್ನು ಭರಿಸಲು ಸಾಧ್ಯವಾಗದ ಕಾರಣದಿಂದ ಬಲವಂತವಾಗಿ ವರ್ಗಾವಣೆಗೊಳ್ಳುವ ಭೀತಿ ಎದುರಾಗಿರುವ ಕಾರಣ ಸದಾ ಸಂವಿಧಾನ,ಎಸ್ಸಿ ಎಸ್ಟಿ ಗಳ ಪರ ಎಂದು ಬೊಬ್ಬೆ ಹೊಡೆಯುವ ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಬಗೆಹರಿಸಬೇಕು ಇಲ್ಲವಾದಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದರು.

## ಸುಗಮ ಸಂಗೀತ ಕನ್ನಡದಲ್ಲಿ ಬಿಟ್ಟರೆ ಬೇರೆ ಯಾವ ಭಾಷೆಯಲ್ಲಿ ಇಲ್ಲ: ಕೆ.ವೆಂಕಟರಾಜು

**ಚಾಮರಾಜನಗರ:** ಸುಗಮ ಸಂಗೀತ ಕನ್ನಡದಲ್ಲಿ ಬಿಟ್ಟರೆ ಬೇರೆ ಯಾವ ಭಾಷೆಯಲ್ಲೂ ಇಲ್ಲ ಎಂದು ಹಿರಿಯ ಸಾಹಿತಿ ಕೆ.ವೆಂಕಟರಾಜು ಹೇಳಿದರು.ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಸ್ವರ ಸಿಂಚನ ಸಾಂಸ್ಕೃತಿಕ ಕಲಾ ಸಂಘ ಜ್ಯೋತಿಗೌಡನಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು, ರೋಟರಿ ಸಂಸ್ಥೆ ಸಹಯೋಗದಲ್ಲಿ ನಡೆದ ಗಡಿನಾಡ ಸುಗಮ ಸಂಗೀತೋತ್ಸವ ಸಮಾರಂಭ ಸಮಾರಂಭದಲ್ಲಿ ಮಾತನಾಡಿದರು. ಸುಗಮ ಸಂಗೀತ ಭಾರತದ ಯಾವುದೇ ಬೇರೆ ರಾಜ್ಯಗಳಲ್ಲಿ ಇಲ್ಲ. ಯಾವ ರಾಜ್ಯದಲ್ಲಿಯೂ ಸುಗಮ ಸಂಗೀತ ಪದ್ಧತಿ ಇಲ್ಲ. ಅಥವಾ ಈ ಒಂದು ಪ್ರಕಾರ ಬೇರೆ ಯಾವ ಭಾಷೆಯಲ್ಲೂ ಇಲ್ಲ. ಕನ್ನಡದಲ್ಲಿ ಮಾತ್ರ ಇದೆ. ಮಹಾರಾಷ್ಟ್ರದಲ್ಲಿ ನಾಟ್ಯ ಸಂಗೀತ ಇದೆ. ಇಲ್ಲಿ ಮಾತ್ರ ನಮ್ಮ ಕವಿಗಳ ಹಾಡುಗಳನ್ನು ಜನಮಾನಸದತ್ತ ತೆಗೆದುಕೊಂಡು ಹೋಗಿರುವುದು ಸುಗಮ ಸಂಗೀತದ ಕಲಾವಿದರು ಎಂದರು.




ಸುಗಮ ಸಂಗೀತಕ್ಕೆ ಭದ್ರ ಅಡಿಪಾಯ ಹಾಕಿದವರು ಬಹಳಷ್ಟು ಜನರು ಇದ್ದಾರೆ. ಅದರಲ್ಲಿ ಬಹಳ ಪ್ರಮುಖರಾದವರು ಪಿ.ಕಾಳಿಲಿಂಗರಾಯರು, ಅವರು ಸುಗಮ ಸಂಗೀತ'ಕ್ಕೆ ಭದ್ರವಾದ ಅಡಿಪಾಯ ಹಾಕಿದರು. ಅವರಿಗೆ ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ, ಜಾನಪದ ಯಕ್ಷಗಾನದ ಸಂಗೀತ, ನಾಟಕದ ಸಂಗೀತ ಅವರಿಗೆ ಗೊತ್ತಿತ್ತು. ಇಷ್ಟು ಸಂಗೀತ ಗೊತ್ತಿದ್ದರು ಕೂಡ ಅವರು ತಮ್ಮ ಇಡೀ ಜೀವನವನ್ನು ಸುಗಮ ಸಂಗೀತಕ್ಕೆ ತೆರೆದುಕೊಂಡರು. ಅಲ್ಲಿ ಎಲ್ಲ ಅನುಭವ ಸುಗಮ ಸಂಗೀತಕ್ಕೆ ಅಳವಡಿಸಿದರು. ಚೆನ್ನಾಗಿ ಹಾಡಿದರು, ಸ್ವರ ಸಂಯೋಜನೆ ಮಾಡಿದರು ನಿಜ ಆದರೆ ಎಷ್ಟು ಕವಿಗಳ ಹಾಡುಗಳನ್ನು ಅವರು ಪತ್ತೆ ಮಾಡಿದರು ಎಂದರು.

ಗುರುವಂದನೆ: ಸಂಗೀತ ನಿರ್ದೇಶಕ ಎ.ಎಸ್.ಪ್ರಸನ್ನಕುಮಾರ್, ಅಂತಾರಾಷ್ಟ್ರೀಯ ಗಾಯಕ ಸಿ.ಎಂ.ನರಸಿಂಹಮೂರ್ತಿ, ರಾಜ್ಯ ಮಟ್ಟದ ಜ್ಯೋತಿ ಭಾಪುಲೆ ಪ್ರಶಸ್ತಿ ಪುರಸ್ಕೃತ ನಂಜುಂಡಯ್ಯ, ಅಂತರಾಷ್ಟ್ರೀಯ ಕಲಾವಿದ ಡಾ.ಆರ್.ಸೋಮರಾಜು, ಸುಗಮ ಸಂಗೀತ ಗಾಯಕ ಲತಾಪುಟ್ಟಸ್ವಾಮಿ ಅವರಿಗೆ ಗುರುವಂದನೆ ಸಲ್ಲಿಸಲಾಯಿತು. ಭಾರತ ಸೇವಾ ದಳ ಜಿಲ್ಲಾಧ್ಯಕ್ಷ ವೆಂಕಟನಾಗಪ್ಪಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ನಗರಸಭಾ ಮಾಜಿ ಸದಸ್ಯ ಆರ್.ಪಿ.ನಂಜುಂಡಸ್ವಾಮಿ, ಎಂ.ಮಹೇಶ್ ಮಾತನಾಡಿದರು.

ಕರ್ನಾಟಕ ಸುಗಮ ಸಂಗೀತ ಪರಿಷತ್ತು ಜಿಲ್ಲಾಧ್ಯಕ್ಷ ಬಿ.ಬಸವರಾಜು ಸೇವಾ ಭಾರತಿ ಆಂಗ್ಲ ಮಾಧ್ಯಮ ಶಾಲೆಯ ಪ್ರಾಂಶುಪಾಲ ರಾಧಿಕ ಗುಪ್ತ, ದೈಹಿಕ ಶಿಕ್ಷಕ ನಾರಾಯಣ, ಸ್ವರ ಸಿಂಚನ ಸಾಂಸ್ಕೃತಿಕ ಕಲಾ ಸಂಘದ ಅಧ್ಯಕ್ಷ ಜೆ.ಬಿ.ಮಹೇಶ್, ಕಾರ್ಯದರ್ಶಿ ಬಿ.ರಾಜೇಶ್, ಗಾಯಕರಾದ ಅರುಣ್ ಕುಮಾರ್, ಕಲೆ ನಟರಾಜು, ಲತಾಪುಟ್ಟಸ್ವಾಮಿ, ಪ್ರಕೃತಿ, ಕುಮಾರ್ ಅಮ್ಮನಪುರ, ನಾಗಮ್ಮ, ಹಾಗೂ ಶಿಬಿರಾರ್ಥಿಗಳು ಹಾಜರಿದ್ದರು.

## ಗ್ರಂಥಾಲಯ ಸದ್ಬಳಕೆಯಿಂದ ಯಶಸ್ಸು ಸಾಧ್ಯ: ಪೃಥ್ವಿರಾಜ್



**ಗುಂಡ್ಲುಪೇಟೆ:** ವಿದ್ಯಾರ್ಥಿಗಳು ಸಮಯವನ್ನು ಸದ್ಬಳಕೆ ಮಾಡಿಕೊಂಡು ಮೊಬೈಲ್, ದುಶ್ಚಟಗಳು ಹಾಗೂ ಅನಗತ್ಯ ಚಟುವಟಿಕೆಗಳಿಂದ ದೂರವಿದ್ದು, ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಿದರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಎಂದು ಪೃಥ್ವಿರಾಜ್ ಎಚ್.ಎಂ. ಸಲಹೆ ನೀಡಿದರು.

ಪಟ್ಟಣದ ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಘಟಕದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ವಿದ್ಯಾರ್ಥಿಗಳು ಗ್ರಂಥಾಲಯವನ್ನು ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಬೇಸರದ ಸಂಗತಿ ಎಂದರು.

ವಿದ್ಯಾವಂತರಾಗುತ್ತಿದ್ದರೂ ವಿನಯ, ಶ್ರದ್ಧೆ ಹಾಗೂ ಸಂಸ್ಕಾರ ಕಡಿಮೆಯಾಗುತ್ತಿರುವುದು ವಿಷಾದನೀಯ. ಹಿಂದೆ ಅಂಗನವಾಡಿ ಹಾಗೂ ಶಾಲೆಗಳಲ್ಲಿ ನೀತಿ ಕಥೆಗಳು, ಜನಪದ ಹಾಡುಗಳ ಮೂಲಕ ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ನೀಡಲಾಗುತ್ತಿತ್ತು. ಆದರೆ ಇಂದಿನ ದಿನಗಳಲ್ಲಿ ಇಂತಹ ಮೌಲ್ಯಗಳು ಮರೆಯಾಗುತ್ತಿವೆ ಎಂದು ಹೇಳಿದರು.

ಸರ್ಕಾರಿ ಉದ್ಯೋಗಕ್ಕೆ ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಾಗುತ್ತಿದ್ದರೂ, ಗಂಭೀರವಾಗಿ ಅಧ್ಯಯನ ಮಾಡಿ ಪರೀಕ್ಷೆಗೆ ಸಿದ್ಧತೆ ನಡೆಸುವವರ ಸಂಖ್ಯೆ ಕಡಿಮೆಯಾಗಿದೆ. ಎಷ್ಟು ಮಂದಿ ಅರ್ಜಿ ಸಲ್ಲಿಸಿದ್ದಾರೆ ಎಂಬುದಕ್ಕಿಂತ, ತಾವು ಹೇಗೆ ಓದಿ ಸಿದ್ಧತೆ ನಡೆಸಿ ಯಶಸ್ವಿಯಾಗಬೇಕು ಎಂಬುದರತ್ತ ವಿದ್ಯಾರ್ಥಿಗಳು ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ಎಪಿಜೆ ಅಬ್ದುಲ್ ಕಲಾಂ ಅವರ ಜೀವನದ ಘಟನೆಯನ್ನು ಉದಾಹರಿಸಿದ ಅವರು, ಜೀವನದಲ್ಲಿ ಯಾವುದಕ್ಕೆ ಆದ್ಯತೆ ನೀಡಬೇಕು ಎಂಬುದನ್ನು ಅರಿತುಕೊಂಡು ಮುನ್ನಡೆಯುವುದು ಅಗತ್ಯ ಎಂದರು.

ಕಾಲೇಜಿನ ಪ್ರಾಂಶುಪಾಲರು ಪಿ ಮಹದೇವಮ್ಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಮಲ್ಲಪ್ಪ, ಐಕ್ಯೂಎಸಿ ಸಂಚಾಲಕ ಮಣಿಕಂಠ ಸಿ.ಎಂ., ಗ್ರಂಥಪಾಲಕ ಗಿರೀಶ್ ಕುಮಾರ್ ಡಿ.ಬಿ., ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕ ಮಂಜಪ್ಪ ಎನ್., ಸಹಾಯಕ ಪ್ರಾಧ್ಯಾಪಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಂಗಲ ಗ್ರಾಮ ಪಂಚಾಯಿತಿ ಅರಿವು ಕೇಂದ್ರದಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ




**ಗುಂಡ್ಲುಪೇಟೆ:** ತಾಲ್ಲೂಕಿನ ಮಂಗಲ ಗ್ರಾಮ ಪಂಚಾಯಿತಿ ಅರಿವು ಕೇಂದ್ರದಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆಯನ್ನು ಆಚರಿಸಲಾಯಿತು. ಗ್ರಂಥಪಾಲಕ ಕುಮಾರ ಎಂ.ಬಿ. ಮಾತನಾಡಿ ಗ್ರಂಥಪಾಲಕರ ದಿನದ ಮಹತ್ವದ ಕುರಿತು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಮುಖ್ಯ ಶಿಕ್ಷಕ ಬಸವಣ್ಣ ಅವರು ಗ್ರಂಥಾಲಯಕ್ಕೆ ಭೇಟಿ ನೀಡಿ ಅಲ್ಲಿರುವ ಪುಸ್ತಕಗಳು ಹಾಗೂ ಡಿಜಿಟಲ್ ಗ್ರಂಥಾಲಯದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಜ್ಞಾನಾರ್ಜನೆಯನ್ನು ಹೆಚ್ಚಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಎಸ್ಡಿಎಂಸಿ ಅಧ್ಯಕ್ಷೆ ಪಾರ್ವತಮ್ಮ ಅವರು ಅರಿವು ಕೇಂದ್ರಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳು ನಿಯಮಿತವಾಗಿ ಅಧ್ಯಯನ ನಡೆಸಿ ಜ್ಞಾನವನ್ನು ವೃದ್ಧಿಸಿಕೊಂಡು ಉತ್ತಮ ವಿದ್ಯಾರ್ಥಿಗಳಾಗಿ ರೂಪುಗೊಳ್ಳಬೇಕು ಎಂದು ತಿಳಿಸಿದರು. ರೈತ ಸಂಘದ ಅಧ್ಯಕ್ಷ ಮಾದೇವಪ್ಪ ಅವರು ಜ್ಞಾನ ಸಂಪಾದನೆಯಿಂದ ದೊರೆಯುವ ಪ್ರಯೋಜನಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ , ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಎಸ್ಡಿಎಂಸಿ ಅಧ್ಯಕ್ಷರು ವಿದ್ಯಾರ್ಥಿಗಳು ಹಾಗೂ ಗ್ರಂಥಾಲಯ ಮೇಲ್ವಿಚಾರಕರು ಉಪಸ್ಥಿತರಿದ್ದರು.

## ತಾಲ್ಲೂಕು ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಬೇಕು: ಮಂಜು

**ಕೆ.ಆರ್.ಪೇಟೆ:** ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಿ ಅದಕ್ಕೆ ಪರಿಹಾರೋಪಾಯಗಳನ್ನು ಕಂಡುಕೊಳ್ಳುವ ಸದುದ್ದೇಶದಿಂದ ತಾಲೂಕು ಕಛೇರಿಯಲ್ಲಿ ಪ್ರತಿ ಬುಧವಾರ ಮದ್ಯಾಹ್ನ 03 ಘಂಟೆಗೆ ಸಾರ್ವಜನಿಕರ ಕುಂದುಕೊರೆತಗಳ ಅಹವಾಲು ಸಭೆ ನಡೆಸಲಾಗುತ್ತಿದೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿರುವ ಕಂದಾಯ ಇಲಾಖೆಯ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಅವರು ಮಾತನಾಡಿದರು.

ಪ್ರತಿ ಬುಧವಾರ ಸಾರ್ವಜನಿಕರ ಕುಂದು ಕೊರತೆಯ ಸಭೆ ನಿರಂತರವಾಗಿ ನಡೆಯಲಿದೆ. ವಿಧಾನ ಸಭೆಯ ಅಧಿವೇಶನದ ಸಂದರ್ಭವನ್ನು ಹೊರತುಪಡಿಸಿ ಮಿಕ್ಕೆಲ್ಲ ಅವಧಿಯಲ್ಲಿ ಬುಧವಾರದ ಸಭೆ ಇನ್ನು ಮುಂದೆ ನಿರಂತರವಾಗಿ ನಡೆಯಲಿದೆ. ಸರ್ಕಾರಿ ಕಛೇರಿಗಳು ಜನಸ್ನೇಹಿಯಾಗಿ ಕೆಲಸ ಮಾಡಬೇಕು. ಸಾರ್ವಜನಿಕರ ಅರ್ಜಿಗಳನ್ನು ವಿಲೇ ಮಾಡುವ ಸಂದರ್ಭದಲ್ಲಿ ಮದ್ಯವರ್ತಿಗಳಿಗೆ ಅವಕಾಶ ಇರಬಾರದು. ಆದರೆ ಪಟ್ಟಣದ ತಾಲೂಕು ಕಛೇರಿಯಲ್ಲಿ ಮದ್ಯವರ್ತಿಗಳ ಹಾವಳಿ ಬಗ್ಗೆ ಸಾರ್ವಜನಿಕ ದೂರುಗಳು ಕೇಳಿ ಬರುತ್ತಿವೆ. ಕಛೇರಿಯ ಸಿಬ್ಬಂಧಿಗಳೇ ಭ್ರಷ್ಟಾಚಾರವನ್ನು ಪ್ರಶ್ನಿಸುವವರ ವಿರುದ್ಧ ಹಾಗೂ ತಮ್ಮ ಪರವಾಗಿ ಪ್ರತಿಭಟನೆ ಮಾಡಲು ಕೆಲವರಿಗೆ ಅಗತ್ಯ ಕುಮ್ಮಕ್ಕು ನೀಡುತ್ತಿದ್ದಾರೆ. ತಾಲೂಕು



ಕಛೇರಿಯ ಪರ ಮತ್ತು ವಿರುದ್ಧ ಚಳುವಳಿಗಳು ನಡೆದಿದ್ದು ಇದು ಕಂದಾಯ ಇಲಾಖೆಗೆ ಶೋಭೆ ತರುವುದಿಲ್ಲ. ಸಾರ್ವಜನಿಕರ ಕೆಲಸ ವೇಳೆಯಲ್ಲಿ ಕೆಲವರು ಟೀ ಅಂಗಡಿ ಹೋಗುವುದು, ಟೀ ಅಂಗಡಿಯಲ್ಲಿ ಸಾರ್ವಜನಿಕರ ಅರ್ಜಿಗಳನ್ನು ಪರಿಶೀಲಿಸುತ್ತಿರುವ ವೀಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ಕೆಲವು ಪತ್ರಿಕೆಗಳಲ್ಲಿ ವರದಿಯಾಗಿದೆ. ಕರ್ತವ್ಯದ ಅವಧಿಯಲ್ಲಿ ನೌಕರರು ಹೊರಹೋಗುವುದಾದರೆ ಅವರು ಯಾವಕಾರಣಕ್ಕಾಗಿ ಹೊರಹೋಗಿದ್ದಾರೆನ್ನುವುದನ್ನು ಕಛೇರಿಯ ಮೂಮೆಂಟ್ ರಿಜಿಸ್ಟರ್‌ನಲ್ಲಿ ದಾಖಲಿಸಬೇಕು. ಕಳಂಕಿತ ನೌಕರರ ಅಗತ್ಯ ನಮ್ಮ ತಾಲೂಕಿಗಿಲ್ಲ ಎಂದು ಎಚ್ಚರಿಸಿದ ಶಾಸಕ ಹೆಚ್.ಟಿ.ಮಂಜು ಕಂದಾಯ ಇಲಾಖೆಯ ಬಗ್ಗೆ ಕೇಳಿಬರುತ್ತಿರುವ ದೂರುಗಳು ನಿಲ್ಲಬೇಕು. ಇದರ ಬಗ್ಗೆ ತಹಸೀಲ್ದಾರರು ಕ್ರಮ ವಹಿಸುವಂತೆ ಸೂಚಿಸಿದರು.

## ಶತತಂತ್ರಿಯ ನವಚೇತನ ? ಪದ್ಮಶ್ರೀ ತರುಣ್ ಭಟ್ಟಾಚಾರ್ಯ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 95

ನೂರು ತಂತಿಗಳಲ್ಲಿ ನೂರು ಭಾವಗಳನ್ನು ಅರಳಿಸಿ, ಸಂತೂರ್‌ಗೆ ಹೊಸ ಭಾಷ್ಯ ಬರೆದ ಸ್ವರಸಾಧಕರು. ಪಯನಿಯರ್ ಸಂತೂರ್ ದಿಗ್ಗಜ ಶ್ರೀ ತರುಣ್ ಭಟ್ಟಾಚಾರ್ಯ ಅವರಿಗೆ 2026ನೇ ಸಾಲಿನ ಪದ್ಮಶ್ರೀ ಗೌರವ ಸಂದಿದೆ. ಶತತಂತ್ರಿ ವೀಣೆಯ ವಾದನ ಶೈಲಿಯನ್ನೇ ಕ್ರಾಂತಿಕಾರಕವಾಗಿ ಬದಲಿಸಿದ ಇವರು, ಸಂತೂರ್ ವಾದನಕ್ಕೆ ಗಾಯಕಿ ಅಂಗವನ್ನು ತುಂಬಿ, ರಾಗಗಳ ಆಲಾಪನೆಗೆ ಹೊಸ ಆಯಾಮ ನೀಡಿದರು. ಮೀಂಡ್, ಗಮಕ, ಮುರ್ಕಿ ? ಹಾಡುಗಾರಿಕೆಯ ಎಲ್ಲ ಸೂಕ್ಷ್ಮತೆಗಳನ್ನು ತಂತಿಗಳ ಮೇಲೆ ತಂದ ಮೊದಲಿಗರು.

ಸಂತೂರ್ ಕಲಾವಿದರ ದಶಕಗಳ ನೋವಿಗೆ ಪರಿಹಾರವೆಂಬಂತೆ ಮಂಕಾಸ್ ಎಂಬ ಫೈನ್ ಟ್ಯೂನರ್ ಅನ್ನು ಆವಿಷ್ಕರಿಸಿದರು. ಇದರಿಂದ ರಾಗದ ಶುದ್ಧತೆ, ಶ್ರುತಿ ನಿಖರತೆ ಮತ್ತು ದೀರ್ಘಕಾಲ ಬಾಳಿಕೆ ಬರುವ ಟ್ಯೂನಿಂಗ್ ಸಾಧ್ಯವಾಯಿತು. ಇವರ ಆವಿಷ್ಕಾರದಿಂದ ಸಂತೂರ್ ವಾದನ ಹೆಚ್ಚು ಸುಲಭ, ವೈಜ್ಞಾನಿಕ



ಮತ್ತು ಶ್ರುತಿಬದ್ಧವಾಯಿತು. ಕೇವಲ ವಾದನವಲ್ಲ,ಹಲವಾರು ಹೊಸ ರಾಗಗಳನ್ನು ಸೃಷ್ಟಿಸಿ ಭಾರತೀಯ ಶಾಸ್ತ್ರೀಯ ಸಂಗೀತ ಭಂಡಾರವನ್ನು ಶ್ರೀಮಂತಗೊಳಿಸಿದರು. ರಾಗ ಕಿರ್ವಾನಿ, ಪಲುಕಾ, ಸಂಜೋಗೀತೆ ಇವರ ಕೊಡುಗೆಗಳು.

ಪದ್ಮಶ್ರೀ ಕೇವಲ ಒಬ್ಬ ವಾದ್ಯಗಾರರಿಗೆ ಸಂದಿಲ್ಲ. ಕಾಶ್ಮೀರದ ಕಣಿವೆಯಿಂದ ಬಂದ ಸಂತೂರ್‌ಗೆ ಹಿಂದೂಸ್ತಾನಿ ಶಾಸ್ತ್ರೀಯತೆಯ ಸಿಂಹಾಸನ ಕಲ್ಪಿಸಿ, ತಂತ್ರಜ್ಞಾನ ಮತ್ತು ಸಂಪ್ರದಾಯವನ್ನು ಬೆಸೆದ ನಾವೀನ್ಯತೆಯ ಹರಿಕಾರನಿಗೆ ಸಂದ ರಾಷ್ಟ್ರೀಯ ಸನ್ಮಾನ ಇದು. ಶ್ರೀ ತರುಣ್ ಭಟ್ಟಾಚಾರ್ಯ ಅವರ ಬೆರಳುಗಳು ಶತತಂತ್ರಿಯನ್ನು ಮೀಟಿದಾಗ, ಅದು ನೂರು ತಂತಿಗಳ ನಾದವಲ್ಲ; ಒಂದು ಯುಗದ ಸಂಗೀತ ಕ್ರಾಂತಿಯ ಪ್ರತಿಧ್ವನಿ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ನೆಕ್ಸ್ಟ್ ಲೆವೆಲ್ ಚಿತ್ರಕ್ಕೆ ಚಾಲನೆ

ಉಪೇಂದ್ರ ಅಭಿನಯದ, ಕನ್ನಡ – ತೆಲುಗಿನಲ್ಲಿ ನಿರ್ಮಾಣವಾಗುತ್ತಿರುವ ಸಿನಿಮಾ ನೆಕ್ಸ್ಟ್ ಲೆವೆಲ್ ಆರಂಭವಾಗಿದೆ. ಮುಹೂರ್ತ ಸಮಾರಂಭ ನೆರವೇರಿತು.

ಉಪೇಂದ್ರ ಅವರ ಪುತ್ರ ಆಯುಷ್ ಮೊದಲ ದೃಶ್ಯಕ್ಕೆ ಕ್ಲ್ಯಾಪ್ ಮಾಡುವ ಮೂಲಕ ಚಿತ್ರಕ್ಕೆ ಶುಭಕೋರಿದರು.

ಈ ಮುಹೂರ್ತ ಸಮಾರಂಭದಲ್ಲಿ ಪ್ರಿಯಾಂಕಾ ಉಪೇಂದ್ರ ಮತ್ತು ನಟಿ ಮಾಲಾಶ್ರೀ ಹಾಜರಿದ್ದು ಶುಭ ಹಾರೈಸಿದರು.

ಉಪೇಂದ್ರ ಅವರಿಗೆ ಈ ಚಿತ್ರದಲ್ಲಿ ಮಾಲಾಶ್ರೀ ಪುತ್ರಿ ಆರಾಧನಾ ರಾಮ್ ಜೋಡಿಯಾಗಿದ್ದಾರೆ. ಆರಾಧನಾಗೆ ಇದು ಎರಡನೇ ಸಿನಿಮಾವಾಗಿದೆ. ಈ ಚಿತ್ರದಲ್ಲಿ ಬೋಲ್ಡ್ ಹಾಗೂ ಗ್ಲಾಮರಸ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ಸಿನಿಮಾದಲ್ಲಿ ಅವರು ಮುಖ್ಯಮಂತ್ರಿಯ ಮಗಳ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ.

ಈ ಸಿನಿಮಾದಲ್ಲಿ ಮತ್ತೊಂದು ವಿಶೇಷ ಉಪೇಂದ್ರ ಅವರ ಜೊತೆಗೆ ಅವರ ಸಹೋದರನ ಮಗ, ನಟ ನಿರಂಜನ್ ಸುಧೀಂದ್ರ ಕೂಡ ಪ್ರಮುಖ ಪಾತ್ರವೊಂದರಲ್ಲಿ ಕಾಣಿಸಿಕೊಳ್ಳುತ್ತಿದ್ದು, ಒಂದೇ ಸಿನಿಮಾದಲ್ಲಿ ಚಿಕ್ಕಪ್ಪ–ಮಗ ಇದ್ದಾರ

ನಿರ್ಮಾಪಕ ತರುಣ್ ಶಿವಪ್ಪ, ತಮ್ಮದೇ 'ತರುಣ್ ಸ್ಟುಡಿಯೋಸ್' ಬ್ಯಾನರ್ ಅಡಿಯಲ್ಲಿ ನಿರ್ಮಾಣ ಮಾಡುತ್ತಿದ್ದಾರೆ.

ನಿರ್ದೇಶಕ ಅರವಿಂದ್ ಕೌಶಿಕ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇದು ಉಪೇಂದ್ರ ಅವರ ಹಳೆಯ ಕ್ಲಾಸಿಕ್ ಹಿಟ್‌ಗಳಾದ 'ಎ', 'ಉಪೇಂದ್ರ' ಮತ್ತು 'ರಕ್ತಕಣ್ಣೀರು' ಶೈಲಿಯ ಸಿನಿಮಾವಾಗಿದ್ದು, ಇವತ್ತಿನ ಜನರೇಶನ್‌ಗೆ ತಕ್ಕಂತೆ ಉಪ್ಪಿ ಅವರ ವಿಶಿಷ್ಟ ಶೈಲಿಯ ಪಾತ್ರವನ್ನು ರೂಪಿಸಲಾಗಿದೆಯಂತೆ.



## ಕ್ರಾಸಿಂಗ್ ಪಾತ್ಸ್ ಮಾನವ–ಆನೆ ಸಂಘರ್ಷದ ಕುರಿತಾದ ಸಾಕ್ಷ್ಯಚಿತ್ರಕ್ಕೆ ಸಂಯುಕ್ತಾ ಹೊರನಾಡು ನಿರ್ದೇಶನ

'ವಿಶ್ವ ಆನೆಗಳ ದಿನ'ದಂದು ಅನಾವರಣಗೊಳ್ಳುತ್ತಿರುವ 'ಕ್ರಾಸಿಂಗ್ ಪಾತ್ಸ್' ಸಾಕ್ಷ್ಯಚಿತ್ರದ ಮೂಲಕ ನಟಿ ಸಂಯುಕ್ತಾ ಹೊರನಾಡು ಅವರು ಪ್ರಥಮ ಬಾರಿಗೆ ನಿರ್ದೇಶಕಿಯಾಗಿ ಬಡ್ತಿ ಪಡೆದುಕೊಂಡಿದ್ದಾರೆ. ಈ ಸಾಕ್ಷ್ಯಚಿತ್ರವು ತೀವ್ರಗೊಳ್ಳುತ್ತಿರುವ ಮಾನವ–ಆನೆ ಸಂಘರ್ಷದ ಕುರಿತು ಬೆಳಕು ಚೆಲ್ಲುತ್ತದೆ. ಈ ಸಾಕ್ಷ್ಯಚಿತ್ರಕ್ಕೆ ಟೆಕಿಯಾನ್ (Tekion) ಸಂಸ್ಥೆಯ ಸಿಎಸ್ಆರ್ ಇನಿಶಿಯೇಟಿವ್ ಜೊತೆಗೆ ಕರ್ನಾಟಕ ಅರಣ್ಯ ಇಲಾಖೆ ಮತ್ತು ಆ ರೋಚಾ ಇಂಡಿಯಾ, ಸಂಪಿಗೆ ಫಿಲ್ಮ್ಸ್ ಪ್ರೊಡಕ್ಷನ್ ಇದಕ್ಕೆ ಸಹಯೋಗ ನೀಡಿವೆ.

ಕಾಡುಗಳು ಕಿರಿದಾಗುತ್ತಾ, ಮಾನವನ ಚಟುವಟಿಕೆಗಳಿಂದಾಗಿ ವನ್ಯಜೀವಿಗಳ ನೈಸರ್ಗಿಕ ಆವಾಸಸ್ಥಾನಗಳು ನಾಶವಾಗುತ್ತಿರುವ ಈ ಸಂದರ್ಭದಲ್ಲಿ, ಆನೆಗಳು ಅನಿವಾರ್ಯವಾಗಿ ಮಾನವ ವಸತಿ ಪ್ರದೇಶಗಳಿಗೆ ಕಾಲಿಡುತ್ತಿವೆ. ಇದು ಸ್ಥಳೀಯ ಸಮುದಾಯಗಳು ಮತ್ತು ವನ್ಯಜೀವಿಗಳು ಇಬ್ಬರ ಮೇಲೆಯೂ ಗಂಭೀರ ಪರಿಣಾಮ ಬೀರುವ ಸಂಘರ್ಷಕ್ಕೆ ಕಾರಣವಾಗಿದೆ. 'ಕ್ರಾಸಿಂಗ್ ಪಾತ್ಸ್' ಚಿತ್ರವು ಈ ಸಂಘರ್ಷವನ್ನು ಹಾಗೂ ಮಾನವ ಮತ್ತು ಪ್ರಾಣಿಗಳು ಸಹಬಾಳ್ವೆ ನಡೆಸಲು ಕಂಡುಕೊಳ್ಳಬೇಕಾದ ಸುಸ್ಥಿರ ಮಾರ್ಗಗಳ ತುರ್ತು ಅಗತ್ಯವನ್ನು ಪರಿಶೀಲಿಸುತ್ತದೆ.

ಈ ಸಾಕ್ಷ್ಯಚಿತ್ರವು 'ಆ ರೋಚಾ ಇಂಡಿಯಾ' ಸಂಸ್ಥೆಯು 'ಕರ್ನಾಟಕ ಅರಣ್ಯ ಇಲಾಖೆ'ಯ ಸಹಯೋಗದೊಂದಿಗೆ ನಡೆಸುತ್ತಿರುವ 'ಪ್ರಾಜೆಕ್ಟ್ ಇಎಡಿಡಿಎಸ್' (ಆನೆಗಳ ಉಪಟಳ ತಡೆಯುವ ಶ್ವಾನ ದಳ) ಯೋಜನೆಯನ್ನು ಹಿಂಬಾಲಿಸುತ್ತದೆ. ಈ ಯೋಜನೆಯು ಸಂರಕ್ಷಣೆ ಮತ್ತು ಮುನ್ನೆಚ್ಚರಿಕಾ ಕ್ರಮಗಳ ಮೂಲಕ ಮಾನವ–ಆನೆ ಸಂಘರ್ಷವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. 'ಆ ರೋಚಾ ಇಂಡಿಯಾ' ತಂಡದ ಅವಿನಾಶ್ ಕೃಷ್ಣನ್ ಅವರು ಈ ಇಎಡಿಡಿಎಸ್ ಕಾರ್ಯಕ್ರಮವನ್ನು ನಿಭಾಯಿಸುತ್ತಿದ್ದಾರೆ. 'ಗಂಧದ ಗುಡಿ' ಮತ್ತು '777 ಚಾರ್ಲಿ' ಚಿತ್ರಗಳಿಗೆ ಛಾಯಾಗ್ರಹಣ ಮಾಡಿರುವ ಪ್ರತೀಕ್ ಶೆಟ್ಟಿ ಅವರು ಈ ಚಿತ್ರಕ್ಕೂ ಛಾಯಾಗ್ರಹಣ ಮಾಡಿದ್ದಾರೆ.



ಯೋಜನೆಯೊಂದಿಗೆ ಕೈಜೋಡಿಸಿರುವ ಪ್ರಮುಖ ವ್ಯಕ್ತಿಗಳು: ಈಶ್ವರ್ ಬಿ. ಖಂಡ್ರೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು, ಕರ್ನಾಟಕ ಸರ್ಕಾರ

ಪುಷ್ಕರ್ ಕುಮಾರ್ – ಪಿಸಿಸಿಎಫ್ (PCCF)

ಮನೋಜ್ ರಾಜನ್ – ಯೋಜನಾ ಮುಖ್ಯಸ್ಥರು, ಪ್ರಾಜೆಕ್ಟ್ ಎಲಿಫೆಂಟ್

ಸೌರಭ್ ಕುಮಾರ್ – ಉಪ ಅರಣ್ಯ ಸಂರಕ್ಷಣಾಧಿಕಾರಿ (DCF), ಹಾಸನ

ಅವಿನಾಶ್ ಕೃಷ್ಣನ್ – ರಾಷ್ಟ್ರೀಯ ನಿರ್ದೇಶಕರು, ಆ ರೋಚಾ ಇಂಡಿಯಾ

ಹವಾಮಾನ ವೈಪರೀತ್ಯ, ಪರಿಸರ ನಾಶ ಮತ್ತು ನಮ್ಮ ಸುತ್ತಲೂ ಹೆಚ್ಚುತ್ತಿರುವ ಹಿಂಸಾಚಾರದ ಈ ಕಾಲಘಟ್ಟದಲ್ಲಿ, 'ಕ್ರಾಸಿಂಗ್ ಪಾತ್ಸ್' ಅತ್ಯಂತ ತುರ್ತಾಗಿ ಗಮನಹರಿಸಬೇಕಾದ ಶಾಂತಿಯುತ ಸಂಘರ್ಷದ ಕಡೆಗೆ ಬೆಳಕು ಚೆಲ್ಲಲು ಹಾಗೂ ಸಹಬಾಳ್ವೆಯ ಸಾಧ್ಯತೆಯನ್ನು ಎತ್ತಿಹಿಡಿಯಲು ಆಶಿಸುತ್ತದೆ.

## ಅಯೋಗ್ಯನ ಜತೆ ಕ್ರೇಜಿ ಕಮಾಲ್

ಸತೀಶ್ ನೀನಾಸಂ, ರಚಿತಾ ರಾಮ್ ಜೋಡಿಯ ಅಯೋಗ್ಯ 2 ಚಿತ್ರ ಕಳೆದ ವಾರ ತೆರೆಕಂಡಿತ್ತು. ಭರ್ಜರಿ ಓಪನಿಂಗ್ ಪಡೆದುಕೊಳ್ಳುವ ಮೂಲಕ ಬಾಕ್ಸಾಫೀಸ್‌ನಲ್ಲಿ ಜೋರಾಗಿಯೇ ಸದ್ದು ಮಾಡುತ್ತಿರುವ ಅಯೋಗ್ಯ ಬೊಕ್ಕಸಕ್ಕೆ ಆರೂವರೆ ಕೋಟಿ (ಗ್ರಾಸ್) ಬಂದಿದೆ. ಅದೂ ಕೇವಲ ಮೂರೇ ದಿನಗಳಲ್ಲಿ ಎಂಬುದು ವಿಶೇಷ.



ಶುಕ್ರವಾರದಿಂದಲೇ ತುಂಬಿದ ಪ್ರದರ್ಶನಗಳಲ್ಲಿ ಆಟ ಶುರು ಮಾಡಿದ ಅಯೋಗ್ಯನಿಗೆ ರಾಜ್ಯಾದ್ಯಂತ ಬಂಪರ್ ಕಲೆಕ್ಷನ್ ಕಲೆ ಹಾಕಿರುವುದು ಖುಷಿಯ ವಿಷಯ.

ಜನರು ಥಿಯೇಟರ್‌ನತ್ತ ಮುಖವೇ ಹಾಕುತ್ತಿಲ್ಲ ಎಂಬುವ ಹೊತ್ತಿನಲ್ಲಿ ಕೇವಲ ಮೂರು ದಿನಗಳಲ್ಲಿ ಕೋಟ್ಯಂತರ ರೂ. ಕಮಾಲ್ ಮಾಡಿದೆ. ಒಟ್ಟಾರೆ ಮೂರು ದಿನಗಳಲ್ಲಿ 2200 ಪ್ರದರ್ಶನ ಕಂಡಿರುವ ಈ ಸಿನಿಮಾ, ಸುಮಾರು 4 ಲಕ್ಷದಷ್ಟು ಟಿಕೆಟ್‌ಗಳು ಬಿಕರಿಯಾಗಿವೆ. ಆ ಪೈಕಿ ಅಂದಾಜು 500 ಪ್ರದರ್ಶನಗಳು ಹೌಸ್‌ಫುಲ್ ಕಂಡಿವೆ, 1600ಕ್ಕೂ ಹೆಚ್ಚು ಶೋಗಳು ಫಾಸ್ಟ್ ಫಿಲ್ಲಿಂಗ್ ಆಗಿವೆ ಎಂಬುದು ಚಿತ್ರತಂಡದ ಒಪ್ಪಿಸುವ ಲೆಕ್ಕಾಚಾರ.

ವಾರಾಂತ್ಯದ ಜತೆಗೆ ಮಾಮೂಲಿ ದಿನಗಳಲ್ಲೂ ಉತ್ತಮ ಪ್ರದರ್ಶನ ಕಾಣುತ್ತಿದ್ದು, ಸಾಕಷ್ಟು ಮಲ್ಟಿಪ್ಲೆಕ್ಸ್ ಹಾಗೂ ಸಿಂಗಲ್ ಸ್ಕ್ರೀನ್‌ಗಳಲ್ಲಿ ಅರ್ಧಕ್ಕಿಂತ ಹೆಚ್ಚು ಜನ ಸಿನಿಮಾ ನೋಡಿ ಎಂಜಾಯ್ ಮಾಡುತ್ತಿದ್ದಾರೆ. ಅಲ್ಲದೇ ಮೂರು ದಿನಗಳ ಭರ್ಜರಿ ಪ್ರದರ್ಶನ ಕಂಡಿರುವ ಈ ಚಿತ್ರಕ್ಕೆ ನಾಲ್ಕನೇ ದಿನಕ್ಕೆ 20ಕ್ಕೂ ಹೆಚ್ಚು ಸ್ಕ್ರೀನ್‌ಗಳು ಹೆಚ್ಚಾಗಿರುವುದು ನಿಜವಾದ ಗೆಲುವಿನ ಸಂಕೇತ ಎನ್ನುತ್ತಾರೆ ನಿರ್ದೇಶಕ ಮಹೇಶ್ ಕುಮಾರ್.

**ಅಯೋಗ್ಯನಿಗೆ ಕ್ರೇಜಿಸ್ಟಾರ್ ಸಾಥ್:** ಸಿನಿಮಾ ಶುರುವಾದಾಗಿನಿಂದಲೂ ಈ ಸಿನಿಮಾದಲ್ಲಿ ರವಿಚಂದ್ರನ್ ನಟಿಸಿದ್ದಾರೆ ಎಂಬುದನ್ನು ಗೌಪ್ಯವಾಗಿರಿಸಿದ್ದ ಚಿತ್ರತಂಡ, ಚಿತ್ರಮಂದಿರದಲ್ಲಿ ಸಿನಿಮಾ ನೋಡುವ ಪ್ರೇಕ್ಷಕರಿಗೆ ಸರ್ಪ್ರೈಸ್ ನೀಡಿದೆ. ಈ ಚಿತ್ರದಲ್ಲಿ ಸತೀಶ್ ತಂದೆಯಾಗಿ ನಟಿಸಿರುವ ಕ್ರೇಜಿಸ್ಟಾರ್, ಸಿನಿಮಾದ ಪ್ರಮುಖ ಭಾಗದಲ್ಲಿ ಬಂದು ಅಚ್ಚರಿ ನೀಡುತ್ತಾರೆ.

**ಕಚಗುಳಿಯಿಡುವ ಕಾಮಿಡಿ:** ಸಾಧು ಕೋಕಿಲ, ತಬಲ ನಾಣಿ, ಸುಂದರ್ ರಾಜ್, ಶಿವರಾಜ್ ಕೆ.ಆರ್.ಪೇಟೆ, ಗಿಲ್ಲಿ ನಟ, ಅರುಣಾ ಬಾಲರಾಜ್, ಗಿರಿ ಶಿವಣ್ಣ ಹಾಗೂ ಮಂಜು ಪಾವಗಡ ಸೇರಿದಂತೆ ಅನೇಕರು ನಕ್ಕು ನಲಿಸುತ್ತಾರೆ. ಅದರಲ್ಲೂ ಸಾಧುಕೋಕಿಲ ಕಾಮಿಡಿಗೆ ಪ್ರೇಕ್ಷಕರು ಶಿಳ್ಳೆ, ಚಪ್ಪಾಳೆ ಮೂಲಕ ಸಂತಸ ವ್ಯಕ್ತಪಡಿಸುತ್ತಿದ್ದಾರೆ. ನಟಿ ಪ್ರಜ್ಞಾ ಹಾಡೊಂದರಲ್ಲಿ ಗ್ಲಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ.

ರಾಜ್ಯಾದ್ಯಂತ ಅಯೋಗ್ಯನ ಭರ್ಜರಿ ಪ್ರದರ್ಶನ

ಇದರ ಜತೆಗೆ ಸತೀಶ್–ರವಿಶಂಕರ್ ಜುಗಲ್‌ಬಂದಿ ಸಹ ಚಿತ್ರದ ಹೈಲೈಟ್.

ಎಸ್.ವಿ.ಸಿ ಫಿಲಂಸ್ ಬ್ಯಾನರ್ ಅಡಿಯಲ್ಲಿ ಎಂ.ಮುನೇಗೌಡ ನಿರ್ಮಿಸಿದ್ದಾರೆ. ಅರ್ಜುನ್ ಜನ್ಯ ಸಂಗೀತ ಸಂಯೋಜನೆ, ಬಹದ್ದೂರ್ ಚೇತನ್ ಕುಮಾರ್ ಸಾಹಿತ್ಯ, ಮಾಸ್ತಿ ಉಪ್ಪಾರಹಳ್ಳಿ ಸಂಭಾಷಣೆ, ಶಾಖಾಹಾರಿ ಖ್ಯಾತಿಯ ವಿಶ್ವಜಿತ್ ರಾವ್ ಈ ಚಿತ್ರದ ಕ್ಯಾಮೆರಾಮನ್. ಸುರೇಶ್ ಆರ್ಮುಗಂ ಸಂಕಲನ, ಅರ್ಜುನ್ ರಾಜ್ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ.

## ಶ್ರೀಮುರಳಿ ಅಭಿನಯದ `ಉಗ್ರಾಯುಧಮ್' ಚಿತ್ರದ ಚಿತ್ರೀಕರಣ

ಜಯರಾಮ್ ದೇವಸಮುದ್ರ ನಿರ್ಮಾಣದ ಶ್ರೀಮುರಳಿ ನಾಯಕರಾಗಿ ನಟಿಸುತ್ತಿರುವ ಅದ್ದೂರಿ ತಾರಾಬಳಗದ, "ಉಗ್ರಾಯುಧಮ್" ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ.

ಪುನೀತ್ ರುದ್ರನಾಗ್ ನಿರ್ದೇಶಿಸುತ್ತಿದ್ದಾರೆ.

700 ವರ್ಷಗಳ ಹಿಂದಿನ ಪಿರಿಯಾಡಿಕ್ ಡ್ರಾಮ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಬೆಂಗಳೂರಿನ ಸ್ಟುಡಿಯೋದಲ್ಲಿ ಚಿತ್ರೀಕರಣ ನಡೆಯುತ್ತಿದೆ. ಕಲಾ ನಿರ್ದೇಶಕ ಅಮರ್ ಅದ್ದೂರಿ ಸೆಟ್ ನಿರ್ಮಾಣ ಮಾಡಿದ್ದಾರೆ. ಇದೊಂದು ಚಾರಿತ್ರಿಕ ಚಿತ್ರವಾಗಿರುವುದರಿಂದ ಹೆಚ್ಚಿನ ಚಿತ್ರೀಕರಣ ಹೊರಾಂಗಣದಲ್ಲೆ ನಡೆಯುತ್ತದೆ. ಪ್ರಸ್ತುತ ಎಲ್ಲಾ ಕಡೆ ಮಳೆಯಾಗುತ್ತಿರುವುದರಿಂದ ಸದ್ಯ ಬೆಂಗಳೂರಿನಲ್ಲಿ ಒಳಾಂಗಣದ ಚಿತ್ರೀಕರಣ ಮಾಡಲಾಗುತ್ತಿದೆ. ಮಳೆಗಾಲದ ನಂತರ ಚಿತ್ರತಂಡ ತೀರ್ಥಹಳ್ಳಿಗೆ ಪಯಣಿಸಲಿದೆ. ಬೆಂಗಳೂರಿನ ಚಿತ್ರೀಕರಣದಲ್ಲಿ ಶ್ರೀಮುರಳಿ ಅವರು ಪಾಲ್ಗೊಂಡಿದ್ದಾರೆ.

ಮೊದಲ ನಿರ್ದೇಶನದಲ್ಲಿರುವ ಪುನೀತ್ ರುದ್ರಅವರೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಮಂಜು ಅಥರ್ವ ಕಥೆ, ಚಿತ್ರಕಥೆ ರಚನೆಯಲ್ಲಿ ನಿರ್ದೇಶಕರಿಗೆ ಸಾಥ್ ನೀಡಿದ್ದಾರೆ. ಸಂಕೇತ್ ಛಾಯಾಗ್ರಾಹಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಹಿಂದೆ ಮಾಡಿರದ ಪಾತ್ರದಲ್ಲಿ ಶ್ರೀಮುರಳಿ ಕಾಣಿಸಿಕೊಳ್ಳುತ್ತಿದ್ದಾರೆ. ನಾಯಕಿ ಸೇರಿದಂತೆ ಉಳಿದ ತಾರಾಬಳಗದ ಕುರಿತು ಮಾಹಿತಿ ಸದ್ಯದಲ್ಲೇ ತಿಳಿಯಲಿದೆ..



## ಬೆಂಟ್ಲಿ ಟ್ರೇಲರ್ ರಿಲೀಸ್

ನಟ ಸಂತೋಷ್ ಬಾಲರಾಜ್ ನಟಿಸಿ, ನಿರ್ದೇಶಿಸಿದ್ದ ಬೆಂಟ್ಲಿ (Bentlee) ಸಿನಿಮಾದ ಅಧಿಕೃತ ಟ್ರೇಲರ್ ಬಿಡುಗಡೆಯಾಗಿದೆ.

ಸಿನಿ ಎಂಟರ್‌ಪ್ರೈಸಸ್ ಬ್ಯಾನರ್ ಅಡಿಯಲ್ಲಿ ಶ್ವೇತಾ ಬಾಲರಾಜು ಈ ಚಿತ್ರವನ್ನು ನಿರ್ಮಿಸಿದ್ದು, ಸಂತೋಷ್ ಬಾಲರಾಜು ಅವರೊಂದಿಗೆ ಸಿಮ್ರಾನ್ ನಾಟೇಕರ್, ಶ್ರುತಿ, ಚರಣ್‌ರಾಜ್, ರಾಜಾ ಬಲವಾಡಿ ಮುಂತಾದವರು ನಟಿಸಿದ್ದಾರೆ.

ಈ ಚಿತ್ರಕ್ಕೆ ಹಿನ್ನೆಲೆ ಧ್ವನಿ ನೀಡಿರುವ ನಟ ಲೂಸ್ ಮಾದ ಯೋಗಿ ಮಾತನಾಡಿ, "ಈ ಕಾರ್ಯಕ್ರಮದಲ್ಲಿ ಖುಷಿ ಆಗ್ತಿದೆ ಅಂತಾನೂ ಹೇಳೋಕೆ ಆಗಲ್ಲ, ಬೇಜಾರಾಗ್ತಿದೆ ಅಂತಾನೂ ಹೇಳೋಕೆ ಆಗಲ್ಲ. ನಮ್ಮ ನಾಯಕ ನಟ ತೀರಿಕೊಂಡು ಒಂದು ವರ್ಷ ಆಯ್ತು ಅನ್ನುವುದು ನೆನಪಿನಲ್ಲಿ ಇರುವ ವಿಷಯ ಅಷ್ಟೇ. ಸಂತು ಎಷ್ಟು ಒಳ್ಳೆ ಸಿನಿಮಾಗಳು ಕೊಟ್ರೋ, ಎಷ್ಟು ಸಂಪಾದನೆ ಮಾಡಿದ್ರೋ ಅದೆಲ್ಲ ಒಂದು ಕಡೆಯಾದರೆ, ಅವರು ಎಷ್ಟೊಂದು ಜನ ಒಳ್ಳೆಯ ಸ್ನೇಹಿತರನ್ನ ಸಂಪಾದನೆ ಮಾಡಿದ್ದಾರೆ ಅನ್ನೋದಕ್ಕೆ ಈ ಈವೆಂಟ್ ಸಾಕ್ಷಿ" ಎಂದರು.

"ಸಂತೋಷ್‌ಗೆ ಸಿನಿಮಾಗಳ ಬಗ್ಗೆ ತುಂಬಾ ಆಸೆ, ಕನಸುಗಳಿದ್ದವು. ಅವನನ್ನು ತುಂಬಾ ಬೇಗ ಕಳೆದುಕೊಂಡೆವು. ನಾವು ಸಿಕ್ಕಾಗ ಈ ಸಿನಿಮಾ ಬಗ್ಗೆ ಮಾತಾಡ್ತಿದ್ವಿ, ಆಗ ಇದಕ್ಕೆ ಬೇರೆ ಹೆಸರಿತ್ತು. ನಾನು ಈ ಸಿನಿಮಾಗೆ ಡಬ್ ಮಾಡ್ತೀನಿ ಅನ್ನೋ ಕಲ್ಪನೆಯೂ ನನಗಿರಲಿಲ್ಲ, ಆದರೆ ಆ ಪರಿಸ್ಥಿತಿ ಬಂತು. ಸಿನಿಮಾ ಆದಷ್ಟು ಬೇಗ ರಿಲೀಸ್ ಆಗಲಿ, ನಾವೆಲ್ಲರೂ ಥಿಯೇಟರ್‌ಗೆ ಬಂದು ನೋಡಿ ಈ ಸಿನಿಮಾನ ಗೆಲ್ಲಿಸೋಣ" ಎಂದು ವಿನಂತಿಸಿದರು.



ತಾನೇ ನಿರ್ದೇಶಿಸಿ, ನಟಿಸಿದ ಚಿತ್ರದ ಸಂಭ್ರಮ ನೋಡಲು ಸಂತೋಷ್ ಇಲ್ಲ

ಚಿತ್ರದ ಕುರಿತು ಮಾತನಾಡಿದ ನಟ ಪ್ರಮೋದ್ ಶೆಟ್ಟಿ, "ತಂದೆಯವರು ಹೋದ ಮೇಲೂ ನಿರ್ಮಾಣ ಸಂಸ್ಥೆಯನ್ನು ಕಾಪಾಡಿಕೊಂಡು, ತಾನೇ ನಿರ್ದೇಶನ ಹಾಗೂ ನಟನೆ ಮಾಡಿರುವ ಸಿನಿಮಾದ ಸಂಭ್ರಮವನ್ನು ನೋಡಲು ಸಂತೋಷ್ ಇಲ್ಲ ಅನ್ನುವುದೇ ದೊಡ್ಡ ಬೇಜಾರು. ನಾವು ಭೇಟಿಯಾದಾಗಲೆಲ್ಲಾ ಸಿನಿಮಾರಂಗಕ್ಕೆ ಇನ್ನು ಹೆಚ್ಚಿನ ಮಟ್ಟದ ಒಳ್ಳೆಯ ಸಿನಿಮಾಗಳನ್ನು ಕೊಡುವ ಯೋಚನೆಗಳನ್ನೇ ಹಂಚಿಕೊಳ್ಳುತ್ತಿದ್ದರು. ಅಂತಹ ವ್ಯಕ್ತಿಯನ್ನು ನಾವು ಕಳೆದುಕೊಂಡಿದ್ದೇವೆ" ಎಂದು ತೀವ್ರ ಕಂಬನಿ ಮಿಡಿದರು.

"ನಾವು ಕೆಲವೇ ಕೆಲವು ಕಾರ್ಯಕ್ರಮಗಳಲ್ಲಿ ಭೇಟಿಯಾಗಿದ್ದರೂ, ಸಿಕ್ಕಾಗಲೆಲ್ಲಾ ಸಿನಿಮಾರಂಗವನ್ನು ಇನ್ನು ಹೆಚ್ಚಿನ ಮಟ್ಟಕ್ಕೆ ಕೊಂಡೊಯ್ಯುವ ಬಗ್ಗೆ, ದೊಡ್ಡ ಸಿನಿಮಾಗಳನ್ನು ನಿರ್ಮಾಣ ಮಾಡುವ ಬಗ್ಗೆಯೇ ಚರ್ಚಿಸುತ್ತಿದ್ದರು. ಅಂತಹ ಉನ್ನತ ಯೋಚನೆಗಳಿದ್ದ ಒಳ್ಳೆಯ ವ್ಯಕ್ತಿಯನ್ನು ನಾವು ಕಳೆದುಕೊಂಡಿದ್ದೇವೆ" ಎಂದು ಪ್ರಮೋದ್ ಶೆಟ್ಟಿ ವಿಷಾದಿಸಿದರು.

ಬೆಂಟ್ಲಿ ಚಿತ್ರಕ್ಕೆ ಜೂಡಾ ಸ್ಯಾಂಡಿ ಹಾಡುಗಳನ್ನು ಸಂಯೋಜಿಸಿದ್ದರೆ, ರವಿ ವರ್ಮ ಹಿನ್ನೆಲೆ ಸಂಗೀತ ಒದಗಿಸಿದ್ದಾರೆ. ಕೆ.ಕೆ. ಹಾಗೂ ಗುಂಡ್ಲುಪೇಟೆ ಸುರೇಶ್ ಜಂಟಿಯಾಗಿ ಛಾಯಾಗ್ರಹಣ ನಿರ್ವಹಿಸಿದ್ದು, ಉಮೇಶ್ ಅವರ ಸಂಕಲನ ಈ ಚಿತ್ರಕ್ಕಿದೆ. ಇನ್ನು ಈ ಸಿನಿಮಾದ ಆಡಿಯೋ ಹಕ್ಕುಗಳನ್ನು ಝಂಕರ್ ಮ್ಯೂಸಿಕ್ ಸಂಸ್ಥೆ ಪಡೆದುಕೊಂಡಿದೆ

## "ಮಹಾನ್" ಫಸ್ಟ್ ಲುಕ್ ಅನಾವರಣ

ಪಿ.ಸಿ.ಶೇಖರ್ ನಿರ್ದೇಶನದ, ಆಕಾಶ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದೂರು ಅವರು ನಿರ್ಮಿಸುತ್ತಿರುವ ಹಾಗೂ ಶಿವರಾಜ್ ಕುಮಾರ್, ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ "ಮಹಾನ್" ಚಿತ್ರದ ಫಸ್ಟ್ ಲುಕ್ ಬಿಡುಗಡೆ ಮಾಡಲಾಗಿದೆ.

ಪಿ.ಸಿ.ಶೇಖರ್ ನಿರ್ದೇಶನದಲ್ಲಿ ನಟಿಸಬೇಕೆಂಬುದು ನನ್ನ ಬಹುದಿನಗಳ ಆಸೆಯಾಗಿತ್ತು. ಅದು ಈ ಚಿತ್ರದ ಮೂಲಕ ಈಡೇರಿದೆ. ಇನ್ನೂ, ಪ್ರಕಾಶ್ ಬುದೂರು ಅವರ ನಿರ್ಮಾಣ ಅಚ್ಚುಕಟ್ಟಾಗಿದೆ. ನಾನು ನೋಡಿದ ಅತ್ಯುತ್ತಮ ನಿರ್ಮಾಣ ಸಂಸ್ಥೆ ಇದು. ಪಿ.ಸಿ.ಶೇಖರ್ ಅವರು ಈ ಚಿತ್ರದ ಕಥೆ ಹೇಳುತ್ತಿದ್ದಾಗಲೇ ನನ್ನ ಪಾತ್ರ ಹಾಗೂ ಕಥೆ ಬಹಳ ಇಷ್ಟವಾಯಿತು. ನಾನು ಈ ಚಿತ್ರದಲ್ಲಿ ವಿದ್ಯಾವಂತ ಹೆಣ್ಣುಮಗಳ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ನಗರದಲ್ಲಿ ವಿದ್ಯಾಭ್ಯಾಸ ಮುಗಿಸಿಕೊಂಡು ಹಳ್ಳಿಯಲ್ಲಿ ರೈತರು ಕಷ್ಟಗಳಿಗೆ ಧ್ವನಿಯಾಗುವ ಹೆಣ್ಣುಮಗಳು. ನಮ್ಮೆಲ್ಲರ ಮೆಚ್ಚಿನ ಶಿವಣ್ಣ, ವಿಜಯ ರಾಘವೇಂದ್ರ, ರಾಧಿಕಾ ನಾರಾಯಣ್, ಮಿತ್ರ ಹೀಗೆ ಅನೇಕ ಹೆಸರಾಂತ ಕಲಾವಿದರು ಅಭಿನಯಿಸಿರುವ ಈ ಚಿತ್ರದಲ್ಲಿ ಅಭಿನಯಿಸಿರುವುದು ನನಗೆ ಬಹಳ ಖುಷಿಯಾಗಿದೆ ಎನ್ನುತ್ತಾರೆ ನಟಿ ನಮ್ರತಾ ಗೌಡ.

ಮತ್ತೊಂದು ಪ್ರಮುಖ ಪಾತ್ರದಲ್ಲಿ ನಟಿಸುತ್ತಿರುವ ನಟ ಕಿರಣ್ ಶ್ರೀನಿವಾಸ್ ಹೀಗೆ ಹೇಳಿದ್ದಾರೆ.. "ಮಹಾನ್" ಚಿತ್ರದ ನನ್ನ ಪಾತ್ರದ ಫಸ್ಟ್ ಲುಕ್ ಅನಾವರಣವಾಗಿದೆ. ಹಳ್ಳಿಯಿಂದ ನಗರಕ್ಕೆ ಬಂದು ವಿದ್ಯಾವಂತನಾದ ಹುಡುಗನಿಗೆ ಉದ್ಯೋಗಕ್ಕಾಗಿ ವಿದೇಶಕ್ಕೆ ಹೋಗುವ ಹಂಬಲ. ಆದರೆ ಅವನು ಹಳ್ಳಿಗೆ ಬಂದು ಏನು ಮಾಡುತ್ತಾನೆ ಎಂಬುದೆ ನನ್ನ ಪಾತ್ರದ ಕಥಾ ಸಾರಾಂಶ. ಸಮಾಜಕ್ಕೆ ಒಂದೊಳ್ಳೆ ಸಂದೇಶವಿರುವ ಚಿತ್ರದಲ್ಲಿ ಅಭಿನಯಿಸಿರುವುದು ಬಹಳ ಸಂತೋಷವಾಗಿದೆ. ಹಿರಿಯ ಕಲಾವಿದರ ಜೊತೆಗೆ ಅಭಿನಯಿಸಿ ನನಗೆ ಬಹಳ ಖುಷಿಯಾಗಿದೆ ಎಂದಿದ್ದಾರೆ.



ನಮ್ಮ "ಮಹಾನ್" ಚಿತ್ರದಲ್ಲಿ ಕನ್ನಡದ "ಮಹಾನ್" ಕಲಾವಿದರು ಅಭಿನಯಿಸಿರುವುದು ನಿಜಕ್ಕೂ ಸಂತೋಷವಾಗಿದೆ. ನಮ್ಮ ಚಿತ್ರದ ಪ್ರಮುಖ ಪಾತ್ರದಲ್ಲಿ ಅಭಿನಯಿಸಿರುವ ನಮ್ರತಾ ಗೌಡ ಹಾಗೂ ಕಿರಣ್ ಶ್ರೀನಿವಾಸ್ ಅವರ ಫಸ್ಟ್ ಲುಕ್ ಅನಾವರಣ ಮಾಡಿದ್ದೇವೆ. ಈವರೆಗೂ ಮಾಡಿರದ ಪಾತ್ರಗಳಲ್ಲಿ ನಮ್ರತಾ ಗೌಡ ಹಾಗೂ ಕಿರಣ್ ಶ್ರೀನಿವಾಸ್ "ಮಹಾನ್" ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ ಎಂದು ನಿರ್ದೇಶಕ ಪಿ.ಸಿ.ಶೇಖರ್ ತಿಳಿಸಿದ್ದಾರೆ.

ನಮ್ಮ ಆಕಾಶ ಪಿಕ್ಚರ್ಸ್ ಸಂಸ್ಥೆಯ ಮೊದಲ ನಿರ್ಮಾಣದ "ಮಹಾನ್", ಅದ್ದೂರಿ ತಾರಾಬಳಗ ಹಾಗೂ ತಾಂತ್ರಿಕವರ್ಗ ಹೊಂದಿರುವ ಚಿತ್ರ. ಇದೊಂದು ರೈತರ ಕುರಿತಾದ ಹಾಗೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಿತ್ರವೂ ಹೌದು. ವಿಜಯ ರಾಘವೇಂದ್ರ ನಮ್ಮ ಚಿತ್ರದ ನಾಯಕರಾಗಿ ನಟಿಸಿದ್ದಾರೆ. ವಿಶೇಷಪಾತ್ರದಲ್ಲಿ ಶಿವರಾಜಕುಮಾರ್ ಅವರು ಅಭಿನಯಿಸಿದ್ದಾರೆ. ಅಷ್ಟೇ ಅಲ್ಲದೆ ಸಾಕಷ್ಟು ಅನುಭವಿ ಹಾಗೂ ಹೆಸರಾಂತ ಕಲಾವಿದರು ತಾರಾಬಳಗದಲ್ಲಿದ್ದಾರೆ.

## ವಿಶ್ವನಾಥ್ ಅಂಡ್ ಸನ್ ಆಗಸ್ಟ್ 14ಕ್ಕೆ ತೆರೆಗೆ

ಸೂರ್ಯ ಮುಖ್ಯಭೂಮಿಕೆಯಲ್ಲಿ ನಟಿಸಿರುವ ವಿಶ್ವನಾಥ್ ಅಂಡ್ ಸನ್ಸ್ ಚಿತ್ರವನ್ನು ನಿರ್ದೇಶಕ ವೆಂಕಿ ಅಟ್ಲೂರಿ ನಿರ್ದೇಶಿಸಿದ್ದಾರೆ. ಸಿತಾರ ಎಂಟರ್‌ಟೈನ್‌ಮೆಂಟ್ಸ್, ಫಾರ್ಚೂನ್ ಫೋರ್ ಸಿನಿಮಾಸ್ ಹಾಗೂ ಶ್ರೀಕರ ಸ್ಟುಡಿಯೋಸ್ ಸಂಸ್ಥೆಗಳ ನಿರ್ಮಾಣದಲ್ಲಿ ಮೂಡಿಬಂದಿರುವ ಈ ಚಿತ್ರವು ಆಗಸ್ಟ್ 14 ರಂದು ಬಿಡುಗಡೆಯಾಗುತ್ತಿದೆ.

ಚಿತ್ರದಲ್ಲಿ ಸೂರ್ಯ, ಮಮಿತಾ ಬೈಜು, ರಾಧಿಕಾ ಶರತ್‌ಕುಮಾರ್, ರವೀನಾ ಟ0ಡನ್ ಅಭಿನಯಿಸಿದ್ದಾರೆ. ಜಿ.ವಿ. ಪ್ರಕಾಶ್ ಕುಮಾರ್ ಸಂಗೀತ ನಿರ್ದೇಶನ, ನಿಮಿಷ್ ರವಿ ಛಾಯಾಗ್ರಹಣ ಹಾಗೂ ನವೀನ್ ನೂಲಿ ಸಂಕಲನ ಚಿತ್ರಕ್ಕಿದೆ.

ಕುಟುಂಬದ ಭಾವನೆಗಳು, ಸಂಬಂಧಗಳ ಮಹತ್ವ ಮತ್ತು ತಲೆಮಾರುಗಳ ನಡುವಿನ ಬಾಂಧವ್ಯವನ್ನು ಮನಮುಟ್ಟುವ ರೀತಿಯಲ್ಲಿ ಹೇಳುವ ಈ ಚಿತ್ರವು ತನ್ನ ಶೀರ್ಷಿಕೆ, ಟೀಸರ್ ಹಾಗೂ ಹಾಡುಗಳ ಮೂಲಕ ಈಗಾಗಲೇ ಸಿನಿಪ್ರಿಯರ ಗಮನ ಸೆಳೆದಿದೆ. ಬಿಡುಗಡೆಗೂ ಮುನ್ನವೇ ಚಿತ್ರದ ಬಗ್ಗೆ ಸಾಕಷ್ಟು ನಿರೀಕ್ಷೆ ಮೂಡಿದೆ.

ಇದೀಗ ವಿಕೆ ಫಿಲ್ಮ್ಸ್ ಬಿಡುಗಡೆಯಾಗುತ್ತಿರುವ ವಿಶ್ವನಾಥ್ ಅಂಡ್ ಸನ್ಸ್?, ನಿರೀಕ್ಷೆ ಮೂಡಿಸಿದೆ



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,